24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 122 | ನವದೆಹಲಿ | ಬೆಲೆ ₹10 | ಅಕ್ಟೋಬರ್, 28, 2026, ಬುಧವಾರ




ಶ್ರೀ ಡಿ.ಕೆ. ಶಿವಕುಮಾರ್
ಸನ್ಮಾನ್ಯ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ





ಸಮಾಜ ಕಲ್ಯಾಣ ಇಲಾಖೆ

ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಒಂದು ಉದ್ಯಮ) (BJR-LIDKAR)



ಡಾ.ಜಿ. ಪರಮೇಶ್ವರ
ಮಾನ್ಯ ಉಪ ಮುಖ್ಯಮಂತ್ರಿಗಳು
ಕರ್ನಾಟಕ ಸರ್ಕಾರ

## ಲಿಡ್‌ಕರ್ ಸುವರ್ಣ ಮಹೋತ್ಸವದ ಸಂಭ್ರಮ

28-10-1976 ರಂದು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಯಡಿ "ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ (LIDKAR)" ವಾಗಿ ಸ್ಥಾಪಿತಗೊಂಡ ಸಂಸ್ಥೆ, 2010 ರಿಂದ "ಡಾ. ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತ"ವಾಗಿ, ಮರುನಾಮಕರಣಗೊಂಡು 2011 ರಿಂದ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ, ಕಾರ್ಯ ನಿರ್ವಹಿಸುತ್ತಿದ್ದು, 28-10-2026 ರಂದು 50 ವರ್ಷಗಳನ್ನು ಪೂರೈಸುತ್ತಿದೆ.

ಚರ್ಮ ಕುಶಲಕರ್ಮಿಗಳ ಅಭಿವೃದ್ಧಿ, ಪರಂಪರೆ, ಕೌಶಲ್ಯ, ಸ್ವಾವಲಂಬನೆ ಮತ್ತು ಸಾಧನೆಗಳಿಗೆ ಸಾಕ್ಷಿಯಾದ ಈ ಐದು ದಶಕಗಳ ಸಾರ್ಥಕ ಪಯಣವೇ - "ಸುವರ್ಣ ಹೆಜ್ಜೆಗಳ ಸಂಭ್ರಮ."



ಸನ್ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಡಿ.ಕೆ. ಶಿವಕುಮಾರ್ ರವರು ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಶ್ರೀ ಕೆ.ಹೆಚ್. ಮುನಿಯಪ್ಪ ರವರನ್ನು ಅಭಿನಂದಿಸುತ್ತಿರುವುದು.

50
LIDKAR
ರ ಸಂಭ್ರಮ ಸುವರ್ಣ ಮಹೋತ್ಸವ

## ಲಿಡ್‌ಕರ್

1976-2026

**50 ವರ್ಷಗಳ ಸಾರ್ಥಕ ಪಯಣ**

**ಚರ್ಮ ಕರಕುಶಲತೆಯ ಸುವರ್ಣಯಾನ**

ಪರಂಪರೆ | ಕೌಶಲ್ಯ | ಗುಣಮಟ್ಟ | ನಂಬಿಕೆ









## ಲಿಡ್‌ಕರ್

*ನಂಬಿಕೆ. ನಿರಂತರ.*

**ಹೊಸ ಸ್ಪರ್ಶ ಹೊಸತನದೊಂದಿಗೆ ಲಿಡ್‌ಕರ್ ಅಪ್ಪಟ ಚರ್ಮೋತ್ಪನ್ನಗಳಿಗೆ**
**50 ವರ್ಷಗಳ ನಂಬಿಕೆ ನಿರಂತರ, ಪರಂಪರೆಯಿಂದ ಪ್ರಗತಿಯಡೆಗೆ**

**ಲಿಡ್‌ಕರ್ ಉತ್ಪನ್ನಗಳನ್ನು ಖರೀದಿಸಿ, ಚರ್ಮಕುಶಲಕರ್ಮಿಗಳನ್ನು ಪ್ರೋತ್ಸಾಹಿಸಿ**



ಶ್ರೀ ಕೆ.ಹೆಚ್. ಮುನಿಯಪ್ಪ, ಮಾನ್ಯ ಸಮಾಜ ಕಲ್ಯಾಣ ಸಚಿವರು ನಿಗಮದ ಕಾರ್ಯಕ್ರಮಕ್ಕೆ ಆಗಮಿಸಿದಾಗ ಶ್ರೀ ಮುಂಡರಗಿ ನಾಗರಾಜ, ಅಧ್ಯಕ್ಷರು, ಬಿಜೆಆರ್ - ಲಿಡ್‌ಕರ್, ಸ್ವಾಗತ ಕೋರಿದರು.

www.lidkar.com, shop.lidkar.com

"ನಮ್ಮ ವೈವಿಧ್ಯಮಯ ಸಂಸ್ಕೃತಿ ಮತ್ತು ಪರಂಪರೆಯನ್ನು ಗೌರವಿಸುವುದು ಮತ್ತು ಕಾಪಾಡುವುದು"
-ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ.

ಡಾ. ಹೆಚ್. ನಟರಾಜ್
ವ್ಯವಸ್ಥಾಪಕ ನಿರ್ದೇಶಕರು, ಬಿ.ಜೆ.ಆರ್ - ಲಿಡ್‌ಕರ್

ನಾಗರಾಜ ಎನ್.ಎಂ., ಭಾ.ಆ.ಸೇ.,
ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ

ಕೆ.ಪಿ. ಮೋಹನ್‌ರಾಜ್, ಭಾ.ಆ.ಸೇ.,
ಸರ್ಕಾರದ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ

## ನಿತ್ಯ ಪಂಚಾಂಗ 28.10.2026 ಬುಧವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಬಹುಳ, ಬಿದಿಗೆ, ಕೃತ್ತಿಕ ನಕ್ಷತ್ರ, (ತದಿಗೆ) ಸಿಂದಗಿ ಬಿಂದಗಿ ಪೂಜೆ, ಚಾಮುಂಡೇಶ್ವರೀ ಶಯನೋತ್ಸವ, ಮಿಳಗಾತ್ರಿ ಜಾತ್ರೆ, ಮುದಿನೂರು ರಥ, ಇರಂಬಾವಿ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಬೆಂಗಳೂರಿನ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ: ಮುಖ್ಯಮಂತ್ರಿ

### ತಾರತಮ್ಯವಿಲ್ಲದೆ ಎಲ್ಲಾ ಕ್ಷೇತ್ರಗಳಿಗೆ ಅನುದಾನ

### 500 ಕಿ.ಮೀ ಹೊಸ ರಸ್ತೆ ಸಂಪರ್ಕ ನಿರ್ಮಾಣ



**ಬೆಂಗಳೂರು, ಅ.27:** ಬೆಂಗಳೂರು ನಗರದ ಸಂಚಾರ ವ್ಯವಸ್ಥೆಯನ್ನು ಸುಗಮಗೊಳಿಸಲು 40 ಕಿ.ಮೀ ಉದ್ದದ ದ್ವಿಪಥ ಸುರಂಗ ಮಾರ್ಗ, 120 ಕಿ.ಮೀ ಉದ್ದದ ಎತ್ತರಿಸಿದ ಕಾರಿಡಾರ್, 1500 ಕಿ.ಮೀ ಆರ್ಟಿಲರಿ ಮತ್ತು ಸಬ್ ಆರ್ಟಿಲರಿ ರಸ್ತೆಗಳ ಉನ್ನತೀಕರಣ ಕಾರ್ಯ ಕೈಗೊಳ್ಳಲಾಗಿದ್ದು, ಮೂಲಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲು ಸರ್ಕಾರ ಬದ್ಧವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ತಿಳಿಸಿದರು. ಅವರು ಮಂಗಳವಾರ ಅಧಿಕೃತ ನಿವಾಸ ಕೃಷ್ಣಾದಲ್ಲಿ ಬೆಂಗಳೂರು ನಗರ ವ್ಯಾಪ್ತಿಯ ವಿಧಾನಸಭಾ ಸದಸ್ಯರು ಹಾಗೂ ವಿಧಾನ ಪರಿಷತ್ ಸದಸ್ಯರೊಂದಿಗೆ ಸಭೆ ನಡೆಸಿದರು.

ದೇಶದ ಬೇರೆ ಪ್ರಮುಖ ನಗರಗಳಿಗೆ ಹೋಲಿಸಿದರೆ ಬೆಂಗಳೂರಿನ ಜನಸಂಖ್ಯಾ ದರ ಮತ್ತು ವಾಹನಗಳ ಹೆಚ್ಚಳ ದರ ಹೆಚ್ಚಿದೆ. ಆದರೆ ರಸ್ತೆಗಳ ಸಾಮರ್ಥ್ಯ ಬೇರೆ ನಗರಗಳಿಗಿಂತ ಕಡಿಮೆಯಿದೆ. ಈ ಹಿನ್ನೆಲೆಯಲ್ಲಿ ರಸ್ತೆ ನಿರ್ಮಾಣಕ್ಕೆ ಆದ್ಯತೆ ನೀಡಿದ್ದೇವೆ. ಸಂಚಾರ ವ್ಯವಸ್ಥೆ ಸುಗಮಗೊಳಿಸಲು 40 ಕಿ.ಮೀ ದ್ವಿಪಥ ಸುರಂಗ ನಿರ್ಮಾಣ, ಹೆಬ್ಬಾಳದಲ್ಲಿ 2ಕಿಮೀ ಅಲ್ಪದೂರದ ಸುರಂಗ ಕಾಮಗಾರಿ ಕೈಗೊಂಡಿದ್ದೇವೆ. ಇದರಲ್ಲಿ 16 .5 ಕಿಮೀ ಉತ್ತರ–ದಕ್ಷಿಣ ಕಾರಿಡಾರ್ ನಿರ್ಮಾಣಕ್ಕೆ 17,780 ಕೋಟಿ ರೂ. ವೆಚ್ಚವಾಗಲಿದ್ದು, ಸರ್ಕಾರ ಇದರಲ್ಲಿ 7ಸಾವಿರ ಕೋಟಿ ರೂ. ಬಂಡವಾಳ ತೊಡಗಿಸಲಿದೆ. 21 ಕಿ.ಮೀ ಉದ್ದದ ಪೂರ್ವ – ಪಶ್ಚಿಮ ಕಾರಿಡಾರ್‌ನಲ್ಲಿ ಎರಡು ಆಗಮನ ದ್ವಾರ ಇರಲಿದೆ ಎಂದರು. ರಾಷ್ಟ್ರೀಯ ಹೆದ್ದಾರಿ ಮಾನದಂಡದ ಪ್ರಕಾರ 23,165 ಕೋಟಿ ಬಂಡವಾಳ ವೆಚ್ಚದಲ್ಲಿ120 ಕಿಮೀ ಎತ್ತರಿಸಿದ ಕಾರಿಡಾರ್ ನಿರ್ಮಾಣ ಯೋಜನೆ ರೂಪಿಸಲಾಗಿದೆ. ಇದರಲ್ಲಿ ನಾಲ್ಕು ಕೆಟಗರಿ ಮಾಡಲಾಗಿದ್ದು, 10 ಕಿಮೀ ಕಡಿಮೆ ಇರುವ ಕಾರಿಡಾರ್‌ಗಳಲ್ಲಿ ಟೋಲ್ ಇರುವುದಿಲ್ಲ ಎಂದರು. ಬೆಂಗಳೂರು ನಗರದಲ್ಲಿ ಸುಮಾರು 500 ಕಿ.ಮೀ ಹೊಸರಸ್ತೆ ಸಂಪರ್ಕ ಕೈಗೊಳ್ಳಲಾಗುತ್ತಿದ್ದು, ಇದರಲ್ಲಿ ಚಾನೆಲ್ ಬದಿಯಲ್ಲಿ 300ಕಿಮೀ ಬಫರ್ ರಸ್ತೆ ನಿರ್ಮಾಣ, 68 ಕಿಮೀ ಬುಸಿನೆಸ್ ಕಾರಿಡಾರ್ ನಿರ್ಮಾಣ ಸೇರಿದೆ ಎಂದರು. 17 ಕಿಮೀ ಹೊರವರ್ತುಲ ರಸ್ತೆಯ ಮರು ಅಭಿವೃದ್ಧಿ, 1500 ಕಿಮೀ ಆರ್ಟಿಲರಿ ಮತ್ತು ಸಬ್ ಆರ್ಟಿಲರಿ ರಸ್ತೆಗಳ ಉನ್ನತೀಕರಣ ಕಾರ್ಯವನ್ನು ಕೈಗೊಳ್ಳಲಾಗಿದೆ. ಸದ್ಯದಲ್ಲಿಯೇ ಹೊಸದಾಗಿ ನಗರದ ಹೊರ ವಲಯದಲ್ಲಿ 18 ಕಿ.ಮೀ ವೈಟ್ ಟಾಪಿಂಗ್ ಕಾಮಗಾರಿ ಪ್ರಾರಂಭಿಸಲಾಗುವುದು. ರಾಜ್ಯ ಸರ್ಕಾರ ಹೊರ ವರ್ತುಲ ರಸ್ತೆ ವ್ಯಾಪ್ತಿಯಲ್ಲಿ 37 ಕಿಮೀ ಡಬಲ್ ಡೆಕ್ಕರ್ ರಸ್ತೆ ನಿರ್ಮಾಣ ಪ್ರಸ್ತಾವನೆ ಸಲ್ಲಿಸಿದ್ದು, ಕೇಂದ್ರ ಸರ್ಕಾರ ಕೇವಲ 11ಕಿಮೀ ರಸ್ತೆ ನಿರ್ಮಾಣಕ್ಕೆ ಅನುಮತಿ ನೀಡಿದೆ ಎಂದರು.

**ಅನುದಾನ ಹಂಚಿಕೆಯಲ್ಲಿ ತಾರತಮ್ಯವಿಲ್ಲ:**

ಅತಿವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರದ ಮೂಲಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲು ನಮ್ಮ ಸರ್ಕಾರ ಬದ್ಧವಾಗಿದ್ದು, ಇದಕ್ಕಾಗಿ ಯಾವುದೇ ತಾರತಮ್ಯವಿಲ್ಲದೆ ಎಲ್ಲಾ ಶಾಸಕರ ಕ್ಷೇತ್ರಗಳಿಗೆ ಅಗತ್ಯ ಅನುದಾನವನ್ನು ಒದಗಿಸಲಾಗಿದೆ ಎಂದು ಮುಖ್ಯಮಂತ್ರಿ ಅವರು ತಿಳಿಸಿದರು. ಬೆಂಗಳೂರಿನ ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ ಎಲ್ಲಾ ಶಾಸಕರ ಕ್ಷೇತ್ರಗಳಿಗೆ ಸಾಕಷ್ಟು ಅನುದಾನವನ್ನು ಒದಗಿಸಲಾಗಿದೆ. ಶಾಸಕರು ತಮ್ಮ ಕ್ಷೇತ್ರಗಳಲ್ಲಿ ತುರ್ತಾಗಿ ಕೈಗೊಳ್ಳಬೇಕಾಗಿರುವ ಕಾಮಗಾರಿಗಳ ಪ್ರಸ್ತಾವನೆ ಸಲ್ಲಿಸಿದರೆ ಅನುದಾನ ಬಿಡುಗಡೆಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಅವರು ತಿಳಿಸಿದರು. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಾಗೂ ಜಲಮಂಡಳಿ ಮೂಲಕ ನಗರದ ಮೂಲಸೌಕರ್ಯ ಅಭಿವೃದ್ಧಿಗೆ ಹೆಚ್ಚಿನ ಬಂಡವಾಳ ಹೂಡಿಕೆ ಕಾರ್ಯ ಕೈಗೊಂಡಿದ್ದೇವೆ ಎಂದರು.

**ಮುಂದಿನ 10 ವರ್ಷಗಳ ಯೋಜನೆ:**

ಬೆಂಗಳೂರು ನಗರ ನಿರ್ಮಾಣವಾಗಿ 2027ರಲ್ಲಿ 500 ವರ್ಷಗಳಾಗಲಿರುವ ಹಿನ್ನೆಲೆಯಲ್ಲಿ ಮುಂದಿನ 10 ವರ್ಷಗಳನ್ನು ದೃಷ್ಟಿಯಲ್ಲಿರಿಸಿಕೊಂಡು ಯೋಜನೆಗಳನ್ನು ರೂಪಿಸಲಾಗಿದೆ.

ಹೊಸ ಯೋಜನೆಗಳಿಗೆ ಸುಮಾರು 1 ಲಕ್ಷ ಕೋಟಿ ಬೇಕು. ಬೆಂಗಳೂರು ನಗರದ ಅಭಿವೃದ್ಧಿಗೆ ಆದ್ಯತೆ ನೀಡುವುದು ನಮ್ಮ ಉದ್ದೇಶ. ಆದ್ಯತೆ ಮೇರೆಗೆ ಯೋಜನೆಗಳಿಗೆ ಅನುದಾನ ಒದಗಿಸಲಾಗುವುದು ಎಂದು ಡಿ.ಕೆ.ಶಿವಕುಮಾರ್‌ಹೇಳಿದರು.

ಬೆಂಗಳೂರಿನ ಸಂಚಾರ ವ್ಯವಸ್ಥೆಯನ್ನು ಸುಧಾರಿಸಲು ರಸ್ತೆ ನಿರ್ಮಾಣ ಮಾತ್ರ ಪರಿಹಾರವಲ್ಲ. ಸಾರ್ವಜನಿಕ ರಸ್ತೆ ಸಂಪರ್ಕ ವ್ಯವಸ್ಥೆಯನ್ನು ಸುಧಾರಿಸುವುದು ನಮ್ಮ ಆದ್ಯತೆಯಾಗಿದೆ. ಬಿಎಂಟಿಸಿ, ಮೆಟ್ರೋ, ಸಬ್ ಅರ್ಬನ್ ರೈಲ್ವೇ ಸಂಪರ್ಕ ಹೆಚ್ಚಿಸಲು ಆದ್ಯತೆ ನೀಡಿದ್ದೇವೆ ಎಂದರು.

ಪ್ರಸ್ತುತ 96 ಕಿಮೀ ಮೆಟ್ರೋ ಸಂಪರ್ಕ ಇದ್ದು, 2027ರ ಅವಧಿಗೆ ಇದನ್ನು 170 ಕಿಮೀ ಹೆಚ್ಚಿಸುವ ಗುರಿ ಹೊಂದಿದ್ದೇವೆ. ಪ್ರಸ್ತುತ 7000 ಬಸ್ಸಳಿದ್ದು, ಇದಕ್ಕೆ ಇನ್ನೂ 4500 ಹೊಸ ಬಸ್ ಸೇರ್ಪಡೆಗೊಳಿಸಲಿದ್ದೇವೆ. ಸಬ್ ಅರ್ಬನ್ ರೈಲು ಸಂಪರ್ಕ ಕಾಮಗಾರಿ ಪ್ರಗತಿಯಲ್ಲಿದ್ದು, 2030ರ ವೇಳೆಗೆ 150 ಕಿಮೀ ಸಂಪರ್ಕ ಸಾಧಿಸುವ ಗುರಿಯನ್ನು ಹೊಂದಿದ್ದೇವೆ.

ಬೆಂಗಳೂರು ನಗರಕ್ಕೆ ಹೆಚ್ಚುವರಿ ನೀರನ್ನು ಪೂರೈಸಲು ಕಾವೇರಿ 6 ನೇ ಹಂತ ಯೋಜನೆ ಕೈಗೆತ್ತಿಕೊಳ್ಳಲಾಗುವುದು ಎಂದರು. ಜಿಬಿಎ ಹೊರಗಡೆ 65ಗ್ರಾಮ ಪಂಚಾಯತ್ ಈಗಾಗಲೇ ನಗರೀಕರಣವಾಗಿದೆ. ಬೆಂಗಳೂರಿನ ಮೇಲಿನ ಒತ್ತಡವನ್ನು ಕಡಿಮೆ ಮಾಡಲು ಅವುಗಳನ್ನು ನಗರ ಸ್ಥಳೀಯ ಸಂಸ್ಥೆಗಳಾಗಿ ಮೇಲ್ದರ್ಜೆಗೇರಿಸಲಾಗುವುದು. ಹಂತ ಹಂತವಾಗಿ ಈ ವ್ಯಾಪ್ತಿಯಲ್ಲಿ ಶಾಶ್ವತ ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಗೆ ಯೋಜನೆ ರೂಪಿಸಿದ್ದೇವೆ. ಹಾಗೂ ರಸ್ತೆ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸಿದ್ಧಪಡಿಸಲು ಸೂಚಿಸಲಾಗಿದೆ ಎಂದರು.

**ಕಸ ವಿಲೇವಾರಿ ಗುತ್ತಿಗೆದಾರರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ:**

ಬೆಂಗಳೂರು ನಗರದ ಕಸ ನಿರ್ವಹಣೆ ವ್ಯವಸ್ಥೆಯನ್ನು ವ್ಯವಸ್ಥಿತಗೊಳಿಸಲು ಕ್ರಮಗಳನ್ನು ಕೈಗೊಳ್ಳಲಾಗಿದೆ. ಒಟ್ಟು 27 ಕ್ಷೇತ್ರಗಳಲ್ಲಿ ಕಸ ನಿರ್ವಹಣೆಗೆ 33ಪ್ಯಾಕೇಜ್ ಮಾಡಲಾಗಿತ್ತು. ಈಗ 21 ಪ್ಯಾಕೇಜ್‌ಗೆ ಟೆಂಡರ್ ತೆರೆಯಲಾಗಿದೆ. ಎಲ್ಲಾ ಅರ್ಹ ಟೆಂಡರ್‌ದಾರರಿಗೆ ಸದ್ಯದಲ್ಲಿಯೇ ಕಾರ್ಯಾದೇಶ ನೀಡಲಾಗುವುದು. ಹೊಸ ಟೆಂಡರ್‌ನಲ್ಲಿ ವಾಹನ ಸಾಮರ್ಥ್ಯದ ಆಧಾರದಲ್ಲಿ 9 ಸಾವಿರ ಟನ್‌ವರೆಗೆ ಕಸ ಸಂಗ್ರಹಿಸಲು ಸಾಧ್ಯವಾಗಲಿದೆ. ಎಲ್ಲಾ ಕಸ ಸಂಗ್ರಹ ವಾಹನಗಳಿಗೆ ಕಡ್ಡಾಯವಾಗಿ ಜಿಪಿಎಸ್ ಅಳವಡಿಸಲಾಗುವುದು. ಹೊಸ ವಾಹನವನ್ನು ಬಳಸಬೇಕಾಗಿದ್ದು, ಹಳೆಯ ವಾಹನ ಬಳಸುವಂತಿಲ್ಲ. ಕಸ ನಿರ್ವಹಣೆಯಲ್ಲಿ ನಿರ್ಲಕ್ಷ ತೋರುವ ಗುತ್ತಿಗೆದಾರರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಎಚ್ಚರಿಕೆ ನೀಡಿದರು.

# ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ (ಲಿಡ್ಕರ್) ಸಂಸ್ಥೆಯ ಸುವರ್ಣ ಮಹೋತ್ಸವ: ಕೆ.ಎಚ್.ಮುನಿಯಪ್ಪ ಉದ್ಘಾಟನೆ



ಬೆಂಗಳೂರು, ಅ.27– ಲಿಡ್ಕರ್ ಸಂಸ್ಥೆಯ 50ನೇ ಸುವರ್ಣ ಮಹೋತ್ಸವ ಕಾರ್ಯಕ್ರಮ ಬುಧವಾರ ವಸಂತನಗರದ ಲಿಡ್ಕರ್ ಭವನ, ಬಾಪೂಜಿ ಸಭಾಂಗಣದಲ್ಲಿ ನಡೆಯಲಿದೆ. ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡ್ಕರ್) ಸಂಸ್ಥೆಯು 50 ವರ್ಷ ಯಶಸ್ವಿಯಾಗಿ ಪೂರೈಸಿರುವ ಹಿನ್ನೆಲೆಯಲ್ಲಿ ಈ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಬೆಳಗ್ಗೆ 10 ಗಂಟೆಗೆ ಸಂಸ್ಥೆಯ ಬಾಪೂಜಿ ಸಭಾಂಗಣದಲ್ಲಿ ನಡೆಯುವ ಕಾರ್ಯಕ್ರಮವನ್ನು ಸಮಾಜ ಕಲ್ಯಾಣ ಸಚಿವ ಕೆ.ಎಚ್.ಮುನಿಯಪ್ಪ ಅವರು ಉದ್ಘಾಟಿಸಲಿದ್ದು, ಲಿಡ್ಕರ್ ಅಧ್ಯಕ್ಷ ಮುಂಡರಗಿ ನಾಗರಾಜ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾಜ ಕಲ್ಯಾಣ ಇಲಾಖೆ ಕಾರ್ಯದರ್ಶಿ ಕೆ.ಪಿ.ಮೋಹನ್‌ರಾಜ್, ವ್ಯವಸ್ಥಾಪಕ ನಿರ್ದೇಶಕ ಡಾ.ಎಚ್.ನಟರಾಜ್, ಆಯುಕ್ತ ಎನ್.ಎಂ.ನಾಗರಾಜ್, ಇಲಾಖೆ ಸಲಹೆಗಾರ ಇ.ವೆಂಕಟಯ್ಯ ಸೇರಿದಂತೆ ಹಲವಾರು ಗಣ್ಯರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಳೆದ 1976ರಲ್ಲಿ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯಡಿ ಆರಂಭ ಗೊಂಡ ಕರ್ನಾಟಕ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ಸ್ಥಾಪನೆಯಾಗಿ 2010ರಿಂದ ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತವಾಗಿ ಮರು ನಾಮಕರಣ ಗೊಂಡು 2011ರಿಂದ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿದೆ.

50 ವರ್ಷ ಪೂರೈಸಲಿರುವ ಹಿನ್ನೆಲೆಯಲ್ಲಿ ವಿಶೇಷ ಕಾರ್ಯಕ್ರಮ ವನ್ನು ನಿಗಮದ ವತಿಯಿಂದ ಆಯೋಜಿಸಲಾಗಿದೆ.

# ರಾಜಮನೆತನದ ಗೌರವಕ್ಕೆ ಚ್ಯುತಿ ತರುವ ಉದ್ದೇಶ ಸರ್ಕಾರಕ್ಕಿಲ್ಲ: ಮುಖ್ಯಮಂತ್ರಿ

**ಬೆಂಗಳೂರು, ಅ.27:** ರಾಜಮನೆತನಕ್ಕೆ ನೀಡಬೇಕಾದ ಗೌರವ ಹಾಗೂ ಸಾಂಪ್ರದಾಯಿಕ ಪದ್ಧತಿಗಳಿಗೆ ಯಾವುದೇ ಚ್ಯುತಿ ತರುವ ಉದ್ದೇಶ ಸರ್ಕಾರಕ್ಕಿಲ್ಲ ಎಂದು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಹೇಳಿದ್ದಾರೆ.

ಮೈಸೂರು ದಸರಾ ಮಹೋತ್ಸವ ಆಚರಣೆ ವಿಚಾರವಾಗಿ ಮೈಸೂರು ರಾಜಮನೆತನದ ಪ್ರಮೋದಾದೇವಿ ಒಡೆಯರ್ ಅವರು ನೀಡಿರುವ ಹೇಳಿಕೆಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ದಸರಾ ಮಹೋತ್ಸವ ಸರ್ಕಾರದ ಕಾರ್ಯಕ್ರಮವೇ ಹೊರತು ಡಿಕೆಶಿ ಕಾರ್ಯಕ್ರಮವಲ್ಲ. ನಮ್ಮ ಕಡೆಯಿಂದ ಏನಾದರೂ ತಪ್ಪಾಗಿದ್ದರೆ ಅದನ್ನು ತಿದ್ದಿಕೊಳ್ಳಲು ನಾವು ಸಿದ್ಧರಿದ್ದೇವೆ ಎಂದು ತಿಳಿಸಿದರು.



ಪ್ರಮೋದಾದೇವಿ ಅವರು ನೀಡಿರುವ ಹೇಳಿಕೆಯನ್ನು ನಾನು ಇನ್ನೂ ಪೂರ್ಣವಾಗಿ ನೋಡಿಲ್ಲ. ಅವರು ಏನು ಹೇಳಿದ್ದಾರೆ ಎಂಬುದನ್ನು ಗಮನಿಸಿ, ಅವರೊಂದಿಗೆ ಚರ್ಚೆ ಮಾಡುತ್ತೇನೆ. ಇದು ನನ್ನ ವೈಯಕ್ತಿಕ ವಿಚಾರವೂ ಅಲ್ಲ, ಪ್ರಮೋದಾದೇವಿ ಅವರ ವೈಯಕ್ತಿಕ ವಿಚಾರವೂ ಅಲ್ಲ ಇದು ಇಡೀ ರಾಜ್ಯದ ಹೆಮ್ಮೆಯ ಹಬ್ಬದ ವಿಚಾರ ಎಂದರು

ಮೊದಲಿನಿಂದಲೂ ರಾಜಮನೆತನಕ್ಕೆ ಯಾವ ರೀತಿ ಗೌರವ ನೀಡಬೇಕೋ, ಆ ಪರಂಪರೆಯ ಪ್ರಕಾರವೇ ಎಲ್ಲವನ್ನೂ ಮಾಡಿಕೊಂಡು ಬರಲಾಗಿದೆ. ಹಳೆಯ ಪದ್ಧತಿ ಏನಿದೆಯೋ ಅದನ್ನೇ ಮುಂದುವರಿಸಿದ್ದೇವೆ. ನನಗೆ ಇತಿಹಾಸದ ಎಲ್ಲಾ ಸೂಕ್ಷ್ಮಗಳು ಗೊತ್ತಿಲ್ಲದಿರಬಹುದು, ಆದರೆ ಪರಂಪರೆಗೆ ಗೌರವ ನೀಡಿದ್ದೇವೆ. ಈಗ ಪ್ರಜಾಪ್ರಭುತ್ವ ವ್ಯವಸ್ಥೆ ಇದೆ. ಪ್ರಜಾಪ್ರಭುತ್ವ ಇರದಿದ್ದರೆ ಬೇರೆಯೇ ಇರುತ್ತಿತ್ತು, ಆದರೆ ಈಗ ನಿಯಮಗಳ ಪ್ರಕಾರ ನಡೆಯಬೇಕಾಗುತ್ತದೆ ಎಂದು ಹೇಳಿದರು.

ಆನೆ ನನ್ನ ಮಾತು ಕೇಳಲಿಲ್ಲ ಎಂಬ ವಿಚಾರವೇ ಇಲ್ಲ. ಈ ಬಾರಿ ಹೊಸ ಆನೆ 'ಪ್ರಶಾಂತ' ಮೂಲಕ ಮೆರವಣಿಗೆಯನ್ನು ಸಾಂಪ್ರದಾಯಿಕವಾಗಿ ನಡೆಸಲಾಗಿದೆ. ಶಿವಮೊಗ್ಗದಲ್ಲಿ ಈ ಹಿಂದೆ ಏನಾಯಿತು ಎಂಬುದನ್ನು ಎಲ್ಲರೂ ನೋಡಿದ್ದೀರಿ, ಹೀಗಾಗಿ ಮುನ್ನೆಚ್ಚರಿಕೆಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗಿದೆ ಎಂದರು.

# ಮಲ್ಲಿಕಾರ್ಜುನ ಖರ್ಗೆ ವಿರುದ್ಧ ವೈಯಕ್ತಿಕ ದಾಳಿ

## ಹಿರಿಯ ಸಂಸದೀಯ ನಾಯಕ ಹಾಗೂ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಮೇಲೆ ಬಿಜೆಪಿ ನಾಯಕರಿಂದ ನಿರಂತರ ದರ್ಪ- ರಮೇಶ್ ಬಾಬು

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್‌ನ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ದೇಶದ ಅತ್ಯಂತ ಅನುಭವಿ ಸಂಸದೀಯ ನಾಯಕರಲ್ಲಿ ಒಬ್ಬರಾಗಿದ್ದು, ದಶಕಗಳ ಕಾಲದ ಶಾಸಕಾಂಗ ಅನುಭವ ಮತ್ತು ಪ್ರಜಾಸತ್ತಾತ್ಮಕ ಚಟುವಟಿಕೆಗಳ ಮೂಲಕ ಸಾರ್ವಜನಿಕ ಜೀವನಕ್ಕೆ ಮಹತ್ವದ ಕೊಡುಗೆಗಳನ್ನು ನೀಡಿದ್ದಾರೆ.

ಬಿಜೆಪಿ ನಾಯಕರಿಂದ ಅವರ ವಿರುದ್ಧ ಪದೇಪದೇ ವೈಯಕ್ತಿಕ ಟೀಕೆಗಳು, ಅವಹೇಳನಕಾರಿ ಹೇಳಿಕೆಗಳು ಹಾಗೂ ಸಾರ್ವಜನಿಕವಾಗಿ ಅವರ ಪ್ರತಿಷ್ಠೆಗೆ ಧಕ್ಕೆ ತರುವ ಅಭಿಯಾನಗಳು ನಡೆಯುತ್ತಿರುವುದು ನಮ್ಮ ದೇಶದಲ್ಲಿ ರಾಜಕೀಯ ಸಂವಾದದ ಗುಣಮಟ್ಟ ಕುಸಿಯುತ್ತಿರುವ ಬಗ್ಗೆ ಗಂಭೀರ ಕಳವಳವನ್ನು ಉಂಟುಮಾಡಿದೆ.

ಅವರ ಸಾರ್ವಜನಿಕ ಭಾಷಣಗಳ ಕುರಿತ ವಿವಾದಗಳಿಂದ ಹಿಡಿದು ವೈಯಕ್ತಿಕ ಟೀಕೆಗಳು ಮತ್ತು ಅವರ ರಾಜೀನಾಮೆಗೆ ಒತ್ತಾಯಿಸಿ ಸಂಘಟಿತ ಪ್ರತಿಭಟನೆಗಳನ್ನು ನಡೆಸುವವರೆಗೆ, ರಾಜಕೀಯ ಸಂಘರ್ಷದ ಈ ಮಾದರಿಯು ರಚನಾತ್ಮಕ ಚರ್ಚೆಯಿಂದ ವೈಯಕ್ತಿಕ ದಾಳಿಗಳತ್ತ ಹೆಚ್ಚು ಹೆಚ್ಚು ತಿರುಗುತ್ತಿರುವುದನ್ನು ಕಾಣಬಹುದು.

2023ರ ಆಗಸ್ಟ್‌ನಲ್ಲಿ ಕರ್ನಾಟಕದ ಬಿಜೆಪಿ ನಾಯಕ ಅರಾಗ ಜ್ಞಾನೇಂದ್ರ ಅವರು ಖರ್ಗೆ ಅವರ ಮೈಬಣ್ಣದ ಕುರಿತು ಮಾಡಿದ ಟೀಕೆಗಳು ಸೇರಿದಂತೆ, ಅವರ ವಿರುದ್ಧದ ಇತರ ವೈಯಕ್ತಿಕ ಟೀಕೆಗಳು ರಾಜಕೀಯ ಸಂವಾದವು ಗೌರವ, ಪರಸ್ಪರ ಆದರ ಮತ್ತು ಸಾಂವಿಧಾನಿಕ ಮೌಲ್ಯಗಳಿಂದ ಮಾರ್ಗದರ್ಶಿಸಲ್ಪಡಬೇಕೆಂಬುದನ್ನು ಸ್ಪಷ್ಟಪಡಿಸುತ್ತವೆ.

ಮಲ್ಲಿಕಾರ್ಜುನ ಖರ್ಗೆ ಅವರು ಲೋಕಸಭೆಯಲ್ಲಿ ಕಾಂಗ್ರೆಸ್ ಪಕ್ಷದ ನಾಯಕರಾಗಿದ್ದರು. ಪ್ರಸ್ತುತ ಅವರು ರಾಜ್ಯಸಭೆಯಲ್ಲಿ ವಿರೋಧ ಪಕ್ಷದ ನಾಯಕರಾಗಿದ್ದಾರೆ. ಸೈದ್ಧಾಂತಿಕ ವಿಷಯಗಳಲ್ಲಿ ಖರ್ಗೆ ಅವರನ್ನು ಎದುರಿಸಲು ಬಿಜೆಪಿ ವಿಫಲವಾಗಿದೆ. 2014ರಿಂದ ಬಿಜೆಪಿ ನಾಯಕರು ಒಂದಲ್ಲ ಒಂದು ಕಾರಣಕ್ಕೆ ಅವರ ಮೇಲೆ ಪದೇಪದೇ ದಾಳಿ ನಡೆಸುತ್ತಾ, ಸಾರ್ವಜನಿಕ ಜೀವನದಲ್ಲಿ ಅವರ ಪ್ರತಿಷ್ಠೆಗೆ ಧಕ್ಕೆ ತರಲು ಪ್ರಯತ್ನಿಸುತ್ತಿದ್ದಾರೆ.

1. 11–12–2015ರಂದು ಬಿಜೆಪಿ ಸಂಸದ ವೀರೇಂದ್ರ ಸಿಂಗ್ ಅವರು ಖರ್ಗೆ ಮತ್ತು ಇತರ ಕಾಂಗ್ರೆಸ್ ನಾಯಕರ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡುವ ಮೂಲಕ ದಾಳಿ ನಡೆಸಿದರು.

2. ಫೆಬ್ರವರಿ 2016ರಲ್ಲಿ ಆರ್‌ಎಸ್‌ಎಸ್ ವಿಷಯಕ್ಕೆ ಸಂಬಂಧಿಸಿದಂತೆ ಬಿಜೆಪಿ ಸಚಿವರು, ಅದರಲ್ಲೂ ವಿಶೇಷವಾಗಿ ಎಂ. ವೆಂಕಯ್ಯ ನಾಯ್ಡು ಸೇರಿದಂತೆ ಹಲವರು ಲೋಕಸಭೆಯಲ್ಲಿ ಖರ್ಗೆ ಅವರ ವಿರುದ್ಧ ವಾಗ್ದಾಳಿ ನಡೆಸಿದರು.



3. 06–02–2017ರಂದು ಕಾಂಗ್ರೆಸ್ ನಾಯಕರು ದೇಶಕ್ಕಾಗಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದ್ದಾರೆ ಎಂಬ ಹೇಳಿಕೆಗೆ ಸಂಬಂಧಿಸಿದಂತೆ ಬಿಜೆಪಿ ಸಚಿವರು ಲೋಕಸಭೆಯಲ್ಲಿ ಖರ್ಗೆ ಅವರ ಮೇಲೆ ದಾಳಿ ನಡೆಸಿದರು.

4. 2019ರ ಲೋಕಸಭಾ ಚುನಾವಣೆಯಲ್ಲಿ ಸಂಸತ್ತಿನಲ್ಲಿ ಖರ್ಗೆ ಅವರನ್ನು ಎದುರಿಸಲು ಬಿಜೆಪಿ ವಿಫಲವಾದ ಹಿನ್ನೆಲೆಯಲ್ಲಿ, ಅವರನ್ನು ಚುನಾವಣೆಯಲ್ಲಿ ಸೋಲಿಸಲು ಬಿಜೆಪಿ ನಾಯಕರು ಸಂಚು ರೂಪಿಸಿದರು.

5. 20–12–2022ರಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ಮತ್ತು ಇತರರು ರಾಜ್ಯಸಭೆಯಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡಿದರು.

6. 27–04–2023ರಂದು ಪ್ರಧಾನಿ ನರೇಂದ್ರ ಮೋದಿ ಅವರ ಕುರಿತು ಖರ್ಗೆ ಅವರು ನೀಡಿದ ಹೇಳಿಕೆಗೆ ಸಂಬಂಧಿಸಿದಂತೆ ಬಿಜೆಪಿ ನಾಯಕರು ಅವರ ವಿರುದ್ಧ ಮಾನಹಾನಿಕರ ಹೇಳಿಕೆಗಳನ್ನು ನೀಡಿದರು.

7. 02–08–2023ರಂದು ಕರ್ನಾಟಕದ ಮಾಜಿ ಗೃಹ ಸಚಿವರು ಹಾಗೂ ಬಿಜೆಪಿ ನಾಯಕ ಆರಗ ಜ್ಞಾನೇಂದ್ರ ಖರ್ಗೆ ಅವರ ಮೈಬಣ್ಣದ ಕುರಿತು ಟೀಕೆಗಳನ್ನು ಮಾಡಿದರು.

ಕಾಂಗ್ರೆಸ್ ಅಧ್ಯಕ್ಷರ ಹುದ್ದೆಯು ರಾಜಕೀಯ ಮತ್ತು ಸಾಂಸ್ಥಿಕ ದೃಷ್ಟಿಯಿಂದ ಅಪಾರ ಮಹತ್ವವನ್ನು ಹೊಂದಿದೆ. ಖರ್ಗೆ ಅವರ ಹಿರಿಯತನ ಮತ್ತು ದೀರ್ಘಕಾಲದ ಸಂಸದೀಯ ಅನುಭವಕ್ಕೆ, ಯಾವುದೇ ರಾಜಕೀಯ ಪಕ್ಷದ ನಾಯಕರಾಗಿದ್ದರೂ ಪ್ರತಿಯೊಬ್ಬರಿಗೂ ನೀಡಬೇಕಾದ ಮೂಲಭೂತ ಗೌರವ ಮತ್ತು ಸೌಜನ್ಯವನ್ನು ನೀಡಬೇಕು. ರಾಜಕೀಯ ಎದುರಾಳಿಗೆ ಗೌರವ ನೀಡುವುದು ರಾಜಕೀಯ ದೌರ್ಬಲ್ಯದ ಸಂಕೇತವಲ್ಲ; ಅದು ಪ್ರಜಾಸತ್ತಾತ್ಮಕ ಪ್ರಬುದ್ಧತೆಯ ಪ್ರತಿಬಿಂಬವಾಗಿದೆ.

2026ರ ಅಕ್ಟೋಬರ್ 25ರಂದು ಪಟನಾದಲ್ಲಿ ಖರ್ಗೆ ಅವರು ನೀಡಿದ ಹೇಳಿಕೆಗಳ ಸುತ್ತ ಇತ್ತೀಚೆಗೆ ಉಂಟಾದ ವಿವಾದವು ರಾಜಕೀಯ ಸಂಘರ್ಷದ ತೀವ್ರತೆಯನ್ನು ಮತ್ತೊಮ್ಮೆ ಬಹಿರಂಗಪಡಿಸಿದೆ. ಅವರ ಹೇಳಿಕೆಗಳನ್ನು ಟೀಕಿಸುವ ಮತ್ತು ವಿವರಣೆ ಕೇಳುವ ಹಕ್ಕು ಬಿಜೆಪಿಗೆ ಇದೆ. ಅದೇ ರೀತಿ, ಬಿಜೆಪಿ ನಾಯಕರ ಹೇಳಿಕೆಗಳು ಮತ್ತು ನಡವಳಿಕೆಯನ್ನು ಪ್ರಶ್ನಿಸುವ ಹಕ್ಕು ಕಾಂಗ್ರೆಸ್ ನಾಯಕರಿಗೂ ಇದೆ. ಆದರೆ ಪ್ರಜಾಸತ್ತಾತ್ಮಕ ಹೊಣೆಗಾರಿಕೆಯನ್ನು ಎಲ್ಲರಿಗೂ ಸಮಾನವಾಗಿ, ಯಾವುದೇ ಪಕ್ಷಪಾತವಿಲ್ಲದೆ ಅನ್ವಯಿಸಬೇಕು.

ರಾಜಕೀಯ ಪಕ್ಷಗಳು ವೈಯಕ್ತಿಕ ನಿಂದನೆ ಅಥವಾ ವೈಯಕ್ತಿಕ ನಾಯಕರ ವಿರುದ್ಧ ದ್ವೇಷವನ್ನು ಪ್ರಚೋದಿಸುವ ಬದಲು, ಸತ್ಯಾಂಶಗಳು, ನೀತಿಗಳು, ಸಂಸದೀಯ ಚರ್ಚೆಗಳು ಮತ್ತು ಸಾರ್ವಜನಿಕ ಹೊಣೆಗಾರಿಕೆಯ ಮೂಲಕ ಪರಸ್ಪರ ಸವಾಲು ಹಾಕಿದಾಗ ಭಾರತದ ಪ್ರಜಾಪ್ರಭುತ್ವ ಬಲಗೊಳ್ಳುತ್ತದೆ. ಆದ್ದರಿಂದ, ಬಿಜೆಪಿ ನಾಯಕತ್ವವು ತಾನು ಪ್ರತಿಪಾದಿಸುವ ಪ್ರಜಾಸತ್ತಾತ್ಮಕ ಸಂಪ್ರದಾಯಗಳನ್ನು ಎತ್ತಿಹಿಡಿಯಬೇಕು, ಟೀಕೆಗಳು ವಿಷಯಾಧಾರಿತವಾಗಿರುವುದನ್ನು ಖಚಿತಪಡಿಸಬೇಕು ಮತ್ತು ಸಾರ್ವಜನಿಕ ಜೀವನದ ಘನತೆಯನ್ನು ಕುಗ್ಗಿಸುವ ವೈಯಕ್ತಿಕ ದಾಳಿಗಳನ್ನು ಪ್ರೋತ್ಸಾಹಿಸುವುದನ್ನು ತಡೆಯಬೇಕು.

ಪ್ರಜಾಪ್ರಭುತ್ವದಲ್ಲಿ ರಾಜಕೀಯ ಭಿನ್ನಾಭಿಪ್ರಾಯಗಳು ಅನಿವಾರ್ಯ. ಆದರೆ ವೈಯಕ್ತಿಕ ದ್ವೇಷವು ರಾಜಕೀಯ ಚರ್ಚೆಗೆ ಪರ್ಯಾಯವಾಗಲು ಎಂದಿಗೂ ಅವಕಾಶ ನೀಡಬಾರದು.

ಶ್ರೀ ಮಲ್ಲಿಕಾರ್ಜುನ ಖರ್ಗೆ ಅವರ ಘನತೆಯನ್ನು, ಪ್ರತಿಯೊಬ್ಬ ಸಾರ್ವಜನಿಕ ಪ್ರತಿನಿಧಿಯ ಘನತೆಯಂತೆಯೇ, ಪರಸ್ಪರ ಗೌರವ, ಸಾಂವಿಧಾನಿಕ ನೈತಿಕತೆ ಮತ್ತು ಪ್ರಜಾಸತ್ತಾತ್ಮಕ ಹೊಣೆಗಾರಿಕೆಯನ್ನು ಆಧರಿಸಿದ ರಾಜಕೀಯ ಸಂಸ್ಕೃತಿಯ ಮೂಲಕ ರಕ್ಷಿಸಬೇಕು ಎಂದು ಕೆಪಿಸಿಸಿ ಮಾಧ್ಯಮ ಮತ್ತು ಸಂವಹನ ವಿಭಾಗದ ಅಧ್ಯಕ್ಷ ರಮೇಶ್ ಬಾಬು ತಿಳಿಸಿದ್ದಾರೆ..



# ಎಐಸಿಸಿ ಅಧ್ಯಕ್ಷರಾಗಿ ನಾಲ್ಕು ವರ್ಷ ಪೂರೈಸಿದ ಮಲ್ಲಿಕಾರ್ಜುನ ಖರ್ಗೆ

## ಸಂಘಟನೆಯ ಬಲವರ್ಧನೆ, ಸಾಮಾಜಿಕ ನ್ಯಾಯಕ್ಕೆ ಆದ್ಯತೆ- ಡಾ.ಆನಂದ ಕುಮಾರ್ ಅಭಿಮತ

ಬೆಂಗಳೂರು, ಅ.27: ಎಐಸಿಸಿ ಅಧ್ಯಕ್ಷರಾಗಿ ಮಲ್ಲಿಕಾರ್ಜುನ ಖರ್ಗೆ ನಾಲ್ಕು ವರ್ಷಗಳ ಅವಧಿ ಪೂರ್ಣಗೊಳಿಸಿ ಐದನೇ ವರ್ಷಕ್ಕೆ ಕಾಲಿಟ್ಟಿದ್ದು, ಪಕ್ಷ ಸಂಘಟನೆ, ಸಾಮಾಜಿಕ ನ್ಯಾಯಕ್ಕೆ ಆದ್ಯತೆ ನೀಡಿದ್ದಾರೆ ಎಂದು ಎಐಸಿಸಿ ಎಸ್.ಸಿ ವಿಭಾಗದ ರಾಷ್ಟ್ರೀಯ ಸಂಯೋಜಕರು ಹಾಗೂ ಮಹಾರಾಷ್ಟ್ರ ಉಸ್ತುವಾರಿ ಡಾ. ಆನಂದ ಕುಮಾರ್ ಹೇಳಿದ್ದಾರೆ.

24 ವರ್ಷಗಳ ಬಳಿಕ ಗಾಂಧಿ ಕುಟುಂಬದ ಹೊರಗಿನ ವ್ಯಕ್ತಿಯೊಬ್ಬರು ಕಾಂಗ್ರೆಸ್‌ನ ಪೂರ್ಣಾವಧಿ ಅಧ್ಯಕ್ಷರಾಗುವ ಮೂಲಕ ಪಕ್ಷದ ಇತಿಹಾಸದಲ್ಲಿ ಮಹತ್ವದ ಅಧ್ಯಾಯ ವೊಂದನ್ನು ದಾಖಲಿಸಿದರು. ಕಾರ್ಮಿಕ ಕುಟುಂಬದ ಖರ್ಗೆ ಅವರ ರಾಜಕೀಯ ಪಯಣ, ತಳಮಟ್ಟದ ಸಂಘಟನೆಯಿಂದ ರಾಷ್ಟ್ರೀಯ ನಾಯಕತ್ವದವರೆಗೆ ತನ್ನ ಹಾದಿಯನ್ನು ಸವೆಸಿದ್ದಾರೆ. ಐದು ದಶಕಗಳಿಗೂ ಹೆಚ್ಚು ಕಾಲದ ರಾಜಕೀಯ ಅನುಭವ, ಸಂಸದೀಯ ವ್ಯವಹಾರಗಳಲ್ಲಿನ ಹಿಡಿತ, ಆಡಳಿತ, ಸಂಘಟನಾತ್ಮಕ ರಾಜಕಾರಣದ ಅರಿವು ಖರ್ಗೆ ಅವರ ನಾಯಕತ್ವದ ಪ್ರಮುಖ ಆಯಾಮಗಳಾಗಿವೆ. ಕಾಂಗ್ರೆಸ್ ಅಧ್ಯಕ್ಷರಾಗಿ ನಾಲ್ಕು ವರ್ಷಗಳ ಪಯಣದಲ್ಲಿ ಪಕ್ಷವನ್ನು ಪುನರ್‌ಸಂಘಟಿಸುವ ಪ್ರಯತ್ನಗಳನ್ನು ಅವರು ನಡೆಸಿದ್ದು, ಕರ್ನಾಟಕ ಮತ್ತು ತೆಲಂಗಾಣದಲ್ಲಿ ಕಾಂಗ್ರೆಸ್ ಪಕ್ಷ ಚುನಾವಣೆಯಲ್ಲಿ ಯಶಸ್ಸು ತಂದುಕೊಟ್ಟಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಹಾಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಜೊತೆ ಸಮನ್ವಯ ಸಾಧಿಸಿದ್ದು ಅವರ ಚಾಣಾಕ್ಷ ನಾಯಕತ್ವದ ಪ್ರತೀಕವಾಗಿದೆ ಪ್ರತಿಪಕ್ಷ ರಾಜಕೀಯ ಪಾತ್ರದ ಹಿನ್ನೆಲೆಯಲ್ಲಿ ಅವರ ನಾಯಕತ್ವ ನಿರ್ಣಾಯಕವಾಗಿದೆ ಎಂದು ಹೇಳಿದ್ದಾರೆ.

ಈ ಕುರಿತು ಹೇಳಿಕೆ ಬಿಡುಗಡೆ ಮಾಡಿರುವ ಅವರು, ಕಲಬುರಗಿಯಲ್ಲಿ ವಿದ್ಯಾರ್ಥಿ ನಾಯಕನಾಗಿ ರಾಜಕೀಯ ಪ್ರವೇಶಿಸಿದ ಮಲ್ಲಿಕಾರ್ಜುನ ಖರ್ಗೆ, 1969ರಲ್ಲಿ ಗುಲ್ಬರ್ಗ ನಗರ ಕಾಂಗ್ರೆಸ್ ಅಧ್ಯಕ್ಷರಾಗಿ ಪಕ್ಷದ ಸಂಘಟನೆಯಲ್ಲಿ ತಮ್ಮ ಪಯಣ ಆರಂಭಿಸಿದರು. 1972ರಿಂದ 2009ರವರೆಗೆ ಕರ್ನಾಟಕ ವಿಧಾನಸಭೆಗೆ ಸತತ ಒಂಬತ್ತು ಬಾರಿ ಆಯ್ಕೆಯಾದ ಅವರು, ರಾಜ್ಯ ರಾಜಕಾರಣದಲ್ಲಿ ದೀರ್ಘಕಾಲದ ಪ್ರಭಾವ ಬೀರಿದರು. ಶಿಕ್ಷಣ, ಕಂದಾಯ, ಗ್ರಾಮೀಣಾಭಿವೃದ್ಧಿ, ನೀರಾವರಿ, ಸಾರಿಗೆ, ಗೃಹ ಸೇರಿದಂತೆ ವಿವಿಧ ಖಾತೆಗಳನ್ನು ನಿರ್ವಹಿಸಿದರು. 2009ರಲ್ಲಿ ಲೋಕಸಭೆ ಪ್ರವೇಶಿಸಿದ ಖರ್ಗೆ, ಕೇಂದ್ರ ಸಚಿವರಾಗಿ ರೈಲ್ವೆ ಮತ್ತು ಕಾರ್ಮಿಕ ಸೇರಿದಂತೆ ಪ್ರಮುಖ ಖಾತೆಗಳ ಜವಾಬ್ದಾರಿ ನಿಭಾಯಿಸಿದರು. ಲೋಕಸಭೆಯಲ್ಲಿ ಕಾಂಗ್ರೆಸ್ ಪಕ್ಷದ ನಾಯಕನಾಗಿಯೂ ಕಾರ್ಯನಿರ್ವಹಿಸಿದರು. 2020ರಲ್ಲಿ ರಾಜ್ಯಸಭೆಗೆ ಆಯ್ಕೆಯಾದ ಅವರು, 2021ರಲ್ಲಿ ರಾಜ್ಯಸಭೆಯ ಪ್ರತಿಪಕ್ಷದ ನಾಯಕರಾದರು. ಈ ಅನುಭವಗಳೇ ಅವರನ್ನು ರಾಷ್ಟ್ರೀಯ ಮಟ್ಟದ ಪಕ್ಷದ ನಾಯಕತ್ವಕ್ಕೆ ಸಿದ್ಧಗೊಳಿಸಿದವು. ಕಲ್ಯಾಣ ಕರ್ನಾಟಕದ ಅಭಿವೃದ್ಧಿಗೆ ಸಂಬಂಧಿಸಿದ ಸಂವಿಧಾನದ 371ಜೆ ವಿಧಿಯ ಜಾರಿಗಾಗಿ ನಡೆದ ಪ್ರಯತ್ನಗಳಲ್ಲಿನ ಅವರ ಪಾತ್ರವೂ ಕರ್ನಾಟಕದ ರಾಜಕೀಯ ಇತಿಹಾಸದಲ್ಲಿ ಗಮನಾರ್ಹವಾಗಿದೆ ಎಂದಿದ್ದಾರೆ.

ಖರ್ಗೆ ಅವರು ಕಾಂಗ್ರೆಸ್ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡಾಗ ಪಕ್ಷವು ಹಲವು ಸವಾಲುಗಳನ್ನು ಎದುರಿಸುತ್ತಿತ್ತು. ಲೋಕಸಭಾ ಚುನಾವಣೆಗಳಲ್ಲಿನ ಹಿನ್ನಡೆ, ಹಲವು ರಾಜ್ಯಗಳಲ್ಲಿ ಸಂಘಟನೆಯ ದುರ್ಬಲತೆ, ನಾಯಕತ್ವದ ಕುರಿತು ಚರ್ಚೆಗಳು ಕಾಂಗ್ರೆಸ್ ಮುಂದಿದ್ದ ಪ್ರಮುಖ ಸವಾಲುಗಳಾಗಿದ್ದವು. ಇಂತಹ ಸಂದರ್ಭದಲ್ಲಿ ಪಕ್ಷದ ಕಾರ್ಯಕರ್ತರಲ್ಲಿ ವಿಶ್ವಾಸ ತುಂಬಿದ್ದಲ್ಲದೇ ರಾಜ್ಯ ಘಟಕಗಳನ್ನು ಸಕ್ರಿಯಗೊಳಿಸುವ ಮತ್ತು ಪಕ್ಷದ ರಾಜಕೀಯ ಸಂದೇಶವನ್ನು ಜನರ ಬಳಿಗೆ ತಲುಪಿಸುವ ಜವಾಬ್ದಾರಿಯನ್ನು ಅತ್ಯಂತ ಸಮರ್ಥವಾಗಿ ನಿಭಾಯಿಸಿದರು. ಖರ್ಗೆ ನಾಯಕತ್ವದಲ್ಲಿ ರಾಹುಲ್ ಗಾಂಧಿ ಅವರ ಭಾರತ್ ಜೋಡೋ ಯಾತ್ರೆ ಹಾಗೂ ನಂತರದ ರಾಜಕೀಯ ಚಟುವಟಿಕೆಗಳು ಕಾಂಗ್ರೆಸ್‌ನ ಜನಸಂಪರ್ಕ ಪ್ರಯತ್ನಗಳಿಗೆ ವೇದಿಕೆಯಾದವು. 2024ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ತನ್ನ ಸ್ಥಾನಗಳ ಸಂಖ್ಯೆಯನ್ನು ಹೆಚ್ಚಿಸಿಕೊಂಡು, ಪ್ರತಿಪಕ್ಷವಾಗಿ ತನ್ನ ಪಾತ್ರವನ್ನು ಮತ್ತಷ್ಟು ಬಲಪಡಿಸಿತು ಎಂದು ಡಾ. ಆನಂದ ಕುಮಾರ್ ಹೇಳಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಅವರ ರಾಜಕೀಯ ಚಿಂತನೆಯ ಪ್ರಮುಖ ಅಂಶವೆಂದರೆ ಸಾಮಾಜಿಕ ನ್ಯಾಯ, ಸಂವಿಧಾನದ ಮೌಲ್ಯಗಳು ಮತ್ತು ದುರ್ಬಲ ವರ್ಗಗಳ ಹಕ್ಕುಗಳ ಪ್ರತಿಪಾದನೆ. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳು, ಕಾರ್ಮಿಕರು ಮತ್ತು ಆರ್ಥಿಕವಾಗಿ ಹಿಂದುಳಿದ ಜನರ ಸಮಸ್ಯೆಗಳನ್ನು ರಾಜಕೀಯ ಚರ್ಚೆಯ ಕೇಂದ್ರಕ್ಕೆ ತರಲು ಅವರು ಒತ್ತು ನೀಡಿದ್ದಾರೆ. ಜಾತಿ ಗಣತಿ, ಮೀಸಲಾತಿ, ಶಿಕ್ಷಣ ಮತ್ತು ಉದ್ಯೋಗಾವಕಾಶಗಳ ಸಮಾನ ಹಂಚಿಕೆ ಕುರಿತ ಕಾಂಗ್ರೆಸ್‌ನ ನಿಲುವುಗಳನ್ನು ಸಮರ್ಥಿಸುವಲ್ಲಿ ಖರ್ಗೆ ಪ್ರಮುಖ ಪಾತ್ರ ವಹಿಸಿದ್ದಾರೆ. ಪ್ರಜಾಪ್ರಭುತ್ವದ ಸಂಸ್ಥೆಗಳ ಸ್ವಾಯತ್ತತೆ, ಸಂವಿಧಾನದ ಆಶಯಗಳು ಮತ್ತು ಸಂಸತ್ತಿನ ಚರ್ಚೆಗಳ ಮಹತ್ವವನ್ನು ಅವರು ತಮ್ಮ ಭಾಷಣಗಳಲ್ಲಿ ನಿರಂತರವಾಗಿ ಪ್ರಸ್ತಾಪಿಸುತ್ತಿದ್ದಾರೆ. ಸಾಮಾಜಿಕ ನ್ಯಾಯದ ಘೋಷಣೆಗಳು ಜನರ ಜೀವನದಲ್ಲಿ ಸ್ಪಷ್ಟ ಬದಲಾವಣೆಯನ್ನು ತರಬೇಕಾದರೆ, ಅವುಗಳಿಗೆ ಸಂಬಂಧಿಸಿದ ನೀತಿಗಳು, ಸಂಘಟನಾ ಕಾರ್ಯಕ್ರಮಗಳು ಮತ್ತು ನಿರಂತರ ಜನಸಂಪರ್ಕವೂ ಅಗತ್ಯ. ಈ ನಿಟ್ಟಿನಲ್ಲಿ ಕಾಂಗ್ರೆಸ್ ತನ್ನ ಭರವಸೆಗಳನ್ನು ಜನರ ಅನುಭವದೊಂದಿಗೆ ಜೋಡಿಸುವುದು ಮುಖ್ಯವಾಗಿದೆ ಎಂದಿದ್ದಾರೆ.

ಮಲ್ಲಿಕಾರ್ಜುನ ಖರ್ಗೆ ಅವರ ಅವಧಿಯಲ್ಲಿ ಪಕ್ಷದ ಸಂಘಟನೆಯನ್ನು ಪುನರ್‌ವ್ಯವಸ್ಥಿತ ಗೊಳಿಸುವ ಪ್ರಯತ್ನಗಳು ನಡೆದಿವೆ. ವಿವಿಧ ರಾಜ್ಯಗಳಲ್ಲಿ ನಾಯಕರ ನಡುವಿನ ಭಿನ್ನಾಭಿಪ್ರಾಯಗಳನ್ನು ಬಗೆಹರಿಸುವುದು, ಚುನಾವಣಾ ತಂತ್ರ ರೂಪಿಸುವುದು ಮತ್ತು ಮಿತ್ರಪಕ್ಷಗಳೊಂದಿಗೆ ಸಮನ್ವಯ ಸಾಧಿಸುವುದು ಅವರ ನಾಯಕತ್ವದ ಭಾಗವಾಗಿದೆ. ಸೋನಿಯಾ ಗಾಂಧಿ, ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ವಾದ್ರಾ ಅವರು ಪಕ್ಷದ ರಾಜಕೀಯದಲ್ಲಿ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ. ಮತ್ತೊಂದೆಡೆ, ಅಧ್ಯಕ್ಷರಾಗಿ ಸಂಘಟನಾತ್ಮಕ ನಿರ್ಧಾರಗಳನ್ನು ಕೈಗೊಳ್ಳುವುದು ಮತ್ತು ವಿವಿಧ ನಾಯಕರ ನಡುವೆ ಸಮನ್ವಯ ಸಾಧಿಸುವ ಕೆಲವನ್ನು ನಿರ್ವಹಿಸುತ್ತಿದ್ದಾರೆ. ನಿರುದ್ಯೋಗ, ಬೆಲೆ ಏರಿಕೆ, ರೈತರ ಸಮಸ್ಯೆಗಳು, ಸಾಮಾಜಿಕ ನ್ಯಾಯ, ಮಹಿಳಾ ಮೀಸಲಾತಿ ಮತ್ತು ಪ್ರಜಾಸತ್ತಾತ್ಮಕ ಸಂಸ್ಥೆಗಳ ಕಾರ್ಯವೈಖರಿಯಂತಹ ವಿಷಯಗಳಲ್ಲಿ ಅವರು ಕೇಂದ್ರ ಸರ್ಕಾರವನ್ನು ಪ್ರಶ್ನಿಸುತ್ತಿದ್ದಾರೆ. ಆದರೆ ಪ್ರತಿಪಕ್ಷದ ರಾಜಕೀಯ ಪ್ರಭಾವವು ಕೇವಲ ಸರ್ಕಾರದ ವಿರುದ್ಧದ ಟೀಕೆಯಿಂದ ನಿರ್ಧಾರವಾಗುವುದಿಲ್ಲ. ಪರ್ಯಾಯ ನೀತಿಗಳನ್ನು ಮುಂದಿಡುವುದು, ಜನರಿಗೆ ಅರ್ಥವಾಗುವ ಕಾರ್ಯಕ್ರಮಗಳನ್ನು ರೂಪಿಸುವುದು ಮತ್ತು ಅವುಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನ ಗೊಳಿಸುವ ಸಾಮರ್ಥ್ಯವೂ ಮುಖ್ಯವಾಗುತ್ತದೆ ಎಂದು ಡಾ. ಆನಂದ ಕುಮಾರ್ ಹೇಳಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

ಅಕ್ಟೋಬರ್, 28, 2026, ಬುಧವಾರ

## ಒಳಪುಟಗಳಲ್ಲಿ

ಅಂತಿಮ ಮತದಾರರ ಪಟ್ಟಿ ಪ್ರಕಟ: ರಾಜ್ಯದಲ್ಲಿ 4.55 ಕೋಟಿ ಅರ್ಹ ಮತದಾರರು, 99.32 ಲಕ್ಷ ಮತದಾರರು ಡಿಲೀಟ್ - ಪು.5



ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರನ್ನು ಕಾಂಗ್ರೆಸ್ ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಭೇಟಿಯಾಗಿದ್ದು, ರಾಜ್ಯದ ಪ್ರಸ್ತುತ ರಾಜಕೀಯ ಬೆಳವಣಿಗೆಗಳ ಕುರಿತು ಮಹತ್ವದ ಮಾತುಕತೆ ನಡೆಸಿದ್ದಾರೆ ಎನ್ನಲಾಗಿದೆ. ಭೇಟಿ ವೇಳೆ ಕಾಂಗ್ರೆಸ್‌ನ ಆಂತರಿಕ ಬೆಳವಣಿಗೆಗಳ ಬಗ್ಗೆ ರಾಜೇಂದ್ರ ರಾಜಣ್ಣ ಅಸಮಾಧಾನ ವ್ಯಕ್ತಪಡಿಸಿದರು.

# ಮುಖ್ಯಮಂತ್ರಿ ಮಧ್ಯಸ್ಥಿಕೆ, ರೈತರ-ಸಕ್ಕರೆ ಕಾರ್ಖಾನೆ ಮಾಲೀಕರ ಸಂಧಾನ ಯಶಸ್ವಿ

**2 ದಿನಗಳಲ್ಲಿ ರೈತರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರಿಂದ ಅಂತಿಮ ತೀರ್ಮಾನ ಪ್ರಕಟ**



**ಇವತ್ತು ಸಕ್ಕರೆ ದರ 48 ರೂ. ವರೆಗೂ ಇದೆ. ಇಂದಿನ ಸಕ್ಕರೆ ಧಾರಣೆ ಆಧಾರದಲ್ಲೇ ನೀವು ಪ್ರತಿ ಟನ್ ಕಬ್ಬಿಗೆ 4 ಸಾವಿರ ರೂ. ಕೊಡಬೇಕು ಅಂತಾ ಕಾರ್ಖಾನೆ ಮಾಲೀಕರಿಗೆ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಅವರು ಸೂಚನೆ ಕೊಟ್ಟರು.**

**ಬೆಳಗಾವಿ, ಅ.27:** ಸಿಎಂ ಮಧ್ಯಸ್ಥಿಕೆಯಲ್ಲಿ ರೈತರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರ ಸಂಧಾನ ಯಶಸ್ವಿಯಾಗಿದ್ದು, ಕೇಂದ್ರ ಸರ್ಕಾರ ಸಕ್ಕರೆ ಕನಿಷ್ಠ ಮಾರಾಟ ಬೆಲೆ ನಿಗದಿ ಮಾಡಿದ ಬಳಿಕ ಅದಕ್ಕೆ ಅನುಗುಣವಾಗಿ ಸಕ್ಕರೆ ಕಾರ್ಖಾನೆ ಮಾಲೀಕರು ರೈತರಿಗೆ ನೀಡಬೇಕಾಗಿರುವ ದರದ ಬಗ್ಗೆ ನಿರ್ಧಾರ ಕೈಗೊಳ್ಳಲಾಗಿದ್ದು, ಈ ನಿರ್ಧಾರದ ಬಗ್ಗೆ ರೈತರು ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರು ಇನ್ನೆರಡು ದಿನದಲ್ಲಿ ಅಂತಿಮ ತೀರ್ಮಾನ ಪ್ರಕಟಿಸಲಿದ್ದಾರೆ. ಬೆಳಗಾವಿಯ ಸುವರ್ಣ ಸೌಧ ಹಾಗೂ ಸರ್ಕೀಟ್ ಹೌಸ್ ನಲ್ಲಿ ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ಕಬ್ಬು ಬೆಳೆಗಾರರ ಜೊತೆಗೆ ಭಾನುವಾರ ಬೆಳಗ್ಗೆಯಿಂದ ಮಧ್ಯರಾತ್ರಿವರೆಗೂ ಸರಣಿ ಸಭೆ ನಡೆಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬಿಕ್ಕಟ್ಟಿನ ಶಮನಕ್ಕೆ ಪರಿಹಾರ ಸೂತ್ರ ಕಂಡುಹಿಡಿಯುವಲ್ಲಿ ಯಶಸ್ವಿಯಾಗಿದ್ದಾರೆ.

**10 ತಾಸು, ಐದು ಸುತ್ತುಗಳ ಸುದೀರ್ಘ ಸಭೆ**

ಬೆಳಗ್ಗೆ 11 ಗಂಟೆ ಸುಮಾರಿಗೆ ಬೆಳಗಾವಿಯ ಸುವರ್ಣಸೌಧದಲ್ಲಿ ಸಕ್ಕರೆ ಮಾಲೀಕರೊಂದಿಗೆ ಸಭೆ ಆರಂಭಿಸಿದ ಸಿಎಂ, ಮಧ್ಯರಾತ್ರಿವರೆಗೂ ಸುಮಾರು 10 ತಾಸುಗಳ, ಐದು ಸುತ್ತಿನ ಸಭೆಗಳನ್ನು ನಡೆಸಿದರು. ಈ ಸಭೆಯಲ್ಲಿ 9 ಮಂತ್ರಿಗಳು ಸೇರಿ 70 ಶಾಸಕರು ಸುದೀರ್ಘ ಚರ್ಚೆ ನಡೆಸಿದ್ದಾರೆ. 80 ಕಾರ್ಖಾನೆಗಳ ಪೈಕಿ 79 ಕಾರ್ಖಾನೆ ಮಾಲೀಕರು ಭಾಗಿಯಾಗಿದ್ದು, ರೈತರು ಕೂಡ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಮಧ್ಯರಾತ್ರಿ ಹೊತ್ತಿಗೆ ಸಂಧಾನ ಸೂತ್ರ ರೂಪಿಸುವಲ್ಲಿ ಯಶಸ್ವಿಯಾದ ಸಿಎಂ ಡಿ.ಕೆ.ಶಿವಕುಮಾರ್ ಅವರು, ನಂತರ ಮಾಧ್ಯಮದವರ ಜತೆ ಮಾತನಾಡಿದರು.

"ರೈತರು ಕೇಂದ್ರ ಸಚಿವರ ಜತೆ ಚರ್ಚೆ ಮಾಡಿದ್ದು, ರೈತರಿಗೆ ಕೇಂದ್ರ ಸಚಿವರು ಭರವಸೆ ನೀಡಿದ್ದಾರೆ. ಕಬ್ಬಿನ ಎಂಎಸ್‌ಪಿ (ಕನಿಷ್ಠ ಮಾರಾಟ ದರ) ನಿಗದಿ ಬಳಿಕ ಕಾರ್ಖಾನೆಗಳು ರೈತರಿಗೆ ಎಷ್ಟು ದರ ನೀಡಬೇಕು ಎಂದು ತೀರ್ಮಾನಕ್ಕೆ ಬರಲಾಗಿದೆ. ಇದಕ್ಕೆ ಕಾರ್ಖಾನೆ ಮಾಲೀಕರು ಒಪ್ಪಿದ್ದಾರೆ" ಎಂದು ಶಿವಕುಮಾರ್ ಅವರು ತಿಳಿಸಿದರು.

"ರೈತರು ಉಳಿಯಬೇಕು, ಕಾರ್ಖಾನೆಯೂ ಉಳಿಯಬೇಕು. ಸರ್ಕಾರಕ್ಕೆ ರೈತರ ಬದುಕು ಮುಖ್ಯ. ರೈತರು ಎರಡು ದಿನ ಕಾಲಾವಕಾಶ ಕೇಳಿದ್ದಾರೆ. ಅವರು ತಮ್ಮಲ್ಲೇ ಚರ್ಚೆ ಮಾಡಿ ನಿರ್ಧಾರಕ್ಕೆ ಬರಲಿದ್ದಾರೆ. ರೈತರು ಹಾಗೂ ಕಾರ್ಖಾನೆ ಮಾಲೀಕರು ಒಪ್ಪಂದದ ಹತ್ತಿರಕ್ಕೆ ಬಂದಿದ್ದಾರೆ. ನಾವು ಅವರಿಗೆ ಬೆಂಬಲವಾಗಿ ನಿಲ್ಲುತ್ತೇವೆ. ಕೇಂದ್ರ ಸರ್ಕಾರದ ಜತೆಗೆ ಅವರೂ ಮಾತನಾಡುತ್ತಾರೆ, ನಾವೂ ಮಾತನಾಡುತ್ತೇವೆ. ಇಂದು ಈ ಹೋರಾಟ ಸುಖಾಂತ್ಯಕ್ಕೆ ಬಂದಿದೆ. ನಾವು ರೈತರಿಗೆ ಪ್ರೋತ್ಸಾಹ ನೀಡಲು ಮುಂದಾಗಿದ್ದು, ಯಾವುದೇ ಸಂದರ್ಭದಲ್ಲಿ ಕೇಂದ್ರ ಸರ್ಕಾರದ ಜೊತೆ ಮಾತುಕತೆಗೆ ಬದ್ಧನಾಗಿದ್ದೇನೆ" ಎಂದು ಸ್ಪಷ್ಟಪಡಿಸಿದರು. "ಕೇಂದ್ರ ಸಚಿವರು ಕೊಟ್ಟ ಮಾತಿಗೆ ನಡೆಯುತ್ತಾರೆ ಎಂಬ ಭರವಸೆ ರೈತರಿಗಿದೆ. ಅದಕ್ಕೆ ನಮ್ಮ ಬೆಂಬಲವೂ ಇದೆ. ರೈತರಿಲ್ಲದೆ ನಾವಿಲ್ಲ. ನಾವಿಲ್ಲದೆ ರೈತರಿಲ್ಲ. ಸರ್ಕಾರದ ಮಧ್ಯಸ್ಥಿಕೆಯಲ್ಲಿ ಇವರಿಬ್ಬರ ಜತೆ ನಿಲ್ಲಲಿದೆ" ಎಂದರು.

ಹಿಂದೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ, ಎಂಎಸ್‌ಪಿ ದರ ಹೆಚ್ಚಿಸುವಂತೆ ಪ್ರಧಾನಮಂತ್ರಿ ಮೋದಿ ಮತ್ತು ಗೃಹ ಸಚಿವ ಅಮಿತ್ ಶಾ ಅವರಿಗೆ ಮನವಿ ಸಲ್ಲಿಸಲಾಗಿತ್ತು. ಎಂಎಸ್‌ಪಿ ಹೆಚ್ಚಾದರೆ, ಸಕ್ಕರೆ ದರ ಹೆಚ್ಚಾಗುತ್ತದೆ. ಇದರಿಂದ ಕಬ್ಬಿಗೆ ಹೆಚ್ಚಿನ ಬೆಲೆ ಸಿಗುತ್ತದೆ. ಗ್ಯಾಸ್ ಮಾದರಿಯಲ್ಲಿ ಗೃಹಬಳಕೆ ಮತ್ತು ವಾಣಿಜ್ಯ ಬಳಕೆ ಎರಡು ರೀತಿಯಲ್ಲಿ ಸಕ್ಕರೆ ದರ ನಿಗದಿ ಪಡಿಸುವಂತೆ ಕೇಳಿಕೊಂಡಿದ್ದೇವೆ. ಹೀಗೆ ಮಾಡಿದರೆ ಕಬ್ಬಿಗೆ ಬೆಲೆ ನೀಡಲು ಸಾಧ್ಯವಾಗುತ್ತದೆ ಎಂದು ಸಚಿವ ಲಕ್ಷ್ಮಣ ಸವದಿ ಹೇಳಿದರು.

ಈ ಸಂದರ್ಭದಲ್ಲಿ ಸಚಿವ ಸತೀಶ್ ಜಾರಕಿಹೊಳಿ, ಲಕ್ಷ್ಮಣ್ ಸವದಿ, ಸಂತೋಷ್ ಲಾಡ್, ಯಶವಂತರಾಯ ಗೌಡ ಪಾಟೀಲ್, ಶಾಸಕ ಎನ್.ಎಚ್.ಕೋನರೆಡ್ಡಿ, ರೈತ ಮುಖಂಡರಾದ ಬಡಗಲಪುರ ನಾಗೇಂದ್ರ, ಚೂನಪ್ಪ ಪೂಜಾರಿ, ಕುರುಬೂರು ಶಾಂತಕುಮಾರ್, ಚುಕ್ಕಿ ನಂಜುಂಡಸ್ವಾಮಿ, ಸಕ್ಕರೆ ಕಾರ್ಖಾನೆಗಳ ಮಾಲೀಕರಾದ ಸಂಗಮೇಶ್ವರ ನಿರಾಣಿ, ಯೋಗೀಶ್ ಪಾಟೀಲ್, ಚನ್ನರಾಜ್ ಹಟ್ಟಿಹೊಳಿ, ವಿವೇಕ್ ಹೆಬ್ಬಾರ್, ಸಿಎಂ ಆರ್ಥಿಕ ಸಲಹೆಗಾರ ಎಲ್ ಅತೀಕ್, ಅಪರ ಮುಖ್ಯಕಾರ್ಯದರ್ಶಿ ತುಷಾರ್ ಗಿರಿನಾಥ್, ಜಿಲ್ಲಾಧಿಕಾರಿ ಮೊಹಮ್ಮದ್ ರೋಶನ್ ಮತ್ತಿತರರು ಉಪಸ್ಥಿತರಿದ್ದರು.

# ದೆಹಲಿಯಲ್ಲಿ ನ.1ರಿಂದ ಇಂಡಿ ರ‍್ಯಾಲಿ: ದೀಪಾವಳಿ ವ್ಯಾಪಾರಕ್ಕೆ ಧಕ್ಕೆ- ಜೋಶಿ ಆರೋಪ

**ಹುಬ್ಬಳ್ಳಿ, ಅ.27:** ದೇಶದಲ್ಲಿ ಹಬ್ಬದ ಶುಭ ಮುಹೂರ್ತದ ವೇಳೆ ನಡೆಯುವ ವ್ಯಾಪಾರ-ವಹಿವಾಟಿಗೆ ರಾಹುಲ್ ಗಾಂಧಿ ರ‍್ಯಾಲಿ ಮೂಲಕ ಅಡ್ಡಿಪಡಿಸುವ ಷಡ್ಯಂತ್ರ ರೂಪಿಸಿದಂತಿದೆ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಸಚಿವ ಪ್ರಲ್ಹಾದ ಜೋಶಿ ಆರೋಪಿಸಿದರು.

ಹುಬ್ಬಳ್ಳಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಹುಲ್ ಗಾಂಧಿ ಅವರು ನವೆಂಬರ್ 1 ರಂದು ಇಂಡಿ ಕೂಟದೊಂದಿಗೆ ರ‍್ಯಾಲಿ ನಡೆಸುತ್ತಿರುವುದು ಬಹುತೇಕ ಹಬ್ಬದ ವ್ಯಾಪಾರಕ್ಕೆ ಅಡ್ಡಿಪಡಿಸಲು ಹೂಡಿರುವ ಸಂಚಾಗಿದೆ ಎಂದು ಆರೋಪಿಸಿದ ಅವರು, ವಿಶ್ವದ ನಾಲ್ಕನೇ ಆರ್ಥಿಕತೆಯಾಗಿ ಬೆಳೆದಿರುವ ಭಾರತದ ಬೆಳವಣಿಗೆಯ ಬಗ್ಗೆ ಸಂಕಟವಾಗುತ್ತಿದೆ. ಆದ್ದರಿಂದ ಅತಿ ಹೆಚ್ಚಾಗಿ ವ್ಯಾಪಾರ ವಹಿವಾಟು ನಡೆಯುವ ದೀಪಾವಳಿ ಹಬ್ಬದ ಸಂದರ್ಭವನ್ನೇ ತಮ್ಮ ಹೋರಾಟಕ್ಕೆ ಆಯ್ದುಕೊಂಡಿರುವ ರಾಹುಲ್ ಗಾಂಧಿ ಭಾರತದ ಆರ್ಥಿಕತೆ, ವ್ಯಾಪಾರಿಗಳು ಹಾಗೂ ರೈತರ ಹಿತಾಸಕ್ತಿಗೆ ಯಾವತ್ತೂ ನೆರವಾಗಲು ಬಯಸುವುದಿಲ್ಲ. ಬದಲಿಗೆ ಅವರ ಆರ್ಥಿಕತೆಗೆ ಪೆಟ್ಟು ಕೊಡಲು ನೋಡುತ್ತಿದ್ದಾರೆಂದು ಆರೋಪಿಸಿದರು.





ಹಬ್ಬದ ಸಂಭ್ರಮದಲ್ಲಿ ದೇಶಾದ್ಯಂತ ವ್ಯಾಪಾರ-ವಹಿವಾಟು ಚುರುಕುಗೊಳ್ಳುತ್ತದೆ. ಶುಭ ಮುಹೂರ್ತದಲ್ಲಿ ಖರೀದಿ ಮಾಡುವ ಸಂಪ್ರದಾಯ ಭಾರತೀಯರಲ್ಲಿ ಮೊದಲಿನಿಂದಲೂ ರೂಢಿಯಲ್ಲಿದೆ. ಇಂತಹ ಸಮಯದಲ್ಲೇ ವ್ಯಾಪಾರ ಚಟುವಟಿಕೆಗೆ ಅಡ್ಡಿಪಡಿಸುವ ಉದ್ದೇಶದಿಂದ ಸಂಚು ರೂಪಿಸುತ್ತಿದ್ದಾರೆ ಎಂದೂ ಆರೋಪಿಸಿದರು.

ಅಲ್ಲದೇ ವ್ಯಾಪಾರಸ್ಥರು ಕೂಡ ರಾಹುಲ್ ಅವರಲ್ಲಿ ಮನವಿ ಮಾಡಿಕೊಂಡು ಹಬ್ಬದ ಸಂದರ್ಭದಲ್ಲಿ ರ‍್ಯಾಲಿ ಕೈಬಿಡುವಂತೆ ಕೇಳಿಕೊಂಡಿದ್ದರು. ನೀವು ಸರ್ಕಾರದ ವಿರುದ್ಧ ಹೋರಾಟ ನಡೆಸಲು ಒಪ್ಪಿಕೊಂಡರೆ ಕೇವಲ 30 ಸೆಕೆಂಡುಗಳಲ್ಲಿ ದೀಪಾವಳಿ ಹಬ್ಬದ ಸಂದರ್ಭದಲ್ಲಿ ನಡೆಯುವ ನಮ್ಮ ಹೋರಾಟ ಹಿಂತೆಗೆದುಕೊಳ್ಳುವುದಾಗಿ ಹೇಳಿದ್ದಾರೆ. ಇದು ಅವರ ದೇಶದ ಆರ್ಥಿಕತೆಯ ವಿರುದ್ಧದ ದುರುದ್ದೇಶ ಸ್ಪಷ್ಟವಾಗುತ್ತದೆ. ಆದರೆ ದೇಶದ ಜನರು ಎಂದಿಗೂ ರಾಹುಲ್ ಮಾತಿಗೆ ಸಮ್ಮತಿಸುವುದಿಲ್ಲ ಎಂದು ವಿಶ್ವಾಸವ್ಯಕ್ತಪಡಿಸಿದರು.

**ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಅರಾಜಕತೆ:**

ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಪ್ರಜಾಪ್ರಭುತ್ವವೇ ಇಲ್ಲದಂತಾಗಿದ್ದು, ಜನರ ಜೀವಕ್ಕೆ ರಕ್ಷಣೆ, ಬೆಲೆ ಇಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೂ ನಮ್ಮ ಭಾರತದಲ್ಲಿ ಡಾ. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ನೀಡಿರುವ ಸ್ವಾತಂತ್ರ್ಯವನ್ನು ಬಳಸಿಕೊಂಡು ಕೆಲವರು ದೇಶದ ಪ್ರಜಾಪ್ರಭುತ್ವದ ವಿರುದ್ಧವೇ ಮಾತನಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

ಫಾರೂಕ್ ಅಬ್ದುಲ್ಲಾ ಹಾಗೂ ಅವರ ತಂದೆ ಶೇಖ್ ಅಬ್ದುಲ್ಲಾ ಹಿಂದಿನಿಂದಲೂ ಇಂತಹ ಭಾರತ ವಿರೋಧಿ ಮತ್ತು ಪಾಕ್ ಪರವಾದ ಹೇಳಿಕೆ ನೀಡುತ್ತಾ ಬಂದಿದ್ದಾರೆ. ಡಾ. ಬಾಬಾಸಾಹೇಬ್ ಅಂಬೇಡ್ಕರ್ ನೀಡಿರುವ ಬಲಿಷ್ಠ ಸಂವಿಧಾನ ಹಾಗೂ ಭಾರತೀಯರ ಪ್ರಜಾಪ್ರಭುತ್ವದ ಮನೋಭಾವದಿಂದಾಗಿ ಅವರಿಗೆ ಇಂತಹ ಹೇಳಿಕೆ ನೀಡಲು ಸಾಧ್ಯವಾಗುತ್ತಿದೆ ಎಂದರು.

ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಜನರ ಮೇಲೆ ನಡೆಯುತ್ತಿರುವ ದೌರ್ಜನ್ಯ, ಹತ್ಯೆ ಹಾಗೂ ಅರಾಜಕತೆಯನ್ನು ಪಾಕಿಸ್ತಾನದ ಮಾಧ್ಯಮಗಳೇ ವರದಿ ಮಾಡುತ್ತಿವೆ. ಭಾರತದ ಕಾಶ್ಮೀರಕ್ಕೂ ಪಾಕ್ ಆಕ್ರಮಿತ ಕಾಶ್ಮೀರಕ್ಕೂ ಇರುವ ವ್ಯತ್ಯಾಸವನ್ನು ಅಲ್ಲಿನ ಜನರೇ ಸಾಮಾಜಿಕ ಜಾಲತಾಣಗಳ ಮೂಲಕ ನಿರೂಪಿಸುತ್ತಿದ್ದಾರೆ ಎಂದು ಹೇಳಿದರು.

**ನಾಸೀರುದ್ದೀನ್ ಶಾ ಹೇಳಿಕೆಗೆ ತಿರುಗೇಟು:**

ಬಿಜೆಪಿ ವಿರುದ್ಧ ನಟ ನಾಸೀರುದ್ದೀನ್ ಶಾ ನೀಡಿರುವ ಹೇಳಿಕೆಗೆ ಪ್ರತಿಕ್ರಿಯಿಸಿ, ಯಾರು ಸತ್ಯ ಹೇಳುತ್ತಿದ್ದಾರೆ, ಯಾರು ಸುಳ್ಳು ಹೇಳುತ್ತಿದ್ದಾರೆ ಎಂಬುದನ್ನು ದೇಶದ ಜನರು ಈಗಾಗಲೇ ಅರಿತಿದ್ದಾರೆ ಎಂದು ಪ್ರಲ್ಹಾದ್ ಜೋಶಿ ಅವರು ತಿರುಗೇಟು ನೀಡಿದರು.

# ಮುಖ್ಯ ಚುನಾವಣಾ ಆಯುಕ್ತರ ಅಮಾನತು ಕೋರಿ ಅರ್ಜಿ

**ಅರ್ಜಿದಾರರಿಗೆ 10 ದಿನಗಳ ಕಾಲಾವಕಾಶ ನೀಡಿದ ಸುಪ್ರೀಂ ಕೋರ್ಟ್**





**ನವದೆಹಲಿ, ಅ.27:** ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ಅಮಾನತು ಗೊಳಿಸುವಂತೆ ಕೋರಿ ಸಲ್ಲಿಸಲಾದ ಅರ್ಜಿಗಳ ವಿಚಾರಣೆಯಲ್ಲಿ, ಚುನಾವಣಾ ಆಯೋಗದ ಅಫಿಡವಿಟ್‌ಗೆ ಪ್ರತಿಕ್ರಿಯೆ ಸಲ್ಲಿಸಲು ಅರ್ಜಿದಾರರಿಗೆ ಸುಪ್ರೀಂ ಕೋರ್ಟ್ 10 ದಿನಗಳ ಕಾಲಾವಕಾಶ ನೀಡಿದೆ. ಇದೇ ವೇಳೆ, ಕೇಂದ್ರ ಚುನಾವಣಾ ಆಯೋಗಕ್ಕೆ ಹೆಚ್ಚುವರಿ ಅಫಿಡವಿಟ್ ಸಲ್ಲಿಸಲು ನ್ಯಾಯಾಲಯ ಅವಕಾಶ ನೀಡಿದೆ.

ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೇತೃತ್ವದ ನ್ಯಾಯಮೂರ್ತಿಗಳಾದ ಜೋಯ್ ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು ಅರ್ಜಿಗಳ ವಿಚಾರಣೆ ನಡೆಸಿತು. ಪ್ರಕರಣದ ಮುಂದಿನ ವಿಚಾರಣೆಯನ್ನು ನ.17ಕ್ಕೆ ನಿಗದಿಪಡಿಸಲಾಗಿದೆ. ಅರ್ಜಿದಾರರು ಸಲ್ಲಿಸಿರುವ ಅರ್ಜಿಗಳಲ್ಲಿ ಮುಖ್ಯ ಚುನಾವಣಾ ಆಯುಕ್ತರು ಏಕಪಕ್ಷೀಯವಾಗಿ ನಿರ್ಧಾರಗಳನ್ನು ಕೈಗೊಂಡಿದ್ದಾರೆ ಎಂದು ಆರೋಪಿಸ ಲಾಗಿದೆ. ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಸೇರಿದಂತೆ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಪ್ರಶ್ನೆಗಳನ್ನು ಎತ್ತಲಾಗಿದ್ದು, ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ಅಮಾನತು ಗೊಳಿಸುವಂತೆ ಮಧ್ಯಂತರ ಪರಿಹಾರ ಕೋರಲಾಗಿದೆ.



ನವದೆಹಲಿಯ ಕರ್ನಾಟಕ ಭವನದಲ್ಲಿ ನೆರವೇರಿದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ನವದೆಹಲಿಯ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ ಟಿ.ಬಿ.ಜಯಚಂದ್ರ, ಮುಖ್ಯಮಂತ್ರಿಯವರ ವಿಶೇಷ ಕರ್ತವ್ಯಾಧಿಕಾರಿ ಎಚ್.ಆಂಜನೇಯ ಮಹರ್ಷಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಕರ್ನಾಟಕ ಭವನದ ಸಿಬ್ಬಂದಿ ವರ್ಗದವರು ಭಾಗಿಯಾಗಿದ್ದರು.



ಈಶಾನ್ಯ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ನಡೆದ ಚುನಾವಣೆಯಲ್ಲಿ ವಿಜೇತ ಬಿಜೆಪಿ ಅಭ್ಯರ್ಥಿ ಶಶೀಲ್ ನಮೋಶಿ ಅವರಿಗೆ ಪ್ರಾದೇಶಿಕ ಆಯುಕ್ತರೂ ಆದ ಚುನಾವಣಾಧಿಕಾರಿ ಜಹೀರಾ ನಸೀಮ್ ಪ್ರಮಾಣ ಪತ್ರ ನೀಡಿದರು.

# ಬ್ಯಾಲೆಟ್ ಪೇಪರ್ ಮೂಲಕ ನಡೆದ ಎಂಎಲ್‌ಸಿ ಚುನಾವಣೆ: 4 ಸ್ಥಾನ ಎನ್‌ಡಿಎ ತೆಕ್ಕೆಗೆ



ಶಶೀಲ್ ನಮೋಶಿ



ಎ.ಪಿ.ರಂಗನಾಥ್



ಸಂಕನೂರ



ಕೆ.ಎಂ. ಸುರೇಶ್

**ಬೆಂಗಳೂರು, ಅ.27:** ರಾಜಕೀಯ ವಲಯದಲ್ಲಿ ಕುತೂಹಲ ಕೆರಳಿಸಿದ್ದ ವಿಧಾನ ಪರಿಷತ್ತಿನ ಪದವೀಧರ ಮತ್ತು ಶಿಕ್ಷಕರ ನಾಲ್ಕು ಕ್ಷೇತ್ರಗಳಿಗೆ ನಡೆದ ಚುನಾವಣೆಯ ಫಲಿತಾಂಶ ಪ್ರಕಟವಾಗಿದೆ. ಬಿಜೆಪಿ– ಜೆಡಿಎಸ್ ಮೈತ್ರಿಕೂಟಕ್ಕೆ ಗೆಲುವು ಧಕ್ಕಿದ್ದು, ಆಡಳಿತಾರೂಢ ಕಾಂಗ್ರೆಸ್‌ಗೆ ಭಾರೀ ಹಿನ್ನಡೆ ಆಗಿದೆ.

ಇದೇ ತಿಂಗಳ ಅಕ್ಟೋಬರ್ 23ರಂದು ಮತದಾನ ನಡೆದಿತ್ತು. ಇವತ್ತು ಫಲಿತಾಂಶ ಬಿಡುಗಡೆ ಆಗಿದ್ದು, ಬಿಜೆಪಿ ಜೆಡಿಎಸ್ ಮೈತ್ರಿ ಅಭ್ಯರ್ಥಿ ಎ.ಪಿ ರಂಗನಾಥ್ 908 ಮತಗಳ ಅಂತರದಿಂದ ಭಾರೀ ಗೆಲುವು ಪಡೆದಿದ್ದಾರೆ. ಈ ಮೂಲಕ 5 ಬಾರಿ ಗೆಲುವು ಸಾಧಿಸಿದ್ದ ಕಾಂಗ್ರೆಸ್ ಅಭ್ಯರ್ಥಿ ಪುಟ್ಟಣ್ಣ ಅವರಿಗೆ ಭಾರೀ ಹಿನ್ನಡೆ ಆಗಿದೆ.

ಎನ್‌ಡಿಎ ಅಭ್ಯರ್ಥಿ ಎ.ಪಿ.ರಂಗನಾಥ್ 908 ಮತಗಳ ಅಂತರದಿಂದ ಬಹುಮತ ಪಡೆದಿದ್ದಾರೆ. ಇಲ್ಲಿ ಪುಟ್ಟಣ್ಣ ಅವರಿಗೆ ಸೋಲುಂಟಾಗಿದೆ. ಈಶಾನ್ಯ ಶಿಕ್ಷಕರ ಕ್ಷೇತ್ರದಲ್ಲಿ ಬಿಜೆಪಿ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಗೆಲುವು ಸಾಧಿಸಿದ್ದಾರೆ. ಮೊದಲ ಸುತ್ತಿನಲ್ಲಿ 7239, ಎರಡನೇ ಸುತ್ತಿನಲ್ಲಿ 7311 ಸೇರಿ 14,540 ಮತಗಳನ್ನು ಪಡೆದರು. ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮತ್ತೂರ್ ಅವರಿಗೆ ಸೋಲಾಗಿದೆ.

ಪಶ್ಚಿಮ ಪದವೀಧರರ ಕ್ಷೇತ್ರದ ದ್ವೈವಾರ್ಷಿಕ ಚುನಾವಣೆ (2026) ಮತ ಎಣಿಕೆಧಾರವಾಡ ಕೃಷಿ ವಿವಿಯಲ್ಲಿ ನಡೆಯಿತು. ಒಟ್ಟು 14,001 ಮತಗಳಲ್ಲಿ ಮೊದಲ ಸುತ್ತಿನ ಎಣಿಕೆಯಲ್ಲಿ ಬಿಜೆಪಿ ಪಕ್ಷದ ಅಭ್ಯರ್ಥಿ ಸಂಕನೂರ 6459 ಮತಗಳು, ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಮೋಹನ್ ಲಿಂಬಿಕಾಯಿ ಅವರು 4394 ಮತ ಗಳಿಸಿದರು. ಇಲ್ಲಿ ಸಂಕನೂರು ಮುನ್ನಡೆ ಸಾಧಿಸಿದ್ದಾರೆ.

ಆಗ್ನೇಯ ಪದವೀಧರರ ಕ್ಷೇತ್ರದಲ್ಲಿ ಸಹ ಬಿಜೆಪಿಯ ಅಭ್ಯರ್ಥಿ ಕೆ.ಎಂ. ಸುರೇಶ್ ಮುನ್ನಡೆ ಕಾಯ್ದುಕೊಂಡಿದ್ದು, ಕಾಂಗ್ರೆಸ್ ಅಭ್ಯರ್ಥಿ ಶಶಿ ಹುಲಿಕುಂಟೆಮಠ ಅವರಿಗೆ ಹಿನ್ನಡೆ ಆಗಿದೆ.

**ಕಾಂಗ್ರೆಸ್ ಸರ್ಕಾರದ ಕೌಂಟ್ ಡೌನ್ ಶುರು!**

ವಿಧಾನ ಪರಿಷತ್ತಿನ ಪದವೀಧರ ಮತ್ತು ಶಿಕ್ಷಕರ ನಾಲ್ಕು ಕ್ಷೇತ್ರಗಳಿಗೆ ನಡೆದ ಚುನಾವಣೆ, ಫಲಿತಾಂಶಕ್ಕೆ ಸಂಬಂಧಿಸಿದಂತೆ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಅವರು ಎಕ್ಸ್ ಮೂಲಕ ಪ್ರತಿಕ್ರಿಯಿಸಿದ್ದಾರೆ. ಬಿಜೆಪಿ ಜೆಡಿಎಸ್‌ನ ಎನ್‌ಡಿಎ ಕೂಟದ ಅಭ್ಯರ್ಥಿಗಳು ಎರಡು ಕ್ಷೇತ್ರಗಳಲ್ಲಿ ಜಯ ಸಾಧಿಸಿದ್ದು ಇನ್ನೆರಡು ಕ್ಷೇತ್ರಗಳಲ್ಲಿ ಗೆಲುವಿನ ಸನಿಹದಲ್ಲಿರುವುದು ಕಳೆದ ಮೂರೂವರೆ ವರ್ಷದ ಕಾಂಗ್ರೆಸಿನ ದುರಾಳಿತದ ಬಗ್ಗೆ ಜನ ಭ್ರಮನಿರಸನ ಗೊಂಡಿರುವುದು ಬಹಳ ಸ್ಪಷ್ಟ. ಕಾಂಗ್ರೆಸ್ ಸರ್ಕಾರದ ಕೌಂಟ್ ಡೌನ್ ಶುರುವಾಗಿದ್ದು. ಸಿಎಂ ಡಿ.ಕೆ. ಶಿವಕುಮಾರ್ ಆಡಳಿತಕ್ಕೆ ಹಿಡಿದ ಕನ್ನಡಿ ಎಂದು ಟೀಕಿಸಿದರು. ರಾಜ್ಯದ ಸುಮಾರು 17 ಜಿಲ್ಲೆ ಮತ್ತು ಬೆಂಗಳೂರು ಮಹಾನಗರದಲ್ಲಿ ನಡೆದಂತಹ ಪದವೀಧರ ಮತ್ತು ಶಿಕ್ಷಕರ ವಿಧಾನ ಪರಿಷತ್ ಚುನಾವಣೆಯಲ್ಲಿ ಜನ ಕಾಂಗ್ರೆಸ್ ಅನ್ನು ತಿರಸ್ಕಾರ ಮಾಡಲು ಪ್ರಾರಂಭ ಮಾಡಿದ್ದಾರೆ. ಕಾಂಗ್ರೆಸ್ ಸರ್ಕಾರದ ಕೌಂಟ್ ಡೌನ್ ಪ್ರಾರಂಭವಾಗಿದೆ. ಇದು ಅಲ್ಲದೆ ಕಳೆದ ಮೂರು ತಿಂಗಳ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಆಡಳಿತಕ್ಕೂ ಕೂಡ ಹಿಡಿದಿರುವಂತಹ ಒಂದು ಸತ್ಯದ ಕನ್ನಡಿ ಎಂದು ಹೇಳಿದ್ದಾರೆ.

ಭಾರತೀಯ ಜನತಾ ಪಕ್ಷ ಮತ್ತು ಜೆಡಿಎಸ್ ಬರುವ ದಿನಗಳಲ್ಲಿ ಎಲ್ಲರೂ ಕೂಡ ಒಗ್ಗಟ್ಟಾಗಿ ಒಂದೇ ಧ್ವನಿಯಲ್ಲಿ ಕೆಲಸ ಮಾಡಿ ಜನಪರವಾದಂತಹ ಹೋರಾಟಗಳನ್ನು ಮಾಡಿದ್ದೆ ಆದರೆ, ಬರುವಂತಹ 2028ರ ವಿಧಾನಸಭಾ ಚುನಾವಣೆಯಲ್ಲಿ ಎರಡು ಮೂರು ಅಂಶ ಬಹುಮತ ನಮ್ಮ ಎನ್‌ಡಿಎ ಕೂಟಕ್ಕೆ ಬರುವುದು ಶತಸಿದ್ಧ ಎಂದು ತಿಳಿಸಿದರು. ಪದವೀಧರ ಮತ್ತು ಶಿಕ್ಷಕರ ಎಲ್ಲ ಮತದಾರರಿಗೂ ಅವರು ಹೃದಯ ಪೂರ್ವಕವಾದ ಧನ್ಯವಾದ ತಿಳಿಸಿದರು. ಅಭ್ಯರ್ಥಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಈ ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಗಳ ಗೆಲುವಿಗೆ ಶ್ರಮಿಸಿದ ಎನ್‌ಡಿಎ ನಾಯಕರು ಹಾಗೂ ಎರಡೂ ಪಕ್ಷಗಳ ಕಾರ್ಯಕರ್ತರಿಗೂ ಧನ್ಯವಾದ ತಿಳಿಸಿದರು.

# ನಿರ್ವಹಣೆಗೆ ಪೂರಕ ಆಯವ್ಯಯದಲ್ಲಿ ಹೆಚ್ಚುವರಿ ಅನುದಾನ ನೀಡಿ: ಡಾ. ಅಜಯ್ ಧರ್ಮಸಿಂಗ್ ಮನವಿ

- **ತುರ್ತು ಸಣ್ಣ ನೀರಾವರಿ ಕಾಮಗಾರಿಗಳಿಗೆ ಹೆಚ್ಚುವರಿ ಅನುದಾನ ಒದಗಿಸಲು ಮುಖ್ಯಮಂತ್ರಿ ಅವರ ಆರ್ಥಿಕ ಸಲಹೆಗಾರ ಅತೀಕ್ ಅವರೊಂದಿಗೆ ಸಮಾಲೋಚನೆ**
- **SCP/TSP ಯೋಜನೆಯಡಿ ಹೆಚ್ಚುವರಿ ಅನುದಾನ ಬಿಡುಗಡೆಗೂ ಮನವಿ**
- **ಸಣ್ಣ ಮತ್ತು ಅತಿಸಣ್ಣ ರೈತರಿಗೆ ಕೊಳವೆಬಾವಿ ಸೌಲಭ್ಯ ಕಲ್ಪಿಸಿ ಕೃಷಿಗೆ ನೆರವಾಗಲು ಒತ್ತು**

**ಬೆಂಗಳೂರು, ಅ.27:** ರಾಜ್ಯದ ಹಲವು ಜಿಲ್ಲೆಗಳಲ್ಲಿ ಎದುರಾಗಿರುವ ಬರ ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ನಿರ್ವಹಿಸಲು ಹಾಗೂ ತುರ್ತು ಸಣ್ಣ ನೀರಾವರಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಮುಂಬರುವ ಪೂರಕ ಆಯವ್ಯಯದಲ್ಲಿ ಹೆಚ್ಚುವರಿ ಅನುದಾನ ಒದಗಿಸುವಂತೆ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ. ಅಜಯ್ ಧರ್ಮಸಿಂಗ್ ಮನವಿ ಮಾಡಿದ್ದಾರೆ.

ಈ ಸಂಬಂಧ ಮುಖ್ಯಮಂತ್ರಿ ಅವರ ಆರ್ಥಿಕ ಸಲಹೆಗಾರ ಅತೀಕ್ ಅವರನ್ನು ಭೇಟಿ ಮಾಡಿದ ಸಚಿವರು, ರಾಜ್ಯದ ವಿವಿಧ ಭಾಗಗಳಿಂದ ಶಾಸಕರು ಸಲ್ಲಿಸಿರುವ ಸಣ್ಣ ನೀರಾವರಿ ಕಾಮಗಾರಿಗಳ ಬೇಡಿಕೆಗಳು, ನೀರಿನ ಸಂಗ್ರಹಣೆ, ಬರ ನಿರ್ವಹಣೆ ಹಾಗೂ ತುರ್ತು ನೀರಾವರಿ ಮೂಲಸೌಕರ್ಯ ಕಾಮಗಾರಿಗಳಿಗೆ ಅಗತ್ಯವಿರುವ ಅನುದಾನದ ಕುರಿತು ಸಮಾಲೋಚನೆ ನಡೆಸಿದರು.

ರಾಜ್ಯದ ಹಲವು ಜಿಲ್ಲೆಗಳು ಬರ ಪರಿಸ್ಥಿತಿಯನ್ನು ಎದುರಿಸುತ್ತಿದ್ದು, ಗ್ರಾಮೀಣ ಪ್ರದೇಶಗಳಲ್ಲಿ ನೀರಿನ ಸಂಗ್ರಹಣೆ ಮತ್ತು ಸಣ್ಣ ನೀರಾವರಿ ಮೂಲಸೌಕರ್ಯವನ್ನು ಬಲಪಡಿಸುವ ಅಗತ್ಯ ಹೆಚ್ಚಾಗಿದೆ. ಶಾಸಕರಿಂದಲೂ ಅನೇಕ ತುರ್ತು ಕಾಮಗಾರಿಗಳ ಬಗ್ಗೆ ಮನವಿಗಳು ಬಂದಿವೆ. ಪೂರಕ ಆಯವ್ಯಯದ ಮೂಲಕ ಹೆಚ್ಚುವರಿ ಅನುದಾನ ಒದಗಿಸಿದರೆ ಅಗತ್ಯ ಕಾಮಗಾರಿಗಳನ್ನು ಆದ್ಯತೆಯಿಂದ ಕೈಗೆತ್ತಿಕೊಳ್ಳಲು ಸಾಧ್ಯವಾಗುತ್ತದೆ, ಎಂದು ಡಾ. ಅಜಯ್ ಧರ್ಮಸಿಂಗ್ ತಿಳಿಸಿದರು.



ಇದೇ ವೇಳೆ, SCPTSP ಯೋಜನೆಯಡಿ ಸಣ್ಣ ನೀರಾವರಿ ಇಲಾಖೆಗೆ ಹೆಚ್ಚುವರಿ ಅನುದಾನ ಬಿಡುಗಡೆ ಮಾಡುವಂತೆಯೂ ಸಚಿವರು ಮನವಿ ಮಾಡಿದರು. ಈ ಅನುದಾನದ ಮೂಲಕ ಅರ್ಹ ಫಲಾನುಭವಿಗಳಿಗೆ ಕೊಳವೆಬಾವಿಗಳನ್ನು ಕೊರೆಸಿಕೊಟ್ಟು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸಣ್ಣ ಹಾಗೂ ಅತಿಸಣ್ಣ ಹಿಡುವಳಿದಾರ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅಗತ್ಯವಾದ ನೀರಾವರಿ ಸೌಲಭ್ಯ ಒದಗಿಸಲು ಹೆಚ್ಚಿನ ಅವಕಾಶ ಕಲ್ಪಿಸಬಹುದು ಎಂದು ಅವರು ವಿವರಿಸಿದರು.

ಸಣ್ಣ ಮತ್ತು ಅತಿಸಣ್ಣ ಹಿಡುವಳಿದಾರರಿಗೆ ನೀರಾವರಿ ಸೌಲಭ್ಯ ಸಿಗುವುದು ಅವರ ಕೃಷಿ ಉತ್ಪಾದನೆ ಮತ್ತು ಆದಾಯ ಭದ್ರತೆಗೆ ಅತ್ಯಂತ ಮುಖ್ಯ. ಖಅಕಖಿಖಕ ಅಡಿಯಲ್ಲಿ ಹೆಚ್ಚುವರಿ ಅನುದಾನ ದೊರೆತರೆ ಹೆಚ್ಚಿನ ಅರ್ಹ ರೈತರಿಗೆ ಕೊಳವೆಬಾವಿ ಸೌಲಭ್ಯ ಕಲ್ಪಿಸಿ, ಬರ ಪರಿಸ್ಥಿತಿಯ ನಡುವೆಯೂ ಕೃಷಿ ಚಟುವಟಿಕೆಗಳಿಗೆ ಬೆಂಬಲ ನೀಡಲು ಸಾಧ್ಯವಾಗುತ್ತದೆ, ಎಂದು ಸಚಿವರು ಹೇಳಿದರು.

ಬರ ನಿರ್ವಹಣೆಯನ್ನು ಕೇವಲ ತಾತ್ಕಾಲಿಕ ಪರಿಹಾರಕ್ಕೆ ಸೀಮಿತಗೊಳಿಸದೆ, ಕೆರೆಗಳು, ಚೆಕ್‌ಡ್ಯಾಂಗಳು, ಬಾಂದಾರಗಳು, ಅಂತರ್ಜಲ ಮರುಪೂರಣ ಹಾಗೂ ಇತರೆ ಸಣ್ಣ ನೀರಾವರಿ ಮೂಲಸೌಕರ್ಯವನ್ನು ಬಲಪಡಿಸುವ ಮೂಲಕ ದೀರ್ಘಕಾಲಿಕ ಜಲ ಭದ್ರತೆ ನಿರ್ಮಿಸುವ ಅಗತ್ಯವಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.

ಪ್ರಸ್ತುತ ಪರಿಸ್ಥಿತಿಯನ್ನು ತುರ್ತು ಅಗತ್ಯವೆಂದು ಪರಿಗಣಿಸಿ, ಸಣ್ಣ ನೀರಾವರಿ ಇಲಾಖೆಗೆ ಪೂರಕ ಆಯವ್ಯಯದಲ್ಲಿ ಹೆಚ್ಚುವರಿ ಅನುದಾನ ಹಾಗೂ ಖಅಕಖಿಖಕ ಅಡಿಯಲ್ಲಿ ಅಗತ್ಯ ಅನುದಾನ ಒದಗಿಸುವ ಕುರಿತು ಮಾನ್ಯ ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡುವಂತೆ ಆರ್ಥಿಕ ಸಲಹೆಗಾರರನ್ನು ಕೋರಿದ್ದೇನೆ, ಎಂದು ಡಾ. ಅಜಯ್ ಧರ್ಮಸಿಂಗ್ ಹೇಳಿದರು. ಈ ಸಂದರ್ಭದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾರ್ಯದರ್ಶಿ ರಾಜೇಶ್ ಅಮ್ಮಿನಭಾವಿ ಹಾಗೂ ಇಲಾಖೆಯ ಎರಡು ವಲಯಗಳ ಮುಖ್ಯ ಅಭಿಯಂತರರು ಹಾಜರಿದ್ದರು.

# ವಂದೇ ಮಾತರಂ ಪೂರ್ಣಗಾಯನ ಕಡ್ಡಾಯ ಕೇಂದ್ರದ ಪ್ರತಿಕ್ರಿಯೆ ಕೇಳಿದ ಸುಪ್ರೀಂಕೋರ್ಟ್



**ನವದೆಹಲಿ:** ವಂದೇ ಮಾತರಂನ ಸಂಪೂರ್ಣ ಆರು ಚರಣಗಳನ್ನು ಹಾಡುವುದನ್ನು ಕಡ್ಡಾಯಗೊಳಿಸಿರುವ ಕೇಂದ್ರ ಸರ್ಕಾರದ ನಿರ್ದೇಶನಗಳನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಗಳ ಕುರಿತು ಸುಪ್ರೀಂ ಕೋರ್ಟ್ ಕೇಂದ್ರ ಸರ್ಕಾರದ ಪ್ರತಿಕ್ರಿಯೆ ಕೇಳಿದೆ. ಧಾರ್ಮಿಕ ಸ್ವಾತಂತ್ರ್ಯ, ಜಾತ್ಯತೀತ ತತ್ವ ಮತ್ತು ವೈಯಕ್ತಿಕ ಹಕ್ಕುಗಳಿಗೆ ಸಂಬಂಧಿಸಿದ ಈ ವಿವಾದದ ವಿಚಾರಣೆಯನ್ನು ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್ ನೇತೃತ್ವದ ನ್ಯಾಯಪೀಠ ನಡೆಸಿತು.

ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ನ್ಯಾಯಪೀಠವು ಬೌದ್ಧ ಕಾರ್ಯಕರ್ತರೊಬ್ಬರು ಹಾಗೂ ನಿವೃತ್ತ ಐಎಎಸ್ ಅಧಿಕಾರಿಯೊಬ್ಬರು ಸಲ್ಲಿಸಿರುವ ಅರ್ಜಿಗಳ ವಿಚಾರಣೆ ನಡೆಸಿ ಕೇಂದ್ರಕ್ಕೆ ನೋಟಿಸ್ ಜಾರಿ ಮಾಡಿದೆ. ವಂದೇ ಮಾತರಂನ ಸಂಪೂರ್ಣ ಆವೃತ್ತಿಯನ್ನು ಹಾಡುವುದಕ್ಕೆ ಸಂಬಂಧಿಸಿದ ಸರ್ಕಾರದ ನಿರ್ದೇಶನಗಳ ಸಾಂವಿಧಾನಿಕ ಮಾನ್ಯತೆ ಈ ಅರ್ಜಿಗಳಲ್ಲಿ ಪ್ರಶ್ನಿಸಲಾಗಿದೆ.

ನಾಗಪುರದ ಬೌದ್ಧ ಕಾರ್ಯಕರ್ತ ಬಿ.ಡಿ. ಬೋರ್ಕರ್ ಅವರು ಸಲ್ಲಿಸಿರುವ ಅರ್ಜಿಯಲ್ಲಿ, ಕೇಂದ್ರ ಗೃಹ ಸಚಿವಾಲಯವು 2026ರ ಜನವರಿ 28 ಮತ್ತು ಜುಲೈ 9ರಂದು ಹೊರಡಿಸಿರುವ ನಿರ್ದೇಶನಗಳನ್ನು ಪ್ರಶ್ನಿಸಲಾಗಿದೆ. ಈ ನಿರ್ದೇಶನಗಳ ಮೂಲಕ ಸರ್ಕಾರಿ ಕಾರ್ಯಕ್ರಮಗಳಲ್ಲಿ ವಂದೇ ಮಾತರಂನ ಆರು ಚರಣಗಳ ಸಂಪೂರ್ಣ ಆವೃತ್ತಿಯನ್ನು ಹಾಡುವುದನ್ನು ಕಡ್ಡಾಯಗೊಳಿಸಿರುವುದು ಧಾರ್ಮಿಕ ಸ್ವಾತಂತ್ರ್ಯ ಮತ್ತು ಜಾತ್ಯತೀತ ತತ್ವಗಳಿಗೆ ವಿರುದ್ಧವಾಗಿದೆ ಎಂಬುದು ಅವರ ವಾದವಾಗಿದೆ.

ವಂದೇ ಮಾತರಂನ ಮೊದಲ ಎರಡು ಚರಣಗಳು ಪ್ರಕೃತಿಯನ್ನು ಸ್ತುತಿಸುತ್ತವೆ. ಆದರೆ ಮೂರರಿಂದ ಆರನೇ ಚರಣಗಳಲ್ಲಿ ದುರ್ಗಾ, ಲಕ್ಷ್ಮಿ ಮತ್ತು ಸರಸ್ವತಿ ದೇವತೆಗಳ ಉಲ್ಲೇಖಗಳಿವೆ.

ಸಂಪೂರ್ಣ ಗೀತೆಯನ್ನು ಕಡ್ಡಾಯಗೊಳಿಸುವುದರಿಂದ ಧಾರ್ಮಿಕ ನಂಬಿಕೆಗಳ ವಿಚಾರದಲ್ಲಿ ಭಿನ್ನಾಭಿಪ್ರಾಯ ಹೊಂದಿರುವವರ ಹಕ್ಕುಗಳಿಗೆ ಧಕ್ಕೆಯಾಗಬಹುದು ಎಂದು ಅರ್ಜಿದಾರರು ಪ್ರತಿಪಾದಿಸಿದ್ದಾರೆ.

ನಿವೃತ್ತ ಐಎಎಸ್ ಅಧಿಕಾರಿ ಬಾಲಕೃಷ್ಣನ್ ಸತ್ಯಭಾಮಾ ಮಾವೋಜೀ ಅವರು ಕೂಡ ಇದೇ ವಿಚಾರವಾಗಿ ಅರ್ಜಿ ಸಲ್ಲಿಸಿದ್ದಾರೆ. ಆರು ಚರಣಗಳ ಗೀತೆಯನ್ನು ಹಾಡುವುದನ್ನು ಕಡ್ಡಾಯಗೊಳಿಸುವುದು ತಮ್ಮ ಧಾರ್ಮಿಕ ಸ್ವಾತಂತ್ರ್ಯ ಮತ್ತು ಆತ್ಮಸಾಕ್ಷಿಯ ಸ್ವಾತಂತ್ರ್ಯಕ್ಕೆ ಧಕ್ಕೆ ತರುತ್ತದೆ ಎಂದು ಅವರು ವಾದಿಸಿದ್ದಾರೆ. ಎರಡು ಚರಣಗಳ ಆವೃತ್ತಿಯನ್ನೇ ರಾಷ್ಟ್ರೀಯ ಗೀತೆಯಾಗಿ ಪರಿಗಣಿಸಬೇಕು ಮತ್ತು ಕೇಂದ್ರ ಗೃಹ ಸಚಿವಾಲಯದ ನಿರ್ದೇಶನಗಳನ್ನು ರದ್ದುಗೊಳಿಸಬೇಕು ಎಂಬುದು ಅವರ ಮನವಿಯಾಗಿದೆ.

ಇದಕ್ಕೂ ಮೊದಲು, ಕರ್ನಾಟಕ ಸಂಗೀತಗಾರ ಟಿ.ಎಂ. ಕೃಷ್ಣ ಅವರು ವಂದೇ ಮಾತರಂಗೆ ಸಂಬಂಧಿಸಿದ ಕಾನೂನು ತಿದ್ದುಪಡಿ ಹಾಗೂ ಕೇಂದ್ರದ ನಿರ್ದೇಶನ ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದರು. ರಾಷ್ಟ್ರೀಯ ಗೀತೆ ಹಾಡುವುದನ್ನು ಉದ್ದೇಶಪೂರ್ವಕವಾಗಿ ತಡೆಯುವುದು ಅಥವಾ ಹಾಡುವ ಸಭೆಗೆ ಅಡ್ಡಿಪಡಿಸುವುದಕ್ಕೆ ಮೂರು ವರ್ಷಗಳವರೆಗೆ ಜೈಲುಶಿಕ್ಷೆ ವಿಧಿಸಲು ಅವಕಾಶ ಕಲ್ಪಿಸಿರುವ ಕಾನೂನು ತಿದ್ದುಪಡಿಯನ್ನೂ ಅವರು ಪ್ರಶ್ನಿಸಿದ್ದಾರೆ.

ಈ ಹಿಂದೆ ಕೃಷ್ಣ ಅವರ ಅರ್ಜಿಯ ವಿಚಾರಣೆ ವೇಳೆ, ಧಾರ್ಮಿಕ ನಂಬಿಕೆ ಅಥವಾ ಆತ್ಮಸಾಕ್ಷಿಯ ಕಾರಣದಿಂದ ಗೀತೆಯ ಒಂದು ಅಥವಾ ಹೆಚ್ಚಿನ ಚರಣಗಳನ್ನು ಹಾಡದ ವ್ಯಕ್ತಿಯ ವಿರುದ್ಧ ಕ್ರಿಮಿನಲ್ ಕ್ರಮ ಕೈಗೊಳ್ಳಬಾರದು ಎಂಬ ಅಭಿಪ್ರಾಯವನ್ನು ನ್ಯಾಯಪೀಠ ವ್ಯಕ್ತಪಡಿಸಿತ್ತು. ಈ ಮೂರು ಅರ್ಜಿಗಳಿಗೆ ಸಂಬಂಧಿಸಿದ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ನವೆಂಬರ್ 30ಕ್ಕೆ ನಿಗದಿಪಡಿಸಿದೆ.

# ಮುಂದೆ ಮೋದಿ ಮನೆ ಎದುರೇ ಬೃಹತ್ ಧರಣಿ: ಕಾಂಗ್ರೆಸ್



ನವದೆಹಲಿ, ಅ. 27: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ವಿರುದ್ಧ ದೆಹಲಿಯಲ್ಲಿ ಅಕ್ಟೋಬರ್ 30ರಂದು ಕಾಂಗ್ರೆಸ್ 'ಅಣಕು ವಜಾಗೊಳಿಸುವಿಕೆ' (ಮೋಕ್ ಇಂಪೀಚ್‌ಮೆಂಟ್) ಪ್ರತಿಭಟನೆ ಮತ್ತು ನವೆಂಬರ್ 1ರಂದು ದೆಹಲಿಯಲ್ಲಿ 'ಇಂಡಿಯಾ' ಮೈತ್ರಿಕೂಟದ ಬೃಹತ್ ಪ್ರತಿಭಟನಾ ಸಮಾವೇಶ ನಡೆಸಲು ನಿರ್ಧರಿಸಿದೆ. ಆದರೆ, ಪ್ರತಿಭಟನೆಗಾಗಿ ರಾಮಲೀಲಾ ಮೈದಾನದಲ್ಲಿ ವೇದಿಕೆ, ಶಾಮಿಯಾನ ಹಾಕಲು ಪೊಲೀಸರು ತಡೆಯೊಡ್ಡಿದ್ದಾರೆ. ಮೋದಿ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿರುವ ಕಾಂಗ್ರೆಸ್, "ದೆಹಲಿಯ ಯಾವುದೇ ಮೂಲೆಯಲ್ಲಾದರೂ ಸರಿ, ಪ್ರತಿಭಟನೆ ನಡೆಸಿಯೇ ತೀರುತ್ತೇವೆ" ಎಂದು ಸವಾಲು ಹಾಕಿದೆ.

ದೆಹಲಿಯ ರಾಮಲೀಲಾ ಮೈದಾನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಸಿ ವೇಣುಗೋಪಾಲ್, "ಇಂಡಿಯಾ ಮೈತ್ರಿಕೂಟದ 21 ಪಕ್ಷಗಳು ಈ ಕಾರ್ಯಕ್ರಮವನ್ನು ಮೊದಲು ಸರ್ಕಾರಿ ಸ್ವಾಮ್ಯದ ಅಶೋಕ್ ಹೋಟೆಲ್‌ನಲ್ಲಿ ನಡೆಸಲು ಯೋಜಿಸಿದ್ದವು. ಆದರೆ ಅಲ್ಲಿ ಅನುಮತಿ ನಿರಾಕರಿಸಲಾಯಿತು. ನಂತರ ರಾಮಲೀಲಾ ಮೈದಾನದಲ್ಲಿ ಕಾರ್ಯಕ್ರಮ ನಡೆಸಲು ಮೈತ್ರಿಕೂಟ ನಿರ್ಧರಿಸಿತು. ನಾವು ಅಗತ್ಯ ಅನುಮತಿಗಳನ್ನು ಹೊಂದಿದ್ದರೂ ಪೊಲೀಸರು ಸಿದ್ಧತೆಗಳನ್ನು ತಡೆದಿದ್ದಾರೆ" ಎಂದು ಆರೋಪಿಸಿದ್ದಾರೆ.

"ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸುವ ತನಕ ವಿರೋಧ ಪಕ್ಷಗಳು ತಮ್ಮ ಹೋರಾಟವನ್ನು ಮುಂದುವರಿಸಲಿವೆ. ಅವರು (ಮೋದಿ ಸರ್ಕಾರ) ನಮ್ಮನ್ನು ಇಲ್ಲಿ ತಡೆದರೆ, ನಾವು ಅಮಿತ್ ಶಾ ಅವರ ಮನೆ, ಪ್ರಧಾನಿ ಮೋದಿ ಅವರ ಮನೆಗೆ ತೆರಳಿ ಅಲ್ಲಿಯೇ ಬೃಹತ್ ಧರಣಿ ನಡೆಸಲಿದ್ದೇವೆ" ಎಂದು ಎಚ್ಚರಿಸಿದ್ದಾರೆ.

"ಅಮಿತ್ ಶಾ ಅವರೇ, ನೀವು ಎಷ್ಟು ಅನುಮತಿಗಳನ್ನು ನಿರಾಕರಿಸುತ್ತೀರಿ. ಎಷ್ಟು ಜನರನ್ನು ತಡೆಯುತ್ತೀರಿ. ಮೊದಲಿಗೆ ಅವರು ಚುನಾವಣಾ ವ್ಯವಸ್ಥೆಯನ್ನು ನಾಶಪಡಿಸಿದರು, ಈಗ ನಮ್ಮ ಪ್ರಜಾಪ್ರಭುತ್ವವನ್ನು ರಕ್ಷಿಸಲು ಹೋರಾಡುವವರ ಧ್ವನಿಯನ್ನು ಅಡಗಿಸಲು ಎಲ್ಲ ರೀತಿಯ ಕುತಂತ್ರಗಳನ್ನು ಮಾಡುತ್ತಿದ್ದಾರೆ. ಆದರೆ, ನಮ್ಮ ಗುರಿ ಸಾಧನೆಯಾಗುವವರೆಗೆ ನಾವು ಕೊನೆಯವರೆಗೂ ಹೋರಾಡುತ್ತೇವೆ" ಎಂದು ವೇಣುಗೋಪಾಲ್ ಹೇಳಿದ್ದಾರೆ.

ಇಂಡಿಯಾ ಮೈತ್ರಿಕೂಟವು ಅಕ್ಟೋಬರ್ 25 ರಿಂದ ನವೆಂಬರ್ 3 ರವರೆಗೆ ರಾಮಲೀಲಾ ಮೈದಾನವನ್ನು ಬುಕ್ ಮಾಡಿದೆ. ಹಾಗಾಗಿ, ಅಲ್ಲಿ ನಮ್ಮ ಕಾರ್ಯಕ್ರಮವನ್ನು ನಡೆಸಲು ಅನುಮತಿ ನಿರಾಕರಿಸಲು ಯಾವುದೇ ಕಾರಣವಿಲ್ಲ" ಎಂದು ಕಾಂಗ್ರೆಸ್ ಪ್ರತಿಪಾದಿಸಿದ್ದಾರೆ.

ಜ್ಞಾನೇಶ್ ಕುಮಾರ್ ಅವರನ್ನು ಹುದ್ದೆಯಿಂದ ವಜಾಗೊಳಿಸುವಂತೆ ಕೋರಿ ವಿರೋಧ ಪಕ್ಷಗಳು ಸಂಸತ್ತಿನಲ್ಲಿ ಈಗಾಗಲೇ ಎರಡು ಬಾರಿ ನೋಟಿಸ್‌ಗಳನ್ನು ಸಲ್ಲಿಸಿವೆ. ಮೊದಲ ನೋಟಿಸ್‌ಅನ್ನು ಲೋಕಸಭೆ ಮತ್ತು ರಾಜ್ಯಸಭೆ ಎರಡಲ್ಲೂ ತಿರಸ್ಕರಿಸಿದ್ದರೆ, ಎರಡನೇ ಬಾರಿಗೆ ಸಲ್ಲಿಸಲಾದ ನೋಟಿಸ್‌ಗಳು ಮೇಲ್ಮನೆಯಲ್ಲಿ ಇನ್ನೂ ಪರಿಶೀಲನೆಗೆ ಬಾಕಿ ಉಳಿದಿವೆ.

ಸುಪ್ರೀಂ ಕೋರ್ಟ್‌ನ ಹಾಲಿ ನ್ಯಾಯಾಧೀಶರನ್ನು ಹುದ್ದೆಯಿಂದ ತೆಗೆದುಹಾಕುವ ಪ್ರಕ್ರಿಯೆಯಂತೆಯೇ ಮುಖ್ಯ ಚುನಾವಣಾ ಆಯುಕ್ತರನ್ನು ಕೂಡ ಸಂಸತ್ತು ವಜಾಗೊಳಿಸಬಹುದು. ಇದಕ್ಕೆ ಸಂಸತ್ತಿನ ಉಭಯ ಸದನಗಳಲ್ಲಿ ವಿಶೇಷ ಬಹುಮತದ ಅಗತ್ಯವಿದೆ.

ಅಥವಾ 2023ರ ಮುಖ್ಯ ಚುನಾವಣಾ ಆಯುಕ್ತರು ಮತ್ತು ಚುನಾವಣಾ ಆಯುಕ್ತರ ನೇಮಕಾತಿ ಹಾಗೂ ಸೇವಾ ಷರತ್ತುಗಳ ಕಾಯ್ದೆಯ ಪ್ರಕಾರ, ಚುನಾವಣಾ ಆಯುಕ್ತರೇ ಸ್ವತಃ ರಾಷ್ಟ್ರಪತಿಗಳಿಗೆ ಲಿಖಿತ ರಾಜೀನಾಮೆ ಸಲ್ಲಿಸಿ ಹುದ್ದೆಯಿಂದ ನಿರ್ಗಮಿಸಬೇಕು.

# ರಾಹುಲ್‌ಗೆ ಮತ್ತೊಮ್ಮೆ ಪತ್ರ ಬರೆದ ದೆಹಲಿ ವ್ಯಾಪಾರಿಗಳ ಸಂಘ

ನವದೆಹಲಿ, ಅ. 27: ದೆಹಲಿಯಲ್ಲಿ ನವೆಂಬರ್ 1ರಂದು ನಡೆಯಲಿರುವ ಇಂಡಿಯಾ (ಐಓಆಐಂ) ಮೈತ್ರಿಕೂಟದ ಬೃಹತ್ ಪ್ರತಿಭಟನಾ ರ್‍ಯಾಲಿಯನ್ನು ದೀಪಾವಳಿ ಹಬ್ಬ ಮುಗಿದ ಬಳಿಕ ಆಯೋಜಿಸುವಂತೆ ವ್ಯಾಪಾರಿಗಳ ಸಂಘಟನೆ ಮತ್ತೊಮ್ಮೆ ಕಾಂಗ್ರೆಸ್ ನಾಯಕ ಹಾಗೂ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಮನವಿ ಮಾಡಿದೆ. ಹಬ್ಬದ ಖರೀದಿ ಸಮಯದಲ್ಲಿ ರ್‍ಯಾಲಿ ನಡೆದರೆ ವ್ಯಾಪಾರ ವಹಿವಾಟಿಗೆ ಭಾರಿ ಹೊಡೆತ ಬೀಳಬಹುದು ಎಂಬ ಆತಂಕವನ್ನು ವ್ಯಾಪಾರಿಗಳು ವ್ಯಕ್ತಪಡಿಸಿದ್ದಾರೆ.

ದೆಹಲಿಯ ವ್ಯಾಪಾರಿಗಳು ಮತ್ತು ಉದ್ಯಮಿಗಳ ಪ್ರಮುಖ ಸಂಘಟನೆಯಾದ ಚೇಂಬರ್ ಆಫ್ ಟ್ರೇಡ್ ಅಂಡ್ ಇಂಡಸ್ಟ್ರಿ (ಸಿಟಿಐ) ಅಧ್ಯಕ್ಷ ಬ್ರಿಜೇಶ್ ಗೋಯಲ್ ಅವರು ರಾಹುಲ್ ಗಾಂಧಿಗೆ ವಿವರವಾದ ಪತ್ರ ಬರೆದಿದ್ದಾರೆ. ನವೆಂಬರ್ 1ರಂದು ರಾಮಲೀಲಾ ಮೈದಾನದಲ್ಲಿ ನಡೆಯಲಿರುವ ರ್‍ಯಾಲಿಗೆ ಸುಮಾರು 10 ಲಕ್ಷ ಜನ ಸೇರುವ ನಿರೀಕ್ಷೆಯಿರುವುದರಿಂದ, ಕಾರ್ಯಕ್ರಮವನ್ನು ದೀಪಾವಳಿ ನಂತರಕ್ಕೆ ಮುಂದೂಡಬೇಕು ಎಂದು ಒತ್ತಾಯಿಸಿದ್ದಾರೆ. ಪತ್ರದ ಪ್ರತಿಯನ್ನು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೂ ಕಳುಹಿಸಲಾಗಿದ್ದು, ಮೈತ್ರಿಕೂಟದ ಇತರ ಪಕ್ಷಗಳೊಂದಿಗೆ ಚರ್ಚಿಸುವಂತೆ ಮನವಿ ಮಾಡಲಾಗಿದೆ.

ಈ ಹಿಂದೆ ಸಲ್ಲಿಸಿದ್ದ ಮನವಿಯನ್ನು ರಾಹುಲ್ ಗಾಂಧಿ ತಿರಸ್ಕರಿಸಿದ ಹಿನ್ನೆಲೆಯಲ್ಲಿ ವ್ಯಾಪಾರಿಗಳು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸೋಮವಾರ ಸಾಮಾಜಿಕ ಜಾಲತಾಣದಲ್ಲಿ ಪ್ರಕಟಿಸಿದ ಸಂದೇಶದಲ್ಲಿ ರಾಹುಲ್ ಗಾಂಧಿ, ನವೆಂಬರ್ 1ರ ಪ್ರತಿಭಟನಾ ರ್‍ಯಾಲಿ ನಿಗದಿಯಂತೆ ನಡೆಯಲಿದೆ ಎಂಬ ಸೂಚನೆ ನೀಡಿದ್ದಾರೆ ಎಂದು ಬ್ರಿಜೇಶ್ ಗೋಯಲ್ ತಿಳಿಸಿದ್ದಾರೆ.

ರಾಹುಲ್ ಗಾಂಧಿ ತಮ್ಮ ಎಕ್ಸ್ ಖಾತೆಯಲ್ಲಿ, ಪ್ರಧಾನಿ ನರೇಂದ್ರ ಮೋದಿ ಅವರು ಆರೋಪಿತ ನಾಲ್ಕನೇ ವ್ಯಕ್ತಿ ಎಂದು ಉಲ್ಲೇಖಿಸಿರುವ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರನ್ನು ವಜಾಗೊಳಿಸಿದರೆ ಪ್ರತಿಭಟನೆಯನ್ನು 30 ಸೆಕೆಂಡ್‌ಗಳಲ್ಲಿ ನಿಲ್ಲಿಸಬಹುದು ಎಂದು ಹೇಳಿದ್ದರು.

ದೆಹಲಿಯ ವ್ಯಾಪಾರಿಗಳನ್ನು ಉದ್ದೇಶಿಸಿ ಬರೆದ ಸಂದೇಶದಲ್ಲಿ, ಸರ್ಕಾರ ಮೆಟ್ರೋ ಸೇವೆಯನ್ನು ಸ್ಥಗಿತಗೊಳಿಸಿ, ರಸ್ತೆಗಳನ್ನು ಮುಚ್ಚಿ ರಾಜಧಾನಿಯನ್ನು ನಿರ್ಬಂಧಿಸಿದೆ ಎಂದು ಅವರು ಆರೋಪಿಸಿದ್ದರು. ಮತಗಳ್ಳತನದ ಆರೋಪದ ಹಿನ್ನೆಲೆಯಲ್ಲಿ ಜನರ ಅಂಗಡಿ, ಉಳಿತಾಯ ಮತ್ತು ಮಕ್ಕಳ ಭವಿಷ್ಯವೂ ಸುರಕ್ಷಿತವಾಗಿಲ್ಲ ಎಂಬ ಆತಂಕವನ್ನೂ ವ್ಯಕ್ತಪಡಿಸಿದ್ದರು. ರಾಮಲೀಲಾ ಮೈದಾನದ ಸುತ್ತಮುತ್ತಲಿನ 20 ಪ್ರಮುಖ ಮಾರುಕಟ್ಟೆಗಳ ವ್ಯಾಪಾರಿಗಳು ರ್‍ಯಾಲಿಯಿಂದ ಉಂಟಾಗಬಹುದಾದ ಪರಿಣಾಮಗಳ ಬಗ್ಗೆ ಕಳವಳ ವ್ಯಕ್ತಪಡಿಸಿದ್ದಾರೆ.ಅಕ್ಟೋಬರ್ 31ರಿಂದಲೇ ಬ್ಯಾರಿಕೇಡ್‌ಗಳನ್ನು ಹಾಕಿ ರಸ್ತೆಗಳನ್ನು ಮುಚ್ಚಲಾಗುತ್ತದೆಯೇ? ಅಕ್ಟೋಬರ್ 31 ಮತ್ತು ನವೆಂಬರ್ 1ರಂದು ಅಂಗಡಿಗಳನ್ನು ತೆರೆಯಲು ಸಾಧ್ಯವಾಗುತ್ತದೆಯೇ? ಗ್ರಾಹಕರು ಮಾರುಕಟ್ಟೆಗಳಿಗೆ ಸುಲಭವಾಗಿ ತಲುಪಲು ಸಾಧ್ಯವೇ? ಎಂಬ ಪ್ರಶ್ನೆಗಳನ್ನು ಸಿಟಿಐ ಎತ್ತಿದೆ. ರ್‍ಯಾಲಿಗೆ ಹೆಚ್ಚಿನ ಸಂಖ್ಯೆಯಲ್ಲಿ ವಾಹನಗಳು ಆಗಮಿಸುವುದರಿಂದ ರಾಮಲೀಲಾ ಮೈದಾನದ ಸುತ್ತಮುತ್ತ ಸಂಚಾರ ಸಂಪೂರ್ಣ ಅಸ್ತವ್ಯಸ್ತವಾಗುವ ಸಾಧ್ಯತೆಯಿದೆ ಎಂದು ವ್ಯಾಪಾರಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ರ್‍ಯಾಲಿಗೆ ಸುಮಾರು 10 ಲಕ್ಷ ಪ್ರತಿಭಟನಾಕಾರರು ಆಗಮಿಸುವ ನಿರೀಕ್ಷೆಯಿದ್ದು, ಅವರನ್ನು ಕರೆತರಲು 15,000ರಿಂದ 20,000 ಬಸ್‌ಗಳು ಬರಬಹುದು ಎಂದು ಸಿಟಿಐ ಅಂದಾಜಿಸಿದೆ.

ಇದಲ್ಲದೆ, ರಾಜಕೀಯ ನಾಯಕರ ಖಾಸಗಿ ವಾಹನಗಳೂ ಸಂಚಾರ ದಟ್ಟಣೆಯನ್ನು ಹೆಚ್ಚಿಸಬಹುದು ಎಂದು ಸಂಘಟನೆ ತಿಳಿಸಿದೆ. ರಾಮಲೀಲಾ ಮೈದಾನದ ಸುತ್ತಲೂ ದೆಹಲಿಯ ಪ್ರಮುಖ ಸಗಟು ಮತ್ತು ಚಿಲ್ಲರೆ ಮಾರುಕಟ್ಟೆಗಳಿವೆ. ಮೈದಾನಕ್ಕೆ ಸಂಪರ್ಕ ಕಲ್ಪಿಸುವ ಬಹುತೇಕ ರಸ್ತೆಗಳು ಈ ಮಾರುಕಟ್ಟೆಗಳ ಮೂಲಕ ಹಾದುಹೋಗುವುದರಿಂದ ವ್ಯಾಪಾರ ಚಟುವಟಿಕೆಗಳಿಗೆ ತೀವ್ರ ಅಡಚಣೆ ಉಂಟಾಗಬಹುದು ಎಂಬುದು ವ್ಯಾಪಾರಿಗಳ ವಾದವಾಗಿದೆ. ಚಾಂದಿನಿ ಚೌಕ್, ಭಾಗೀರಥ್ ಪ್ಯಾಲೇಸ್, ಖಾರಿ ಬಾವೊಲಿ, ಸದರ್ ಬಜಾರ್, ಚಾವ್ರಿ ಬಜಾರ್, ಕಾಶ್ಮೀರಿ ಗೇಟ್, ನಬಿ ಕರೀಂ ಮತ್ತು ಕರೋಲ್ ಬಾಗ್ ಸೇರಿದಂತೆ ಹಲವು ಪ್ರಮುಖ ಮಾರುಕಟ್ಟೆಗಳ ವಹಿವಾಟು ಕುಂಠಿತವಾಗುವ ಭೀತಿ ಎದುರಾಗಿದೆ. ಅಕ್ಟೋಬರ್ 10ರಂದು ಜಂತರ್ ಮಂತರ್‌ನಲ್ಲಿ ಕೇವಲ 3,000ರಿಂದ 4,000 ಜನರು ಭಾಗವಹಿಸಿದ್ದ ಪ್ರತಿಭಟನೆಯಿಂದಲೇ ಮಧ್ಯ ದೆಹಲಿಯ ಹಲವು ಪ್ರದೇಶಗಳನ್ನು ನಿರ್ಬಂಧಿಸಲಾಗಿತ್ತು. ಇದರಿಂದ ವ್ಯಾಪಾರಿಗಳಿಗೆ ಸುಮಾರು 3,000 ಕೋಟಿ ನಷ್ಟ ಉಂಟಾಗಿದೆ ಎಂದು ಸಿಟಿಐ ಹೇಳಿಕೊಂಡಿದೆ.

ಈ ಹಿಂದಿನ ಅನುಭವದ ಆಧಾರದಲ್ಲಿ, ನವೆಂಬರ್ 1ರಂದು 10 ಲಕ್ಷ ಜನರು ಭಾಗವಹಿಸುವ ರ್‍ಯಾಲಿ ನಡೆದರೆ ಹಳೆಯ ದೆಹಲಿಯ ವ್ಯಾಪಾರ ವಹಿವಾಟು ಸಂಪೂರ್ಣ ಸ್ಥಗಿತಗೊಳ್ಳಬಹುದು ಮತ್ತು ಸುಮಾರು 10,000 ಕೋಟಿ ನಷ್ಟ ಸಂಭವಿಸಬಹುದು ಎಂದು ಸಂಘಟನೆ ಅಂದಾಜಿಸಿದೆ. ರ್‍ಯಾಲಿಯನ್ನು ಮುಂದೂಡಲು ಸಾಧ್ಯವಾಗದಿದ್ದರೆ, ರಾಮಲೀಲಾ ಮೈದಾನದ ಬದಲಿಗೆ ಬುರಾರಿ ಮೈದಾನ ಅಥವಾ ಜವಾಹರಲಾಲ್ ನೆಹರು ಕ್ರೀಡಾಂಗಣದಂತಹ ಪರ್ಯಾಯ ಸ್ಥಳಗಳಲ್ಲಿ ಆಯೋಜಿಸಬೇಕು ಎಂದು ಸಿಟಿಐ ಸಲಹೆ ನೀಡಿದೆ.

# 2030ರ ಅವಧಿಗೆ ಮಹಿಳಾ ಫುಟ್‌ಬಾಲ್ ಅಭಿವೃದ್ಧಿ ಮಿಷನ್ ಪ್ರಸ್ತಾವನೆ

## ಮಹಾ ಕ್ರೀಡಾ ಸಚಿವೆ ಭೇಟಿಯಾದ ಡಬ್ಲ್ಯೂಎಫ್‌ಎಫ್‌ಐ ಮತ್ತು ಬಿಜಿಎಫ್‌ಐ ನಿಯೋಗ



**ಮುಂಬಯಿ,ಅ.27:** ಮಹಾರಾಷ್ಟ್ರದಲ್ಲಿ ಮಹಿಳಾ ಫುಟ್‌ಬಾಲ್ ಕ್ರೀಡೆಯ ಅಭಿವೃದ್ಧಿ ಹಾಗೂ ಉತ್ತೇಜನಕ್ಕೆ ಸಂಬಂಧಿಸಿದಂತೆ ಮಹಿಳಾ ಫುಟ್‌ಬಾಲ್ ಫೆಡರೇಷನ್ ಆಫ್ ಇಂಡಿಯಾ (ಡಬ್ಲ್ಯೂಎಫ್‌ಎಫ್‌ಐ) ಮತ್ತು ಬೀಚ್ ಗೇಮ್ಸ್ ಫೆಡರೇಷನ್ ಆಫ್ ಇಂಡಿಯಾ (ಬಿಜಿಎಫ್‌ಐ) ಸಂಸ್ಥೆಗಳ ಪ್ರಮುಖ ನಿರ್ಧಾರ ಸಮಿತಿ ನಿಯೋಗವು ಮಂಗಳವಾರ ಮಹಾರಾಷ್ಟ್ರದ ಉಪಮುಖ್ಯಮಂತ್ರಿ ಹಾಗೂ ಕ್ರೀಡಾ ಮತ್ತು ಯುವ ಕಲ್ಯಾಣ ಸಚಿವೆ ಸುನೇತ್ರಾ ಪವಾರ್ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿತು.

ನಿಯೋಗದಲ್ಲಿ ಡಬ್ಲ್ಯೂಎಫ್‌ಎಫ್‌ಐ ಕೋರ್ ಕಮಿಟಿ ಅಧ್ಯಕ್ಷ ನವೀನ್ ಹೆಗ್ಡೆ, ಸಮನ್ವಯ ಸಮಿತಿ ಅಧ್ಯಕ್ಷ ಯತೀಶ್ ಎನ್.ಬಂಗೇರ, ಡಬ್ಲ್ಯೂಎಫ್‌ಎಫ್‌ಐ ಮಹಾರಾಷ್ಟ್ರ ಘಟಕದ ಅಧ್ಯಕ್ಷರು, ರಾಷ್ಟ್ರೀಯ ಡಬ್ಲ್ಯೂಎಫ್‌ಎಫ್‌ಐ ಕಾನೂನು ಸಮಿತಿ ಅಧ್ಯಕ್ಷರು ಹಾಗೂ ಅಂತಾರಾಷ್ಟ್ರೀಯ ಸಂಬಂಧಗಳ ನಿರ್ದೇಶಕ ಅಡ್ವೊಕೇಟ್ ಅಮೀತ್ ಮೆಹ್ತಾ ಮತ್ತು ಬಿಜಿಎಫ್‌ಐ ಉಪಾಧ್ಯಕ್ಷ ಡ್ಯೂಕ್ ಅಹ್ಲುವಾಲಿಯಾ ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ, 2027ರಿಂದ 2030ರವರೆಗಿನ 'ಮಹಾರಾಷ್ಟ್ರ ಮಹಿಳಾ ಫುಟ್‌ಬಾಲ್ ಅಭಿವೃದ್ಧಿ ಮಿಷನ್' ಅನುಷ್ಠಾನಕ್ಕೆ ಮಹಾರಾಷ್ಟ್ರ ಸರ್ಕಾರದ ಸಹಕಾರವನ್ನು ನಿಯೋಗ ಕೋರಿತು. ರಾಜ್ಯದಲ್ಲಿ ಮಹಿಳಾ ಫುಟ್‌ಬಾಲ್ ಕ್ರೀಡೆಯ ಸಮಗ್ರ ಅಭಿವೃದ್ಧಿ ಹಾಗೂ ಬಾಲಕಿಯರಿಗೆ ಹೆಚ್ಚಿನ ಅವಕಾಶಗಳನ್ನು ಕಲ್ಪಿಸುವುದು ಈ ಮಿಷನ್‌ನ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ರಾಜ್ಯಮಟ್ಟದ ವಿಶೇಷ ಸೆಂಟರ್ ಆಫ್ ಎಕ್ಸಲೆನ್ಸ್ (ಶ್ರೇಷ್ಠತಾ ಕೇಂದ್ರ) ಸ್ಥಾಪಿಸುವುದು, ಅದರೊಂದಿಗೆ ಪ್ರಾದೇಶಿಕ ತರಬೇತಿ ಕೇಂದ್ರಗಳನ್ನು ಅಭಿವೃದ್ಧಿಪಡಿಸುವುದು ಹಾಗೂ ಮಹಾರಾಷ್ಟ್ರ ಸರ್ಕಾರದ ಸಹಭಾಗಿತ್ವದಲ್ಲಿ ಕ್ರೀಡಾ ಮೂಲ ಸೌಕರ್ಯವನ್ನು ಬಲಪಡಿಸುವ ಪ್ರಸ್ತಾವನೆಗಳನ್ನು ನಿಯೋಗ ಮುಂದಿಟ್ಟಿತು ಎಂದು ಯತೀಶ್ ಎನ್.ಬಂಗೇರ ತಿಳಿಸಿದರು.

ಜೊತೆಗೆ, ಮಹಿಳೆಯರಿಗಾಗಿ ಮಿನಿ ಫುಟ್‌ಬಾಲ್ ಸ್ಪರ್ಧೆಗಳನ್ನು ಆಯೋಜಿಸುವ ಸಾಧ್ಯತೆಗಳನ್ನು ಪರಿಶೀಲಿಸುವುದು, ಶಾಲಾ ಮತ್ತು ಕಾಲೇಜು ಹಂತದಿಂದಲೇ ಪ್ರತಿಭಾವಂತ ಆಟಗಾರ್ತಿಯರನ್ನು ಗುರುತಿಸಿ ತರಬೇತಿ ನೀಡುವ ವ್ಯವಸ್ಥಿತ ಮಾರ್ಗವನ್ನು ರೂಪಿಸುವುದು ಹಾಗೂ ಕ್ರೀಡೆಯಲ್ಲಿ ಅವರ ಮುಂದಿನ ಬೆಳವಣಿಗೆಗೆ ಅವಕಾಶ ಕಲ್ಪಿಸುವ ಬಗ್ಗೆಯೂ ಚರ್ಚಿಸಲಾಯಿತು.

ವಿಶೇಷವಾಗಿ ಗ್ರಾಮೀಣ, ಬುಡಕಟ್ಟು ಮತ್ತು ಕ್ರೀಡಾ ಸೌಲಭ್ಯಗಳಿಂದ ವಂಚಿತ ಸಮುದಾಯಗಳ ಬಾಲಕಿಯರಿಗೆ ಫುಟ್‌ಬಾಲ್ ತರಬೇತಿ ಹಾಗೂ ಸ್ಪರ್ಧೆಗಳಲ್ಲಿ ಭಾಗವಹಿಸಲು ಹೆಚ್ಚಿನ ಅವಕಾಶಗಳನ್ನು ಒದಗಿಸುವುದು ಈ ಯೋಜನೆಯ ಪ್ರಮುಖ ಆದ್ಯತೆಯಾಗಿದೆ ಎಂದರು.ರಾಜ್ಯದಾದ್ಯಂತ ಮಹಿಳೆಯರ ಫುಟ್‌ಬಾಲ್‌ನಲ್ಲಿಭಾಗವಹಿಸುವಿಕೆಯನ್ನು ಹೆಚ್ಚಿಸುವುದು, ತಳಮಟ್ಟದಲ್ಲಿ ಕ್ರೀಡೆಯನ್ನು ಉತ್ತೇಜಿಸುವುದು ಹಾಗೂ ಭವಿಷ್ಯದ ಪ್ರತಿಭಾವಂತ ಆಟಗಾರ್ತಿಯರನ್ನು ರೂಪಿಸಲು ಸುಸ್ಥಿರ ವ್ಯವಸ್ಥೆಯನ್ನು ನಿರ್ಮಿಸುವುದು ಈ ಮಿಷನ್‌ನ ಉದ್ದೇಶವಾಗಿದೆ. ಮಹಿಳೆಯರು ಮತ್ತು ಬಾಲಕಿಯರು ಕ್ರೀಡೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವ ಅಗತ್ಯವನ್ನು ಒತ್ತಿಹೇಳಿದ ಉಪಮುಖ್ಯಮಂತ್ರಿ ಸುನೇತ್ರಾ ಪವಾರ್ ಅವರು, ಮಹಿಳೆಯರ ಕ್ರೀಡಾ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಪ್ರಯತ್ನಗಳಿಗೆ ತಮ್ಮ ಬೆಂಬಲವನ್ನು ವ್ಯಕ್ತಪಡಿಸಿದರು ಎಂದು ಯತೀಶ್ ಎನ್.ಬಂಗೇರ ತಿಳಿಸಿದರು. ಈ ಭೇಟಿಯು ಮಹಾರಾಷ್ಟ್ರದಲ್ಲಿ ಮಹಿಳಾ ಫುಟ್‌ಬಾಲ್ ಅಭಿವೃದ್ಧಿಗಾಗಿ ಸಂಬಂಧಪಟ್ಟ ಫೆಡರೇಷನ್‌ಗಳು ಮತ್ತು ರಾಜ್ಯ ಸರ್ಕಾರದ ನಡುವೆ ಸಹಕಾರದ ಹೊಸ ಸಾಧ್ಯತೆಗಳನ್ನು ಅನ್ವೇಷಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ ಎಂದು ನವೀನ್ ಹೆಗ್ಡೆ ತಿಳಿಸಿದರು.

# ದೇಶಾದ್ಯಂತ ಏಕರೂಪ ನೀತಿ ರೂಪಿಸುವ ಕುರಿತು ಕೇಂದ್ರದ ನಿಲುವು ಕೇಳಿದ ನ್ಯಾಯಪೀಠ

**ವೈದ್ಯಕೀಯ ವಿದ್ಯಾರ್ಥಿಗಳ ಗ್ರಾಮೀಣ ಸೇವೆಗೆ ಮಾರ್ಗಸೂಚಿ ರೂಪಿಸಲು ಸುಪ್ರೀಂ ಕೋರ್ಟ್ ಒಲವು**

ನವದೆಹಲಿ: ವೈದ್ಯಕೀಯ ವಿದ್ಯಾರ್ಥಿಗಳ ಕಡ್ಡಾಯ ಗ್ರಾಮೀಣ ಸೇವೆಗೆ ಸಂಬಂಧಿಸಿದಂತೆ ಸಾಂವಿಧಾನಿಕ ತತ್ವಗಳ ಆಧಾರದ ಮೇಲೆ ಮಾರ್ಗಸೂಚಿಗಳನ್ನು ರೂಪಿಸಲು ಸುಪ್ರೀಂ ಕೋರ್ಟ್ ಒಲವು ವ್ಯಕ್ತಪಡಿಸಿದೆ. ದೇಶಾದ್ಯಂತ ವೈದ್ಯಕೀಯ ವಿದ್ಯಾರ್ಥಿಗಳ ಕಡ್ಡಾಯ ಗ್ರಾಮೀಣ ಸೇವೆಗೆ ಏಕರೂಪ ನೀತಿ ಇರಬೇಕೇ ಎಂಬ ವಿಚಾರದ ಕುರಿತು ಕೇಂದ್ರ ಸರ್ಕಾರದ ನಿಲುವು ಸ್ಪಷ್ಟವಾಗಿಲ್ಲ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ನ್ಯಾಯಮೂರ್ತಿಗಳಾದ ಪಿ.ಎಸ್. ನರಸಿಂಹ ಮತ್ತು ಅಲೋಕ್ ಆರಾಧೆ ಅವರನ್ನೊಳಗೊಂಡ ನ್ಯಾಯಪೀಠವು ಈ ವಿಚಾರವನ್ನು ಪ್ರಸ್ತಾಪಿಸಿತು. ವೈದ್ಯಕೀಯ ವಿದ್ಯಾರ್ಥಿಗಳು ಗ್ರಾಮೀಣ ಪ್ರದೇಶಗಳಲ್ಲಿ ಕಡ್ಡಾಯವಾಗಿ ಒಂದು ವರ್ಷ ಸಾರ್ವಜನಿಕ ಸೇವೆ ಸಲ್ಲಿಸಬೇಕೆಂಬ ಕರ್ನಾಟಕ ಸರ್ಕಾರದ ಅಧಿಸೂಚನೆಯನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ವೇಳೆ ಈ ಬೆಳವಣಿಗೆ ನಡೆದಿದೆ.

ವೈದ್ಯಕೀಯ ಶಿಕ್ಷಣ ಪೂರ್ಣಗೊಳಿಸಿದ ವಿದ್ಯಾರ್ಥಿಗಳು ಒಂದು ವರ್ಷದ ಕಡ್ಡಾಯ ಗ್ರಾಮೀಣ ಸೇವೆ ಸಲ್ಲಿಸಿದ ಬಳಿಕವಷ್ಟೇ ಕರ್ನಾಟಕ ವೈದ್ಯಕೀಯ ಮಂಡಳಿಯಲ್ಲಿ ಶಾಶ್ವತ ನೋಂದಣಿಗೆ ಅರ್ಹರಾಗುವ ವ್ಯವಸ್ಥೆಯನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಲಾಗಿದೆ. ಕರ್ನಾಟಕ ಕಡ್ಡಾಯ ಸೇವಾ ತರಬೇತಿ ಕಾಯ್ದೆ?2012 ಮತ್ತು ಅದಕ್ಕೆ ಸಂಬಂಧಿಸಿದ 2015ರ ನಿಯಮಗಳು ಈ ಪ್ರಕರಣದ ವಿಚಾರಣೆಯ ವ್ಯಾಪ್ತಿಯಲ್ಲಿವೆ.

ಖಾಸಗಿ ವೈದ್ಯಕೀಯ ಕಾಲೇಜುಗಳಲ್ಲಿ ಖಾಸಗಿ ಸೀಟುಗಳ ಮೂಲಕ ಪ್ರವೇಶ ಪಡೆದ ವಿದ್ಯಾರ್ಥಿಗಳಿಗೂ ಕಡ್ಡಾಯ ಗ್ರಾಮೀಣ ಸೇವೆಯನ್ನು ವಿಸ್ತರಿಸಿರುವುದನ್ನು ಅರ್ಜಿದಾರರು ಪ್ರಶ್ನಿಸಿದ್ದಾರೆ. ಖಾಸಗಿ ಸೀಟುಗಳಲ್ಲಿ ಹೆಚ್ಚಿನ ವೆಚ್ಚದಲ್ಲಿ ಶಿಕ್ಷಣ ಪಡೆಯುವ ವಿದ್ಯಾರ್ಥಿಗಳಿಗೆ ಈ ನಿಯಮ ಅನ್ವಯಿಸಬಾರದು ಎಂಬುದು ಅರ್ಜಿದಾರರ ವಾದವಾಗಿದೆ.

ವಿಚಾರಣೆ ವೇಳೆ ಕೇಂದ್ರ ಸರ್ಕಾರದ ಪರವಾಗಿ ಹಾಜರಾದ ಹೆಚ್ಚುವರಿ ಸಾಲಿಸಿಟರ್ ಜನರಲ್ ಐಶ್ವರ್ಯ ಭಾಟಿ, ಸ್ನಾತಕೋತ್ತರ ವೈದ್ಯಕೀಯ ವಿದ್ಯಾರ್ಥಿಗಳಿಗೆ ಸರದಿ ಆಧಾರದಲ್ಲಿ ಕಡ್ಡಾಯ ಸೇವೆಯ ವ್ಯವಸ್ಥೆ ಇದೆ. ಆದರೆ ಪದವಿ ಹಂತದ ವಿದ್ಯಾರ್ಥಿಗಳಿಗೆ ಈ ರೀತಿಯ ದೇಶವ್ಯಾಪಿ ವ್ಯವಸ್ಥೆ ಇಲ್ಲ ಎಂದು ತಿಳಿಸಿದರು. ಆರೋಗ್ಯ ರಾಜ್ಯದ ವಿಷಯವಾಗಿರುವುದರಿಂದ ಹಲವು ರಾಜ್ಯಗಳು ಕಡ್ಡಾಯ ಸೇವೆಗೆ ಸಂಬಂಧಿಸಿದ ಬಾಂಡ್‌ಗಳನ್ನು ಜಾರಿಗೊಳಿಸಿವೆ ಎಂದರು. ಇಂತಹ ಬಾಂಡ್‌ಗಳನ್ನು ಎಲ್ಲ ರಾಜ್ಯಗಳಲ್ಲೂ ಏಕರೂಪವಾಗಿ ಅಳವಡಿಸಿಕೊಳ್ಳುವಂತೆ ಸಮಿತಿಯೊಂದು ಶಿಫಾರಸು ಮಾಡಿದೆ ಎಂದೂ ನ್ಯಾಯಾಲಯಕ್ಕೆ ತಿಳಿಸಿದರು.

ಪ್ರಕರಣದಲ್ಲಿ ನ್ಯಾಯಾಲಯಕ್ಕೆ ನೆರವಾಗುತ್ತಿರುವ ಹಿರಿಯ ವಕೀಲ ರಾಜು ರಾಮಚಂದ್ರನ್, ಸಂವಿಧಾನದ 21ನೇ ವಿಧಿ ಹಾಗೂ ರಾಜ್ಯನೀತಿಯ ನಿರ್ದೇಶಕ ತತ್ವಗಳ ಆಧಾರದಲ್ಲಿ ಮಾರ್ಗಸೂಚಿ ರೂಪಿಸುವ ಪ್ರಸ್ತಾಪ ಮುಂದಿಟ್ಟರು. ಇದಕ್ಕೆ ಪ್ರತಿಕ್ರಿಯಿಸಿದ ಕೇಂದ್ರದ ಪ್ರತಿನಿಧಿ, ದೇಶವ್ಯಾಪಿ ನೀತಿ ರೂಪಿಸುವ ನಿಟ್ಟಿನಲ್ಲಿ ಸಮಾಲೋಚನೆ ನಡೆಸಬಹುದು. ಆದರೆ ನ್ಯಾಯಾಲಯದಿಂದ ಕಡ್ಡಾಯ ನಿರ್ದೇಶನ ನೀಡುವ ಅಗತ್ಯದ ಬಗ್ಗೆ ಪರಿಶೀಲಿಸಬೇಕಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ನ್ಯಾಯಮೂರ್ತಿ ಪಿ.ಎಸ್. ನರಸಿಂಹ ಅವರು, ದೇಶದ ಭವಿಷ್ಯದ ಆರೋಗ್ಯ ಸೇವೆಯ ಮೇಲೆ ಈ ಪ್ರಕರಣದ ನಿರ್ಧಾರ ಪರಿಣಾಮ ಬೀರಲಿದೆ ಎಂದು ಹೇಳಿದರು. ಆರೋಗ್ಯದ ಹಕ್ಕು ಮೂಲಭೂತ ಹಕ್ಕಾಗಿದ್ದು, ಜನರಿಗೆ ಆರೋಗ್ಯ ಸೇವೆ ಒದಗಿಸುವುದು ರಾಜ್ಯದ ಹೊಣೆಗಾರಿಕೆಯಾಗಿದೆ. ಗ್ರಾಮೀಣ ಪ್ರದೇಶಗಳ ಜನರಿಗೂ ವೈದ್ಯಕೀಯ ಸೇವೆ ಲಭ್ಯವಾಗುವಂತೆ ಮಾಡುವುದು ಮುಖ್ಯ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿತು.

ಕಡ್ಡಾಯ ಗ್ರಾಮೀಣ ಸೇವೆ ಅಗತ್ಯವೇ ಎಂಬ ಮೂಲಭೂತ ತತ್ವದ ಬಗ್ಗೆ ಮೊದಲು ಸ್ಪಷ್ಟತೆ ಇರಬೇಕು. ಆನಂತರ ಅದನ್ನು ಬಾಂಡ್ ಅಥವಾ ನಿಯಂತ್ರಣದ ಮೂಲಕ ಹೇಗೆ ಜಾರಿಗೊಳಿಸಬೇಕು ಎಂಬುದನ್ನು ನಿರ್ಧರಿಸಬಹುದು ಎಂಬ ನಿಲುವನ್ನು ನ್ಯಾಯಮೂರ್ತಿ ನರಸಿಂಹ ವ್ಯಕ್ತಪಡಿಸಿದರು.

ದೇಶವ್ಯಾಪಿ ನೀತಿ ರೂಪಿಸುವ ಉದ್ದೇಶವಿದೆಯೇ ಮತ್ತು ಈ ಸಂಬಂಧ ಯಾರೊಂದಿಗೆ ಸಮಾಲೋಚನೆ ನಡೆಸಲಾಗುತ್ತದೆ ಎಂಬುದನ್ನು ಸ್ಪಷ್ಟಪಡಿಸುವಂತೆ ಕೇಂದ್ರ ಸರ್ಕಾರಕ್ಕೆ ನ್ಯಾಯಪೀಠ ಸೂಚಿಸಿದೆ. ಪ್ರಕರಣದ ಮುಂದಿನ ವಿಚಾರಣೆಯನ್ನು ಮುಂದಿನ ವಾರಕ್ಕೆ ಮುಂದೂಡಲಾಗಿದೆ.

# ರಾಹುಲ್ ಗಾಂಧಿಗೆ ಸುಪ್ರೀಂ ನೋಟಿಸ್



**ನವದೆಹಲಿ, ಅ. 27:** ಅಕ್ಟೋಬರ್ 12ರಂದು ವಿರೋಧ ಪಕ್ಷಗಳು ಸುಪ್ರೀಂ ಕೋರ್ಟ್‌ಗೆ ನಡೆಸಿದ್ದ ಪ್ರತಿಭಟನಾ ಮೆರವಣಿಗೆಯ ವೇಳೆ ತನ್ನನ್ನು ತಳ್ಳಲಾಗಿದೆ ಎಂದು ಆರೋಪಿಸಿ ಗರ್ಭಿಣಿ ಪತ್ರಕರ್ತೆಯೊಬ್ಬರು ಸಲ್ಲಿಸಿದ್ದ ಅರ್ಜಿಗೆ ಸಂಬಂಧಿಸಿದಂತೆ, ಲೋಕಸಭೆಯ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರಿಗೆ ಸುಪ್ರೀಂ ಕೋರ್ಟ್ ಮಂಗಳವಾರ ನೋಟಿಸ್ ಜಾರಿ ಮಾಡಿದೆ.

ಸುಪ್ರೀಂ ಕೋರ್ಟ್ ಮುಖ್ಯ ನ್ಯಾಯಮೂರ್ತಿ ಸೂರ್ಯಕಾಂತ್, ನ್ಯಾಯಮೂರ್ತಿಗಳಾದ ಜೋಯ್‌ಮಾಲ್ಯ ಬಾಗ್ಚಿ ಮತ್ತು ವಿ. ಮೋಹನಾ ಅವರನ್ನೊಳಗೊಂಡ ತ್ರಿಸದಸ್ಯ ಪೀಠವು ರಾಹುಲ್ ಗಾಂಧಿ ಅವರಿಗೆ ಔಪಚಾರಿಕ ನೋಟಿಸ್ ಜಾರಿಗೊಳಿಸಿದೆ. ಪ್ರಕರಣದ ವಿಚಾರಣೆಯನ್ನು ಅಕ್ಟೋಬರ್ 26ರಂದು ಕೈಗೆತ್ತಿಕೊಳ್ಳುವುದಾಗಿ ಈ ಹಿಂದೆ ಸುಪ್ರೀಂ ಕೋರ್ಟ್ ನಿರ್ದೇಶನ ನೀಡಿದ್ದರೂ, ಆ ದಿನ ವಿಚಾರಣೆ ನಡೆದಿಲ್ಲ ಎಂದು ಹಿರಿಯ ವಕೀಲ ಗೌರವ್ ಭಾಟಿಯಾ ಮಂಗಳವಾರ ಪೀಠದ ಗಮನಕ್ಕೆ ತಂದರು. ಬಳಿಕ ನ್ಯಾಯಾಲಯವು ನೋಟಿಸ್ ಹೊರಡಿಸಿದೆ.

ಇದಕ್ಕೂ ಮೊದಲು ಅಕ್ಟೋಬರ್ 16ರಂದು, ಪ್ರಕರಣಕ್ಕೆ ಸಂಬಂಧಿಸಿದಂತೆ ನ್ಯಾಯಾಲಯವು ಸಂಬಂಧಪಟ್ಟವರಿಗೆ ನೋಟಿಸ್ ಜಾರಿ ಮಾಡಿದೆಯೇ ಅಥವಾ ಇಲ್ಲವೇ ಎಂಬ ಬಗ್ಗೆ ವಕೀಲ ಗೌರವ್ ಭಾಟಿಯಾ ಅನುಮಾನ ವ್ಯಕ್ತಪಡಿಸಿದ್ದರು. ಅಲ್ಲದೆ, ಅರ್ಜಿಯನ್ನು ವಿಚಾರಣೆಗೆ ಪಟ್ಟಿ ಮಾಡುವಂತೆ ಕೋರಿದ್ದರು. ಆ ವೇಳೆ ಸಿಜೆಐ ಸೂರ್ಯ ಕಾಂತ್ ಮತ್ತು ನ್ಯಾ. ಜೋಯ್‌ಮಾಲ್ಯ ಬಾಗ್ಚಿ ಅವರಿದ್ದ ಪೀಠವು, "ಎಲ್ಲಾ ವಿಷಯಗಳಲ್ಲೂ ನೋಟಿಸ್ ಜಾರಿ ಮಾಡಲಾಗಿದೆ" ಎಂದು ಸ್ಪಷ್ಟಪಡಿಸಿ, ಅರ್ಜಿಯ ವಿಚಾರಣೆಯನ್ನು ಅ. 26ಕ್ಕೆ ನಿಗದಿಪಡಿಸಿತ್ತು. ಆದರೆ, ಸೋಮವಾರ ಪ್ರಕರಣ ವಿಚಾರಣೆಗೆ ಬಾರದ ಕಾರಣ, ಭಾಟಿಯಾ ಅವರು ಮಂಗಳವಾರ ಮತ್ತೆ ಪೀಠದ ಗಮನ ಸೆಳೆದರು. ನ್ಯಾಯಾಲಯವು ರಾಹುಲ್ ಗಾಂಧಿಯವರಿಗೆ ಅಧಿಕೃತವಾಗಿ ನೋಟಿಸ್ ನೀಡಿದೆ.

ಭಾರತೀಯ ಚುನಾವಣಾ ಆಯೋಗವು ಕೈಗೊಂಡಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆಯನ್ನು ಪ್ರಶ್ನಿಸಿ, ಅಕ್ಟೋಬರ್ 12ರಂದು ರಾಹುಲ್ ಗಾಂಧಿ ಸೇರಿದಂತೆ ವಿವಿಧ ವಿರೋಧ ಪಕ್ಷಗಳ ನಾಯಕರು ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಲು ಮೆರವಣಿಗೆ ನಡೆಸಿದ್ದರು. ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಅಕ್ರಮಗಳು ನಡೆದಿವೆ ಎಂದು ಆರೋಪಿಸಿದ್ದ ನಾಯಕರು, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ಈ ಪ್ರತಿಭಟನೆ ನಡೆಸಿದ್ದರು.

ಈ ಪ್ರತಿಭಟನಾ ಮೆರವಣಿಗೆಯ ವರದಿಗಾರಿಕೆಗೆ ತೆರಳಿದ್ದ ರಿಚಾ ಪರಾಶರ್ ಎಂಬ ಗರ್ಭಿಣಿ ಪತ್ರಕರ್ತೆಯು ರಾಹುಲ್ ಗಾಂಧಿ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. "ಸುಪ್ರೀಂ ಕೋರ್ಟ್‌ನ ರಿಜಿಸ್ಟ್ರಿ ಒಳಗೆ ರಾಹುಲ್ ಗಾಂಧಿ ಅವರು ನನ್ನನ್ನು ಹಿಡಿದು ಎಳೆದರು. ಆ ನಂತರ ಅವರ ಭದ್ರತಾ ಸಿಬ್ಬಂದಿ ನನ್ನನ್ನು ತಳ್ಳಿದ್ದರಿಂದ ನಾನು ಕೆಳಗೆ ಬಿದ್ದೆ," ಎಂದು ಅವರು ದೂರಿದ್ದಾರೆ. ಘಟನೆಯ ನಂತರ ಪತ್ರಕರ್ತೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ, ಈ ಎಲ್ಲಾ ಆರೋಪಗಳನ್ನು ಕಾಂಗ್ರೆಸ್ ಪಕ್ಷವು ಸಂಪೂರ್ಣವಾಗಿ ತಳ್ಳಿಹಾಕಿದೆ.

**ಶ್ರೀಸುಬ್ರಹ್ಮಣ್ಯ ಸೇವಾಸಂಘ ಮುಂಬಯಿ ವತಿಯಿಂದ ವೈದ್ಯಕೀಯ ಸಹಾಯ ನಿಧಿ ಸಂಗ್ರಹಣಾರ್ಥ ಯಕ್ಷಗಾನ ಪ್ರದರ್ಶನ**

# ಯಕ್ಷಲೋಕದ 'ಮಾಸದ ಬಣ್ಣ–100' ಪ್ರಶಸ್ತಿ ಪ್ರದಾನ





**ಮುಂಬಯಿ, ಅ.27:** ಶ್ರೀ ಸುಬ್ರಹ್ಮಣ್ಯ ಸೇವಾಸಂಘದ ವತಿಯಿಂದ ದಿವಂಗತ ಬಣ್ಣದ ವೇಷಧಾರಿ ಸಕ್ಕಟ್ಟು ಲಕ್ಷ್ಮೀನಾರಾಯಣಯ್ಯನವರ ಜನ್ಮ ಶತಮಾನೋತ್ಸವದ ಅಂಗವಾಗಿ 'ಮಾಸದ ಬಣ್ಣ–100 ಸರಣಿಯ ಯಕ್ಷಗಾನ ಕಾರ್ಯಕ್ರಮವು ಕಳೆದ ಭಾನುವಾರ (ಅ.26) ಗೋಕುಲದ ಸರಸ್ವತಿ ಆಡಿಟೋರಿಯಂನಲ್ಲಿ ಯಶಸ್ವಿಯಾಗಿ ನಡೆಯಿತು. ಪೆರ್ಡೂರ್ ಮೇಳದ ಕಲಾವಿದರು 'ದಕ್ಷ ಯಜ್ಞ ಮತ್ತು ಕನಕಾಂಗಿ ಕಲ್ಯಾಣ' ಪ್ರಸಂಗವನ್ನು ಮನೋಜ್ಞವಾಗಿ ಪ್ರಸ್ತುತಪಡಿಸಿದರು.

ಸಂಘದ ಉಪಾಧ್ಯಕ್ಷ ಸದಾಶಿವ ರಾವ್ ಅತಿಥಿಗಳನ್ನು ಸ್ವಾಗತಿಸಿದರು. ಕಾರ್ಯದರ್ಶಿ ಉಮೇಶ್ ರಾವ್ ಕೆಮ್ಮಣ್ಣು ಸಂಘದ ಚಟುವಟಿಕೆಗಳ ಪರಿಚಯ ನೀಡಿದರು. ಜನ್ಮ ಶತಮಾನೋತ್ಸವ ಸಮಿತಿಯ ಪದಾಧಿಕಾರಿ ರಾಜಶೇಖರ್ ಸಕ್ಕಟ್ಟು ಅವರು 'ಮಾಸದ ಬಣ್ಣ–100 ಸರಣಿಯ ಉದ್ದೇಶ ಹಾಗೂ ಸಕ್ಕಟ್ಟು ಲಕ್ಷ್ಮೀನಾರಾಯಣಯ್ಯ ಯಕ್ಷಗಾನ ಸಾಧನೆಗಳನ್ನು ವಿವರಿಸಿದರು.

ಯಕ್ಷಲೋಕದ 'ಮಾಸದ ಬಣ್ಣ–100' ಪ್ರಶಸ್ತಿಯನ್ನು ನಾಮಾಂಕಿತ ಭಾಗವತ ಪೊಲ್ಯ ಲಕ್ಷ್ಮೀನಾರಾಯಣ ಶೆಟ್ಟಿ ಅವರಿಗೆ ಪ್ರದಾನಿಸಲಾಯಿತು (ಪರವಾಗಿ ಸಹೋದರ, ಕಲಾಪೋಷಕ ಹಾಗೂ ಸಂಘಟಕ ಉಮೇಶ್ ಶೆಟ್ಟಿ ಅವರನ್ನು ಶಾಲು, ಸ್ಮರಣಿಕೆ, ಸನ್ಮಾನಪತ್ರ ಹಾಗೂ ಫಲಪುಷ್ಪಗಳೊಂದಿಗೆ ಗೌರವಿಸಲಾಯಿತು). ಸನ್ಮಾನ ಪತ್ರವನ್ನು ಡಾ. ವೈ. ಮಧುಸೂಧನರಾವ್ ವಾಚಿಸಿದರು. ಸಕ್ಕಟ್ಟು ಲಕ್ಷ್ಮೀನಾರಾಯಣಯ್ಯ ಅವರ ಕಲಾಸಾಧನೆಯನ್ನು ಸ್ಮರಿಸಿದ ಉಮೇಶ್ ಶೆಟ್ಟಿ ಅವರು ಯಕ್ಷಗಾನ ಕಲೆ ಮತ್ತಷ್ಟು ಬೆಳಗಲಿ ಎಂದು ಹಾರೈಸಿದರು.

ಮುಖ್ಯ ಅತಿಥಿ, ಸಂಜೀವಿನಿ ಚಾರಿಟೇಬಲ್ ಟ್ರಸ್ಟ್‌ನ ಆಡಳಿತ ನಿರ್ದೇಶಕ ಡಾ. ಸುರೇಶ್ ಎಸ್. ರಾವ್ ಅವರನ್ನು ಸಂಘದ ಅಧ್ಯಕ್ಷ ಕೆ. ಸುಬ್ಬಣ್ಣ ರಾವ್ ಅವರು ಶಾಲು, ಫಲಪುಷ್ಪ ಹಾಗೂ ಸ್ಮರಣಿಕೆಯೊಂದಿಗೆ ಗೌರವಿಸಿದರು. ಸಂಘದ ಸಮಾಜಮುಖಿ ಕಾರ್ಯಗಳನ್ನು ಶ್ಲಾಘಿಸಿದ ಡಾ. ಸುರೇಶ್ ರಾವ್, ಸಂಘದೊಂದಿಗಿನ ಎರಡು ದಶಕಗಳ ಆತ್ಮೀಯ ಸಂಬಂಧವನ್ನು ಸ್ಮರಿಸಿ, ಸಂಘದ ಸೇವಾಕಾರ್ಯಗಳು ಇನ್ನಷ್ಟು ವಿಸ್ತರಿಸಲಿ ಎಂದು ಹಾರೈಸಿದರು.ಕೆ. ಸುಬ್ಬಣ್ಣ ರಾವ್ ಅವರು ಸಂಘದ ಸೇವಾ ಸಾಧನೆಗಳನ್ನು ವಿವರಿಸಿ, ಜಾತಿ–ಮತ ಭೇದವಿಲ್ಲದೆ ಬಡವರಿಗೆ ಸಮಾಜ ಕಲ್ಯಾಣ ಹಾಗೂ ವೈದ್ಯಕೀಯ ನೆರವು ನೀಡುವ ಸಂಕಲ್ಪ ವ್ಯಕ್ತಪಡಿಸಿದರು. ಗಂಭೀರ ಕಾಯಿಲೆ ಮತ್ತು ತುರ್ತು ಸಂದರ್ಭಗಳಲ್ಲಿ ಬಡ ಸದಸ್ಯರಿಗೆ ನೆರವಾಗುವ ವೈದ್ಯಕೀಯ ನಿಧಿಗೆ ಉದಾರ ಸಹಕಾರ ನೀಡುವಂತೆ ಅಧ್ಯಕ್ಷೀಯ ಭಾಷಣದಲ್ಲಿ ಮನವಿ ಮಾಡಿದರು.

ಸಂಘದ ಪದಾಧಿಕಾರಿಗಳು, ಸದಸ್ಯರು ಹಾಗೂ ಕಲಾಭಿಮಾನಿಗಳ ಉಪಸ್ಥಿತಿಯಲ್ಲಿ ಕಾರ್ಯಕ್ರಮ ಯಶಸ್ವಿಯಾಗಿ ಸಂಪನ್ನಗೊಂಡಿತು. ಇದೇ ವೇಳೆ ಪ್ರಯೋಜಕರಿಗೆ ಗೌರವ ಸಮರ್ಪಣೆ ಸಲ್ಲಿಸಲಾಯಿತು . ಸಂಘದ ಕೋಶಾಧಿಕಾರಿ ಗೋಪಾಲಕೃಷ್ಣ ರಾವ್ ಧನ್ಯವಾದ ಸಮರ್ಪಿಸಿದರು.

# ಅಂತಿಮ ಮತದಾರರ ಪಟ್ಟಿ ಪ್ರಕಟ; ರಾಜ್ಯದಲ್ಲಿ 4.55 ಕೋಟಿ ಅರ್ಹ ಮತದಾರರು, 99.32 ಲಕ್ಷ ಮತದಾರರು ಡಿಲೀಟ್

**ಬೆಂಗಳೂರು, ಅ.26–** ಚುನಾವಣಾ ಆಯೋಗ ರಾಜ್ಯದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆ ಅಂತಿಮ ಮತದಾರರ ಪಟ್ಟಿಯನ್ನು ಪ್ರಕಟಿಸಿದೆ. ಎಸ್‌ಐಆರ್ ಬಳಿಕ ರಾಜ್ಯದ ಅಂತಿಮ ಮತದಾರರ ಪಟ್ಟಿಯಲ್ಲಿ ಒಟ್ಟು 4.55 ಕೋಟಿ ಅರ್ಹ ಮತದಾರರು ಇದ್ದಾರೆ. ಆ ಮೂಲಕ ರಾಜ್ಯದಲ್ಲಿ ಎಸ್‌ಐಆರ್ ಬಳಿಕ 99.32 ಲಕ್ಷ ಮತದಾರರನ್ನು ಅಂತಿಮ ಪಟ್ಟಿಯಿಂದ ಕೈಬಿಡಲಾಗಿದೆ.

ರಾಜ್ಯದಲ್ಲಿ ಎಸ್‌ಐಆರ್ ಮುಂಚೆ 5.54 ಕೋಟಿ ಮತದಾರರು ಇದ್ದರು. ಅದೇ ಎಸ್‌ಐಆರ್‌ನ ಕರಡು ಮತದಾರರ ಪಟ್ಟಿಯಲ್ಲಿ ಮತದಾರರ ಸಂಖ್ಯೆ 4.46 ಕೋಟಿಗೆ ಇಳಿಕೆಯಾಗಿತ್ತು. ಇದೀಗ ಎಸ್‌ಐಆರ್ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅಂತಿಮ ಮತದಾರರ ಪಟ್ಟಿಯಲ್ಲಿ ರಾಜ್ಯದಲ್ಲಿ 4.55 ಕೋಟಿ ಮತದಾರರು ಇರಲಿದ್ದಾರೆ. ಆ ಮೂಲಕ ಎಸ್‌ಐಆರ್ ಮುಂಚೆ ಇದ್ದ ಮತದಾರರ ಸಂಖ್ಯೆಯಿಂದ 99.32 ಲಕ್ಷ ಮತದಾರರ ಕಡಿತವಾಗಿದೆ. ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆಯ ಅಂತಿಮ ಮತದಾರರ ಪಟ್ಟಿಯನ್ನು ಭಾರತೀಯ ಚುನಾವಣಾ ಆಯೋಗ ತನ್ನ ವೆಬ್‌ಸೈಟ್: https://ceo.karnataka.gov.in/enನಲ್ಲಿ ಪ್ರಕಟಿಸಿದೆ.ಅಂತಿಮ ಮತದಾರರ ಪಟ್ಟಿಯಂತೆ ರಾಜ್ಯದಲ್ಲಿ ಮಹಿಳಾ ಮತದಾರರೇ ಅಧಿಕವಾಗಿದ್ದಾರೆ. ರಾಜ್ಯದಲ್ಲಿ ಮಹಿಳಾ ಮತದಾರರು 2,29,12,355 ಮತದಾರರು ಇದ್ದರೆ, 2,25,40,493 ಪುರುಷ ಮತದಾರರು ಇದ್ದಾರೆ. 2,841 ಇತರೆ ಮತದಾರರು ಇದ್ದಾರೆ. ಸಾಗರೋತ್ತರ ಮತದಾರರ ಸಂಖ್ಯೆ 3,252 ಇದ್ದರೆ, 18–19 ವಯೋಮಾನದ 6,83,364 ಮತದಾರರು ಇದ್ದಾರೆ. ಇನ್ನು 85+ ವಯೋಮಾನದ 3,92,134 ಮತದಾರರು ಇದ್ದಾರೆ. ಕರ್ನಾಟಕ ಮುಖ್ಯ ಚುನಾವಣಾಧಿಕಾರಿ ಅನ್ಬುಕುಮಾರ್ ಅವರು 3 ಗಂಟೆಗೆ ಅಧಿಕೃತವಾಗಿ ಅಂತಿಮ ಮತದಾರರ ಪಟ್ಟಿಯನ್ನು ಬಿಡುಗಡೆ ಮಾಡಲಿದ್ದಾರೆ.

ರಾಜಕೀಯ ಗುದ್ದಾಟಕ್ಕೆ ಕಾರಣವಾಗಿರುವ ಎಸ್‌ಐಆರ್ ಪ್ರಕ್ರಿಯೆಯನ್ನು ಚುನಾವಣಾ ಆಯೋಗ ರಾಜ್ಯದಲ್ಲಿ ಜೂನ್ 30ರಿಂದ ಅಧಿಕೃತವಾಗಿ ಆರಂಭಿಸಿತ್ತು. ಇದೀಗ ನಾಲ್ಕು ತಿಂಗಳ ಮತದಾರರ ವಿಶೇಷ ತೀವ್ರ ಪರಿಷ್ಕರಣೆ ಮುಕ್ತಾಯವಾಗಿದ್ದು, ಅಂತಿಮ ಮತದಾರರ ಪಟ್ಟಿ ಪ್ರಕಟವಾಗಿದೆ. 2002ರಲ್ಲಿ ರಾಜ್ಯದಲ್ಲಿ ಕೊನೆಯ ಬಾರಿ ಎಸ್‌ಐಆರ್ ಆಗಿದ್ದು, ಇದೀಗ 23 ವರ್ಷದ ಬಳಿಕ ರಾಜ್ಯದಲ್ಲಿ SIR ಕೈಗೊಳ್ಳಲಾಗಿದೆ.

ಕರ್ನಾಟಕದಲ್ಲಿ ನಕಲಿ ಮತದಾರರನ್ನು ಗುರುತಿಸಲು, ಮರಣ ಹೊಂದಿದವರ ಅಥವಾ ಸ್ಥಳಾಂತರಗೊಂಡವರ, ಎರಡೆರಡು ಕಡೆ ಮತದಾನದ ಹಕ್ಕು ಹೊಂದಿರುವವರ



ಹೆಸರುಗಳನ್ನು ತೆಗೆದುಹಾಕಲು ಮತ್ತು ಅರ್ಹ ಮತದಾರರ ವಿವರಗಳನ್ನು ದೃಢೀಕರಿಸುವ ಉದ್ದೇಶದೊಂದಿಗೆ ಎಸ್‌ಐಆರ್ ಪ್ರಕ್ರಿಯೆಯನ್ನು ನಡೆಸಲಾಗಿದೆ.

ಇದೀಗ ಬಹು ಚರ್ಚಿತ, ರಾಜಕೀಯ ಗುದ್ದಾಟ, ವಿವಾದ, ಆರೋಪಗಳಿಗೆ ಕಾರಣವಾದ ಕರ್ನಾಟಕದ ಎಸ್‌ಐಆರ್ ಇದೀಗ ಕ್ಲೈಮಾಕ್ಸ್ ಹಂತಕ್ಕೆ ತಲುಪಿದೆ. ಇಂದು ರಾಜ್ಯದಲ್ಲಿನ ಅರ್ಹ ಅಧಿಕೃತ ಅಂತಿಮ ಮತದಾರರ ಪಟ್ಟಿ ಪ್ರಕಟವಾಗಿದೆ.ಜೂನ್ 20 ರಿಂದ 29 ರವರೆಗೆ ರಾಜ್ಯದಲ್ಲಿ ಎಸ್‌ಐಆರ್ ಸಿದ್ಧತೆ, ತರಬೇತಿ ಹಾಗೂ ಎನುಮರೇಷನ್ ಫಾರ್ಮ್ ಮುದ್ರಣ ಕಾರ್ಯ ನಡೆಸಲಾಯಿತು.

ರಾಜ್ಯದಲ್ಲಿ ಪ್ರಸಕ್ತ ಸಾಲಿನ ಅಕ್ಟೋಬರ್ 1 ಅರ್ಹತಾ ದಿನಾಂಕವಾಗಿ ಪರಿಗಣಿಸಿ ಎಸ್‌ಐಆರ್ ಪ್ರಕ್ರಿಯೆ ಕೈಗೊಳ್ಳಲಾಗಿದೆ. ಜೂನ್ 30 ರಿಂದ ಆಗಸ್ಟ್ 17 ರವರೆಗೆ ಬಿಎಲ್‌ಒಗಳಿಂದ ಮನೆ ಮನೆ ಭೇಟಿ ನೀಡಿ ಮತದಾರರಿಗೆ ಗಣತಿ ನಮೂನೆಯನ್ನು ಸಲ್ಲಿಸಲಾಯಿತು.

ಗಣತಿ ನಮೂನೆಯಲ್ಲಿ ಅಗತ್ಯ ಮಾಹಿತಿಯನ್ನು ನೀಡಿ ತಮ್ಮ ಸಹಿಯೊಂದಿಗೆ ಮತದಾರರು ಬಿಎಲ್‌ಒಗಳಿಗೆ ಅರ್ಜಿ ವಾಪಸು ಮಾಡಿದ್ದರು. 2026ರ ಮತದಾರರ ವಿವರ ಮತ್ತು 2002ರ ಮತದಾರರ ವಿವರಗಳನ್ನು ಭರ್ತಿ ಮಾಡಿ ಮತದಾರರು ಸಲ್ಲಿಸಿದ್ದರು. ಅದರಂತೆ ಆ.24ಕ್ಕೆ ಚುನಾವಣಾ ಆಯೋಗ ಕರಡು ಮತದಾರರ ಪಟ್ಟಿಯನ್ನು ಪ್ರಕಟಿಸಿತ್ತು. ಇನ್ನು ಗಣತಿ ನಮೂನೆ ಸಲ್ಲಿಸಿದ 4.46 ಕೋಟಿ ಮತದಾರರ ಪೈಕಿ 43.84 ಲಕ್ಷ ಮತದಾರರಿಗೆ ನೋಟಿಸ್ ಜಾರಿಯಾಗಿತ್ತು.

2002ರ ಮತದಾರರ ಪಟ್ಟಿಯಲ್ಲಿನ ವಿವರ ವ್ಯತ್ಯಾಸವಿರುವ 20.35 ಲಕ್ಷ, 2002ರ ಮತದಾರರ ವಿವರ ಲಭ್ಯವಿಲ್ಲದ 23.45 ಲಕ್ಷ ಮತದಾರರಿಗೆ ನೋಟಿಸ್ ನೀಡಲಾಗಿತ್ತು. ಈ ಎಲ್ಲರೂ ಅಗತ್ಯ 12 ದಾಖಲೆಗಳೊಂದಿಗೆ ತಮ್ಮ ಪೌರತ್ವವನ್ನು ಸಾಬೀತುಪಡಿಸಬೇಕಾಗಿತ್ತು.

ಕರಡು ಮತದಾರರ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಮತದಾರರಿಗೆ ಆ.24ರಿಂದ ಸೆ.23ರವರೆಗೆ ಅವಕಾಶ ನೀಡಲಾಗಿತ್ತು. ನೋಟಿಸ್‌ಗೆ ಉತ್ತರ ನೀಡಲು ಏಳು ದಿನಗಳ ಕಾಲಾವಕಾಶ ನೀಡಲಾಗಿತ್ತು. ನೋಟಿಸ್ ನೀಡಲು, ಅದಕ್ಕೆ ಉತ್ತರಿಸಲು, ವಿಚಾರಣೆ ನಡೆಸಿ ಅಂತಿಮ ನಿರ್ಧಾರ ತೆಗೆದುಕೊಳ್ಳಲು ಅಕ್ಟೋಬರ್ 22ರವರೆಗೆ ಒಟ್ಟು 58 ದಿನಗಳ ಕಾಲಾವಕಾಶ ನೀಡಲಾಗಿತ್ತು.



ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ನವಕರ್ನಾಟಕ MRW/ VRW/ URW ಗೌರವಧನ ಕಾರ್ಯಕರ್ತರ ಸಂಘದ ನಿಯೋಗವು ಗೃಹಕಚೇರಿ ಕೃಷ್ಣಾದಲ್ಲಿ ಭೇಟಿಯಾಗಿ ವಿವಿಧ ಬೇಡಿಕೆಗಳ ಕುರಿತು ಮನವಿ ಸಲ್ಲಿಸಿತು. ಸಂಘದ ಸಂಸ್ಥಾಪಕ ಅಂಬಾಜಿ ಪಿ.ಮೇಟಿ, ರಾಜ್ಯಾಧ್ಯಕ್ಷ ಫಕೀರಗೌಡ ಪಾಟೀಲ, ಸಂಚಾಲಕ ಅನಿಲ್ ಕೆ. ಗೌಡ, ಮಹಿಳಾ ಮತ್ತು ಮಕ್ಕಳ ಕಲ್ಯಾಣ, ವಿಕಲಚೇತನರ ಕಲ್ಯಾಣ ಇಲಾಖೆಯ ಕಾರ್ಯದರ್ಶಿ ಶಮ್ಲಾ ಇಕ್ಬಾಲ್, ಹಣಕಾಸು ಇಲಾಖೆ ಕಾರ್ಯದರ್ಶಿ (ವೆಚ್ಚ) ಅಭಿರಾಮ್ ಶಂಕರ್, ವಿಕಲಚೇತನರ ಕಲ್ಯಾಣ ಇಲಾಖೆಯ ನಿರ್ದೇಶಕ ಮಹೇಶ್ ಬಾಬು ಮತ್ತಿತರರು ಉಪಸ್ಥಿತರಿದ್ದರು.

## ಸೌಜನ್ಯ ಪ್ರಕರಣದ ಮರುತನಿಖೆ ಚುರುಕು 15ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಗೆ ನೋಟಿಸ್

**ಬೆಂಗಳೂರು, ಅ.26–** ರಾಜ್ಯಾದ್ಯಂತ ತೀವ್ರ ಗಮನ ಸೆಳೆದಿರುವ ಸೌಜನ್ಯ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರು ತನಿಖೆಯನ್ನು ಎಸ್.ಐ.ಟಿ ಚುರುಕುಗೊಳಿಸಿದೆ. ಈ ಹಿಂದೆ ಪ್ರಕರಣದ ತನಿಖೆಯ ವಿವಿಧ ಹಂತಗಳಲ್ಲಿ ಭಾಗಿಯಾಗಿದ್ದ 15ಕ್ಕೂ ಹೆಚ್ಚು ಪೊಲೀಸ್ ಅಧಿಕಾರಿಗಳು ಹಾಗೂ ಸಿಬ್ಬಂದಿಗೆ ಎಸ್.ಐ.ಟಿ ನೋಟಿಸ್ ಜಾರಿಗೊಳಿಸಿದೆ.



2012ರಲ್ಲಿ ನಡೆದ ಸೌಜನ್ಯ ಪ್ರಕರಣದ ತನಿಖೆಯನ್ನು ಆರಂಭದಲ್ಲಿ ಬೆಳ್ತಂಗಡಿ ಪೊಲೀಸರು ಕೈಗೊಂಡಿದ್ದರು. ಬಳಿಕ ಪ್ರಕರಣವು ಸಿಐಡಿ ಮತ್ತು ಸಿಬಿಐ ತನಿಖೆಯ ಹಂತಗಳನ್ನೂ ತಲುಪಿತ್ತು. ಇದೀಗ ಪ್ರಕರಣದ ಮರು ತನಿಖೆ ನಡೆಸುತ್ತಿರುವ SIT, ಹಿಂದಿನ ತನಿಖೆಗಳಲ್ಲಿ ಕೈಗೊಂಡ ಕ್ರಮಗಳು ಮತ್ತು ಸಂಗ್ರಹಿಸಲಾದ ಮಾಹಿತಿಗಳ ಕುರಿತು ವಿವರ ಪಡೆಯಲು ಮುಂದಾಗಿದೆ.

ಮಾಹಿತಿಯ ಪ್ರಕಾರ, ಅಪರಾಧ ಪ್ರಕ್ರಿಯಾ ಸಂಹಿತೆಯ (ಸಿಆರ್‌ಪಿಸಿ) ಸೆಕ್ಷನ್ 160ರ ಅಡಿಯಲ್ಲಿ ನೋಟಿಸ್ ನೀಡಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ ಎನ್ನಲಾಗಿದೆ. ಪ್ರಕರಣಕ್ಕೆ ಸಂಬಂಧಿಸಿದ ಹಿಂದಿನ ದಾಖಲೆಗಳು, ಸಾಕ್ಷಿಗಳ ಹೇಳಿಕೆಗಳು ಮತ್ತು ಲಭ್ಯವಿರುವ ಇತರ ಮಾಹಿತಿಗಳನ್ನು ಎಸ್‌ಐಟಿ ಪರಿಶೀಲಿಸುತ್ತಿದೆ.ಅಗತ್ಯವಿರುವ ಹೆಚ್ಚುವರಿ ಮಾಹಿತಿಯನ್ನು ಹಿಂದಿನ ತನಿಖಾಧಿಕಾರಿಗಳಿಂದ ಸಂಗ್ರಹಿಸಲು ತಂಡ ಮುಂದಾಗಿದೆ ಎಂದು ವರದಿಯಾಗಿದೆ.

ಸೌಜನ್ಯ ಪ್ರಕರಣದ ಮರು ತನಿಖೆಯ ಭಾಗವಾಗಿ ಹಿಂದಿನ ತನಿಖೆಯಲ್ಲಿ ಭಾಗಿಯಾಗಿದ್ದ 15ಕ್ಕೂ ಹೆಚ್ಚು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ನೋಟಿಸ್ ನೀಡಿರುವುದು ಮಹತ್ವದ ಬೆಳವಣಿಗೆಯಾಗಿದೆ. ಈ ವಿಚಾರಣೆಯಿಂದ ಯಾವ ಹೊಸ ಮಾಹಿತಿ ಲಭ್ಯವಾಗಲಿದೆ ಹಾಗೂ ಅದು ಮುಂದಿನ ತನಿಖೆಯ ಮೇಲೆ ಯಾವ ರೀತಿಯ ಪರಿಣಾಮ ಬೀರಲಿದೆ

## ಬೊಗಳೆ ಭಾಷಣಕ್ಕೆ ಸರ್ಕಾರ ಸೀಮಿತ: ಸುನೀಲ್‌ಕುಮಾರ್ ವಾಗ್ದಾಳಿ

**ಬೆಂಗಳೂರು, ಅ.26–** ರಾಜ್ಯ ಸರಕಾರವು ಬೊಗಳೆ ಭಾಷಣಗಳಿಗೆ ಮಾತ್ರ ಸೀಮಿತವಾಗಿದೆ ಎಂದು ಶಾಸಕ ಮತ್ತು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಸುನೀಲ್ ಕುಮಾರ್ ಅವರು ಟೀಕಿಸಿದ್ದಾರೆ.

ರಾಜ್ಯ ಬಿಜೆಪಿ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ಸರಕಾರವು ಯಾವುದೇ ಹೊಸ ಯೋಜನೆ ಘೋಷಿಸಲು ಅವಕಾಶ ಇಲ್ಲ ಎಂದು ಹಣಕಾಸು ಇಲಾಖೆಯು ಸರಕಾರಕ್ಕೆ ಎಚ್ಚರಿಕೆ ಪತ್ರ ಬರೆದಿದೆ. ಬರಗಾಲ ಪರಿಹಾರ ಧನವಾಗಿ ರೈತರಿಗೆ 2500 ರೂ. ಸರಕಾರ ಘೋಷಿಸಿದ್ದರೂ ಇವತ್ತಿನ ತನಕ ಯಾವುದೇ ರೈತರ ಖಾತೆಗೆ ಹಣ ವರ್ಗಾಯಿಸಿಲ್ಲ ಎಂದು ಆಕ್ಷೇಪಿಸಿದರು.

ಹಣ ಸಂದಾಯ ಆಗದೇ ಇರುವುದರ ಬಗ್ಗೆ ಸ್ವತಃ ಕಂದಾಯ ಸಚಿವರೇ ಬೇಸರವನ್ನು ವ್ಯಕ್ತಪಡಿಸಿದ್ದಾರೆ. ನಮ್ಮ ಸರ್ಕಾರ ದಿವಾಳಿಯಾಗಿದೆ ಅನ್ನೋದನ್ನ ಪರೋಕ್ಷವಾಗಿ ಅವರು ಒಪ್ಪಿಕೊಂಡಿದ್ದಾರೆ ಎಂದು ನುಡಿದರು.

ಮುಖ್ಯಮಂತ್ರಿಗಳು ಕಬ್ಬಿನ ಬೆಳೆಗಾರರಿಗೆ ಸಂಬಂಧಪಟ್ಟಂತೆ ನಿನ್ನೆ ಸಭೆ ಮಾಡಿದ್ದರು. ಸರಕಾರದಲ್ಲಿ



ಹಣ ಎಲ್ಲಿದೆ, ನನ್ನ ಜೇಬಿನಿಂದ ಹೇಗೆ ಕೊಡಲು ಸಾಧ್ಯ ಎಂದು ಅಸಹಾಯಕತೆಯನ್ನು ವ್ಯಕ್ತ ಮಾಡಿದ್ದರು ಎಂದು ಗಮನ ಸೆಳೆದರು.

ಮಳೆ ಕಡಿಮೆ ಆಗುತ್ತದೆ ಎಂಬ ಸೂಚನೆ ಸಿಕ್ಕಿದಾಗ, ರೈತರಿಗೆ ವಿಶ್ವಾಸವನ್ನು ತುಂಬಬೇಕಾದಂತಹ ಮುಖ್ಯಮಂತ್ರಿಗಳು ಯಾವುದೇ ಬೆಳೆಗಳನ್ನು ಬೆಳೆಯಬೇಡಿ ಅಂತ ಹೇಳಿದ್ದರು. ಇವತ್ತು ಕಬ್ಬು ಬೆಳೆಗಾರರ ವಿಷಯ ಬಂದಾಗ, ಮತ್ತೆ ವಿಶ್ವಾಸವನ್ನು ತುಂಬಬೇಕಾದಂತಹ ಸರಕಾರವು, ಹಣ ಇಲ್ಲ ಎಂಬುದಾಗಿ ಸ್ಪಷ್ಟ ಮಾಡಿದ್ದಾರೆ ಎಂದು ವಿವರಿಸಿದರು.

ಒಟ್ಟಾರೆ ಈ ಸರ್ಕಾರ ಒಂದು ಜೀರೋ ಬ್ಯಾಲೆನ್ಸ್ ಸರಕಾರ; ಇದು ದಿವಾಳಿ ಸರಕಾರ. ಯಾವ ವರ್ಗಕ್ಕೂ ಕೂಡ ನ್ಯಾಯವನ್ನು ಕೊಡದೇ ಇರುವ ಅಸಹಾಯಕತೆಗೆ ಈ ಸರಕಾರ ಇವತ್ತು ಮುಟ್ಟಿದೆ ಎಂದು ಟೀಕಿಸಿದರು.

ವಿಧಾನಸೌಧದ ಮೂರನೇ ಮಹಡಿಯಲ್ಲಿ ಆಡಳಿತ ಇದೆ ಅಂತ ಅನ್ನಿಸುತ್ತಿಲ್ಲ. ಯಾವ ಸಚಿವರೂ ಆಡಳಿತದ ಪ್ರಕ್ರಿಯೆ ಬಗ್ಗೆ ಗಮನವನ್ನು ಕೊಡುತ್ತಿಲ್ಲ ಎಂದು ಆಕ್ಷೇಪಿಸಿದರು.

ಮುಖ್ಯಮಂತ್ರಿಯಿಂದ ಹಿಡಿದು ಕಾಂಗ್ರೆಸ್ಸಿನ ಶಾಸಕರು, ಕಾರ್ಯಕರ್ತರ ತನಕ ಸ್ಟಿಂಗ್ ಆಪರೇಷನ್‌ನಲ್ಲೇ ತೊಡಗಿದ್ದಾರೆ ಎಂದು ಆರೋಪಿಸಿದರು. ಬರಗಾಲ ತೀವ್ರವಾಗಿದೆ. ಬರಗಾಲದ ಸಭೆಗಳನ್ನು ನಡೆಸಿಲ್ಲ. ಕೇವಲ ಐಎಎಸ್ ಅಧಿಕಾರಿಗಳಷ್ಟೇ ಅಧಿಕಾರ ನಡೆಸುತ್ತಿದ್ದಾರೆ. ಶಾಸಕಾಂಗವು ಆಡಳಿತ ನಡೆಸುತ್ತಿಲ್ಲ ಎಂದು ದೂರಿದರು. ಗ್ಯಾರಂಟಿ ಯೋಜನೆಗಳು ಜನರಿಗೆ ತಲುಪಿಲ್ಲ. ಸರಕಾರದಲ್ಲಿ ಬಜೆಟ್‌ನಲ್ಲಿ ಘೋಷಣೆಯಾದಂತಹ ಯಾವ ಯೋಜನೆಗಳ ಸರಕಾರಿ ಆದೇಶ ಹೊರಡಿಸಿಲ್ಲ. ಇಂತಹ ಒಂದು ಅಸಹಾಯಕತೆಯ ಶೂನ್ಯ ಆವರಿಸಿರುವಂತಹ ಪರಿಸ್ಥಿತಿ ಕರ್ನಾಟಕದಲ್ಲಿ ಯಾವತ್ತೂ ಕೂಡ ಬಂದಿರಲಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು.

## ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಸಲ್ಲಿಸಿದ್ದ ಪಿಐಎಲ್ ವಜಾಗೊಳಿಸಿದ ಹೈಕೋರ್ಟ್

**ಬೆಂಗಳೂರು, ಅ.26–** ಅಕ್ರಮವಾಗಿ ಗಣಿಗಾರಿಕೆ ಪರವಾನಗಿಯನ್ನು ನವೀಕರಿಸಿದ ಆರೋಪಕ್ಕೆ ಸಂಬಂಧಿಸಿದಂತೆ, ಭ್ರಷ್ಟಾಚಾರ ನಿಯಂತ್ರಣಾ ಕಾಯ್ದೆಯಡಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವಂತೆ ರಾಜ್ಯಪಾಲರಿಗೆ ನಿರ್ದೇಶನ ಕೋರಿ ಸಲ್ಲಿಸಲಾಗಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು (ಪಿಐಎಲ್) ಹೈಕೋರ್ಟ್ ವಜಾಗೊಳಿಸಿದೆ.

ಬೆಂಗಳೂರಿನ ಉದ್ಯಮಿ ಎಂ.ಪಿ. ವೇಣುಗೋಪಾಲ್ ಎಂಬವರು ಸಲ್ಲಿಸಿದ್ದ ಅರ್ಜಿ ವಿಚಾರಣೆ ನಡೆಸಿದ ನ್ಯಾಯಮೂರ್ತಿಗಳಾದ ಅನು ಶಿವರಾಮನ್ ಮತ್ತು ಕೆ.ಎಸ್. ಭರತ್ ಕುಮಾರ್ ಅವರನ್ನೊಳಗೊಂಡ ವಿಭಾಗೀಯ ಪೀಠ ಈ ಆದೇಶ ನೀಡಿದೆ.ವಿಚಾರಣೆ ವೇಳೆ ರಾಜ್ಯ ಸರ್ಕಾರದ ಪರ ಹಾಜರಾಗಿದ್ದ ಅಡ್ವೊಕೇಟ್ ಜನರಲ್ ಕೆ. ಶಶಿಕಿರಣ್ ಶೆಟ್ಟಿ, ಈ ಸಂಬಂಧ ಸಲ್ಲಿಸಲಾಗಿದ್ದ ಖಾಸಗಿ ದೂರನ್ನು ವಿಚಾರಣಾಧೀನ



ನ್ಯಾಯಾಲಯ ಈಗಾಗಲೇ ವಜಾಗೊಳಿಸಿದೆ. ಅಲ್ಲದೆ, ಲೋಕಾಯುಕ್ತರೂ ದೂರನ್ನು ಪರಿಗಣಿಸಿಲ್ಲ. ಆದಾಗ್ಯೂ, ಇದೇ ಅಂಶಗಳನ್ನು ಆಧರಿಸಿ ಮತ್ತೊಂದು ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಲಾಗಿದೆ ಎಂದು ನ್ಯಾಯಾಲಯದ ಗಮನಕ್ಕೆ ತಂದರು.

ಇದೇ ವೇಳೆ, ಅರ್ಜಿದಾರರ ಪರ ವಕೀಲರು ಅರ್ಜಿಯನ್ನು ಹಿಂಪಡೆಯಲು ಅನುಮತಿ ನೀಡುವಂತೆ ಕೋರಿದರು. ವಾದ ಆಲಿಸಿದ ಹೈಕೋರ್ಟ್ ವಿಭಾಗೀಯ ಪೀಠವು ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿತು.

ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆಯ ನಿಯಮ ಗಳನ್ನು ಉಲ್ಲಂಘಿಸಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದ ಸಂದರ್ಭದಲ್ಲಿ ಅಕ್ರಮವಾಗಿ ಗಣಿಗಾರಿಕೆಗೆ ಪರವಾನಿಗೆ ನೀಡಲಾಗಿದೆ. ಜೊತೆಗೆ, ಕೆಲವು ಗಣಿ ಕಂಪನಿಗಳನ್ನು ನವೀಕರಣ ಮಾಡಲಾಗಿದೆ ಎಂದು ಅರ್ಜಿಯಲ್ಲಿ ಆರೋಪಿಸಲಾಗಿದೆ. ಅಲ್ಲದೆ, ಆರೋಪ ಸಂಬಂಧ ಲೋಕಾಯುಕ್ತ ಪೊಲೀಸರಿಂದ ತನಿಖೆಗೆ ಆದೇಶಿಸಿ, ತನಿಖಾ ವರದಿಯನ್ನು ಪಡೆದುಕೊಳ್ಳಬೇಕು, ಕೆಲವು ಗಣಿ ಕಂಪನಿಗಳ ಪರವಾನಿಗೆಯನ್ನು ರದ್ದು ಮಾಡಬೇಕು ಹಾಗೂ ಅಕ್ರಮವಾಗಿ ಪರವಾನಿಗೆ ನೀಡಿದ್ದರ ಪರಿಣಾಮ ಸರ್ಕಾರದ ಬೊಕ್ಕಸಕ್ಕೆ ಆಗಿರುವ ನಷ್ಟವನ್ನು ವಸೂಲಿ ಮಾಡಬೇಕು ಅರ್ಜಿದಾರರು ಕೋರಿದ್ದರು. ಅರ್ಜಿ ಸಂಬಂಧ ಈ ಹಿಂದೆ ನಡೆದ ವಿಚಾರಣೆ ವೇಳೆ, ಅರ್ಜಿದಾರರು ಮತ್ತು ಅವರ ಪರ ವಕೀಲರು ಹಾಜರಾಗದ ಹಿನ್ನೆಲೆಯಲ್ಲಿ ವಜಾಗೊಳಿಸಲಾಗಿತ್ತು. ಇದೀಗ ವಕೀಲರು ಮತ್ತೆ ಮನವಿ ಮಾಡಿದ ಪರಿಣಾಮ ವಿಚಾರಣೆಗೆ ಪುನಃ ಪರಿಗಣಿಸಲಾಗಿತ್ತು. ಇದೀಗ ನ್ಯಾಯಪೀಠ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿದೆ.

## ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅಸ್ವಸ್ಥ; ಗಣ್ಯರಿಂದ ಆರೋಗ್ಯ ವಿಚಾರಣೆ

**ಬೆಂಗಳೂರು,ಅ.26–:** ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅವರ ಆರೋಗ್ಯದಲ್ಲಿ ಏರುಪೇರಾಗಿ ನಗರದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ.

ಕರ್ನಾಟಕ ಬ್ಯಾಡಿಂಟನ್ ಅಸೋಸಿಯೇಷನ್ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವೇಳೆ ಆರೋಗ್ಯದಲ್ಲಿ ವ್ಯತ್ಯಾಸ ಕಂಡುಬಂದ ಹಿನ್ನೆಲೆಯಲ್ಲಿ ಅವರನ್ನು ತಕ್ಷಣವೇ ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಆಸ್ಪತ್ರೆಗೆ ದಾಖಲಾಗಿರುವ ಸುದ್ದಿ ತಿಳಿದ ಕೂಡಲೇ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಸಚಿವರಾದ



ಯು.ಟಿ.ಖಾದರ್, ಪ್ರಿಯಾಂಕ್ ಖರ್ಗೆ ಅವರು ಆಸ್ಪತ್ರೆಗೆ ಭೇಟಿ ನೀಡಿ ಪರಮೇಶ್ವರ್ ಅವರ ಆರೋಗ್ಯ ವಿಚಾರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಆರೋಗ್ಯ ಸಚಿವ ಯು.ಟಿ.ಖಾದರ್, ಡಿಸಿಎಂ ಪರಮೇಶ್ವರ್ ಅವರ ಆರೋಗ್ಯದಲ್ಲಿ ಏರುಪೇರಾಗಿತ್ತು. ಚಿಕಿತ್ಸೆ ಪಡೆಯುತ್ತಿದ್ದಾರೆ. ಯಾವುದೇ ತೊಂದರೆ ಇಲ್ಲ. ಆತಂಕಪಡುವ ಅಗತ್ಯವಿಲ್ಲ ಎಂದು ಮಾಹಿತಿ ನೀಡಿದರು.



**ಆತಂಕಪಡುವ ಅಗತ್ಯವಿಲ್ಲ: ಪರಮೇಶ್ವರ್ ಅವರು ಚಿಕಿತ್ಸೆ ಪಡೆಯುತ್ತಿದ್ದು, ಆರೋಗ್ಯ ಸ್ಥಿರವಾಗಿದೆ ಹಾಗೂ ಯಾವುದೇ ಗಂಭೀರ ತೊಂದರೆ ಇಲ್ಲ ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಸ್ಪಷ್ಟಪಡಿಸಿದ್ದಾರೆ.**

## ಬದಲಾವಣೆ ಊಹಾಪೋಹಗಳಿಗೆ ಹೈಕಮಾಂಡ್ ತೆರೆ
## ಬಿಜೆಪಿಯ ರಾಜ್ಯಾಧ್ಯಕ್ಷರಾಗಿ ಬಿ.ವೈ.ವಿಜಯೇಂದ್ರ ಮುಂದುವರಿಕೆ

**ಬೆಂಗಳೂರು, ಅ.26–**ಕರ್ನಾಟಕ ಬಿಜೆಪಿಯ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರನ್ನು ಬದಲಿಸುವ ಊಹಾಪೋಹಗಳಿಗೆ ಪಕ್ಷದ ಕೇಂದ್ರ ನಾಯಕತ್ವ ತೆರೆ ಎಳೆದಿದೆ. ಮುಂಬರುವ ಚುನಾವಣೆಗಳನ್ನು ಅವರ ನೇತೃತ್ವದಲ್ಲೇ ಎದುರಿಸಲು ವರಿಷ್ಠರು ನಿರ್ಧರಿಸಿದ್ದಾರೆ ಎನ್ನಲಾಗಿದೆ.

ರಾಜ್ಯದಲ್ಲಿ ಬಿಜೆಪಿಯ ಪ್ರಮುಖ ಮತಬ್ಯಾಂಕ್ ಆಗಿರುವ ಲಿಂಗಾಯತ ಸಮುದಾಯದ ಬೆಂಬಲ ಕಳೆದುಕೊಳ್ಳುವ ಆತಂಕ ಈ ನಿರ್ಧಾರದ ಹಿಂದಿದೆ. ಈ ಹಿಂದೆ ಬಿ.ಎಸ್. ಯಡಿಯೂರಪ್ಪ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸಿದ ಬಳಿಕ ಉಂಟಾದ ರಾಜಕೀಯ ಪರಿಣಾಮಗಳನ್ನು ಗಮನದಲ್ಲಿಟ್ಟುಕೊಂಡು, ವಿಜಯೇಂದ್ರ ವಿರುದ್ಧ ನಿರ್ಧಾರ ಕೈಗೊಂಡರೆ ಬೆಂಬಲಿಗರ ಅಸಮಾಧಾನ ಹೆಚ್ಚುವ ಸಾಧ್ಯತೆಯನ್ನು ನಾಯಕರು ಪರಿಗಣಿಸಿದ್ದಾರೆ.

ಇದಲ್ಲದೆ, ರಾಜ್ಯ ಬಿಜೆಪಿಯೊಳಗಿನ ಬಣ ಸಂಘರ್ಷ ಮತ್ತು ಎಲ್ಲರ ಒಪ್ಪಿಗೆ ಪಡೆಯಬಲ್ಲ ಪರ್ಯಾಯ ನಾಯಕನ ಕೊರತೆಯೂ ಅಧ್ಯಕ್ಷರ ಬದಲಾವಣೆಗೆ ಅಡ್ಡಿಯಾಗಿದೆ. ಚುನಾವಣೆ ಹೊಸ್ತಿಲಲ್ಲಿ ಹೊಸ ನಾಯಕನ ನೇಮಕ ಪಕ್ಷದ ಆಂತರಿಕ ಭಿನ್ನಮತವನ್ನು ಹೆಚ್ಚಿಸಬಹುದು ಎಂಬ ಆತಂಕವಿದೆ.ಇನ್ನು ಬೂತ್ ಮಟ್ಟದಲ್ಲಿ ಸಂಘಟನೆಯನ್ನು ಬಲಪಡಿಸಿರುವ ವಿಜಯೇಂದ್ರ ಅವರ ಕಾರ್ಯವೈಖರಿಗೆ ವರಿಷ್ಠರಿಂದ ಮೆಚ್ಚುಗೆ ವ್ಯಕ್ತವಾಗಿದೆ ಎನ್ನಲಾಗಿದೆ.



ಹೊಸ ಅಧ್ಯಕ್ಷರನ್ನು ನೇಮಿಸಿ ರಾಜ್ಯಾದ್ಯಂತ ಸಂಘಟನೆ ರೂಪಿಸಲು ಸಮಯ ಬೇಕಾಗುವುದರಿಂದ, ಸದ್ಯದ ನಾಯಕತ್ವವನ್ನೇ ಮುಂದುವರಿಸುವುದು ಸೂಕ್ತ ಎಂಬ ನಿಲುವಿಗೆ ಹೈಕಮಾಂಡ್ ಬಂದಿದೆ.

## ಕನ್ನಡ ರಾಜ್ಯೋತ್ಸವವನ್ನು ಕಡ್ಡಾಯವಾಗಿ ಆಚರಿಸಲು ಸೂಚನೆ: ಶಾಲಾ ಶಿಕ್ಷಣ ಇಲಾಖೆ ಆಯುಕ್ತರಿಂದ ಆದೇಶ

**ಬೆಂಗಳೂರು, ಅ.26–** ಪ್ರಸಕ್ತ ಸಾಲಿನ ಕನ್ನಡ ರಾಜ್ಯೋತ್ಸವ ದಿನಾಚರಣೆಯನ್ನು ಕಡ್ಡಾಯವಾಗಿ ಆಚರಿಸಲು ಶಾಲಾ ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

ನವೆಂಬರ್ ಒಂದರಂದು ಭಾನುವಾರವಾಗಿದ್ದು, ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ನಿಯಮಾನುಸಾರ, ಕಡ್ಡಾಯವಾಗಿ ಹಾಗೂ ಗೌರವಪೂರ್ವಕ ವಾಗಿ ಕರ್ನಾಟಕ ರಾಜ್ಯೋತ್ಸವವನ್ನು ಆಚರಿಸಲು ಅಗತ್ಯ ಕ್ರಮಗಳನ್ನು ವಹಿಸುವಂತೆ ಸಂಬಂಧಿಸಿದ ಎಲ್ಲಾ ಅಧಿಕಾರಿಗಳಿಗೆ ಹಾಗೂ ಶಾಲೆಗಳ ಮುಖ್ಯ ಶಿಕ್ಷಕರಿಗೆ ಶಿಕ್ಷಣ ಇಲಾಖೆಯ ಆಯುಕ್ತರು ನಿರ್ದೇಶನ ನೀಡಿದ್ದಾರೆ.

ಕರ್ನಾಟಕ ಸರ್ಕಾರ
ಶಾಲಾ ಶಿಕ್ಷಣ ಇಲಾಖೆ

ಈ ಸಂಬಂಧ ಸುತ್ತೋಲೆ ಹೊರಡಿಸಿರುವ ಆಯುಕ್ತರು, ರಾಷ್ಟ್ರೀಯ ಹಬ್ಬಗಳನ್ನು ಹಾಗೂ ನಾಡಹಬ್ಬವಾದ ಕರ್ನಾಟಕ ರಾಜ್ಯೋತ್ಸವ ಮತ್ತು ಇತರೆ ಪ್ರಮುಖ ಜಯಂತಿಗಳನ್ನು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ನಿಯಮಾನುಸಾರ ಕಡ್ಡಾಯವಾಗಿ ಆಯಾದಿನಗಳಂದು ಗೌರವ ಪೂರ್ವಕವಾಗಿ ಆಚರಣೆ ಮಾಡಲು ತಿಳಿಸಿದ್ದಾರೆ.

## ಕನ್ನಡ ಕಟ್ಟಾಳು ಬೆ.ರಾ.ನಾಗರಾಜ್, ಡಾ.ತಮಿಳ್ ಸೆಲ್ವಿ ನಿಸ್ಸೀಮ ಕನ್ನಡತಿ ಪ್ರಶಸ್ತಿಗೆ ಆಯ್ಕೆ

**ಬೆಂಗಳೂರು, ಅ.26–** ಕನ್ನಡ ಸಂಘರ್ಷ ಸಮಿತಿಯ ಕಾರ್ಯಕಾರಿ ಸಮಿತಿಯು 2026ನೇ ಸಾಲಿನ 'ಕನ್ನಡ ಕಟ್ಟಾಳು'ಪ್ರಶಸ್ತಿಗೆ ಕನ್ನಡ ಕಾರ್ಯಕರ್ತ ಬೆ.ರಾ. ನಾಗರಾಜ್ ಹಾಗೂ 'ನಿಸ್ಸೀಮ ಕನ್ನಡತಿ' ಪ್ರಶಸ್ತಿಗೆ ಪ್ರಾಧ್ಯಾಪಕಿ ಹಾಗೂ ಸಂಘಟಕಿ ಡಾ.ತಮಿಳ್ ಸೆಲ್ವಿ ಅವರನ್ನು ಆಯ್ಕೆ ಮಾಡಿದೆ.

ನ.15 ರ ಭಾನುವಾರ ಬೆಳಗ್ಗೆ 10.30ಕ್ಕೆ ಬೆಂಗಳೂರಿನ ಚಾಮರಾಜಪೇಟೆಯ ಕನ್ನಡ ಸಾಹಿತ್ಯ ಪರಿಷತ್ತಿನ ಶ್ರೀಕೃಷ್ಣರಾಜ ಪರಿಷನ್ಮಂದಿರ ದಲ್ಲಿ ಹಮ್ಮಿಕೊಳ್ಳಲಾಗಿರುವ ಕನ್ನಡ ಸಂಘರ್ಷ ಸಮಿತಿ ಸಂಸ್ಥಾಪನಾ ದಿನಾಚರಣೆ ಹಾಗೂ ರಾಮಣ್ಣ ಎಚ್. ಕೋಡಿಹೊಸಹಳ್ಳಿ–80 ಅಭಿನಂದನಾ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು. ಪ್ರಶಸ್ತಿಯು ಸ್ಮರಣಿಕೆ ಹಾಗೂ ತಲಾ 11 ಸಾವಿರ ನಗದು ಪುರಸ್ಕಾರ ಹೊಂದಿದೆ.





ಕನ್ನಡ ಹೋರಾಟಗಾರ ರಾಮಣ್ಣ ಎಚ್. ಕೋಡಿಹೊಸಹಳ್ಳಿ ನವಂಬರ್ 15 ರಂದು 80 ವಸಂತ ಪೂರೈಸುವ ಹಿನ್ನೆಲೆಯಲ್ಲಿ ಇದೇ ಕಾರ್ಯಕ್ರಮದಲ್ಲಿ ಅವರನ್ನು ಅಭಿನಂದಿಸಲಾಗುವುದು.

ಕಾರ್ಯಕ್ರಮವನ್ನು ಪೂಜ್ಯಶ್ರೀ ವೀರಭದ್ರ ಚನ್ನಮಲ್ಲ ದೇಶಿಕೇಂದ್ರ ಮಹಾಸ್ವಾಮೀಜಿ ಸಾನಿಧ್ಯದಲ್ಲಿ ಜರುಗಿಸಲಾಗುವುದು. ಕಾರ್ಯಕ್ರಮವನ್ನು ನಾಡೋಜ ಹಂ.ಪ. ನಾಗರಾಜಯ್ಯ ಉದ್ಘಾಟಿಸುವರು.

ಡಾ. ವಸುಂಧರಾ ಭೂಪತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ, ಸ್ಮರಣ ಸಂಚಿಕೆಯನ್ನು ಬಿಡುಗಡೆ ಮಾಡಲಿದ್ದಾರೆ.

ಎನ್. ಆರ್. ವಿಶುಕುಮಾರ್ ಅಭಿನಂದನಾ ಗ್ರಂಥ ಬಿಡುಗಡೆ ಮಾಡಲಿದ್ದು, ಅಭಿನಂದನಾ ನುಡಿಯನ್ನು ಕೆ. ರಾಜಕುಮಾರ್ ನೆರವೇರಿಸಿಕೊಡಲಿದ್ದಾರೆ. ಕನ್ನಡ ಸಂಘರ್ಷ ಸಮಿತಿಯ ಅಧ್ಯಕ್ಷ ಎ.ಎಸ್.ನಾಗರಾಜಸ್ವಾಮಿ ಆಶಯ ಮಾತುಗಳನ್ನಾಡಲಿದ್ದಾರೆ.

## ಮೀಸಲಾತಿ ರದ್ದು , ಸುಪ್ರೀಂಕೋರ್ಟ್ ಮೇಲ್ಮನವಿ: ಸಚಿವ ಪ್ರಿಯಾಂಕ್ ಖರ್ಗೆ

**ಬೆಂಗಳೂರು, ಅ. 27–** ಮೀಸಲಾತಿ ನಿಯಮ ರೂಪಿಸುವಾಗ ಹಿಂದಿನ ಬಿಜೆಪಿ ಸರ್ಕಾರ ಅಗತ್ಯ ಕಾನೂನು ಪ್ರಕ್ರಿಯೆಗಳನ್ನು ಪಾಲಿಸದ ಕಾರಣ ಹೈಕೋರ್ಟ್ ಅದನ್ನು ರದ್ದುಗೊಳಿಸಿದೆ. ಇದರಿಂದ ವಿವಿಧ ಸಮುದಾಯಗಳಿಗೆ ತೊಂದರೆಯಾಗಿದ್ದು, ಸಾವಿರಾರು ಯುವಕರ ಭವಿಷ್ಯ ಅತಂತ್ರವಾಗಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಆರೋಪಿಸಿದ್ದಾರೆ.

ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹೈಕೋರ್ಟ್ ಆದೇಶವನ್ನು ಸೂಕ್ಷ್ಮವಾಗಿ ಓದಿದರೆ ನಿಯಮ ರೂಪಿಸುವಲ್ಲಿನ ಲೋಪಗಳು ಸ್ಪಷ್ಟವಾಗುತ್ತವೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗಕ್ಕೆ ಪ್ರಸ್ತಾವನೆ ಕಳುಹಿಸಿ ಸಲಹೆ ಪಡೆಯುವಂತಹ ಕಡ್ಡಾಯ ಪ್ರಕ್ರಿಯೆಗಳನ್ನು ಹಿಂದಿನ ಸರ್ಕಾರ ಪಾಲಿಸಿಲ್ಲ. ಚುನಾವಣೆ ದೃಷ್ಟಿಯಿಂದ ತರಾತುರಿಯಲ್ಲಿ ನಿರ್ಧಾರ ಕೈಗೊಂಡ ಪರಿಣಾಮ ಈ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಹೈಕೋರ್ಟ್ ಆದೇಶ ಪ್ರಶ್ನಿಸಿ ಸುಪ್ರೀಂ ಕೋರ್ಟ್‌ನಲ್ಲಿ ವಿಶೇಷ ಮೇಲ್ಮನವಿ ಅರ್ಜಿ (ಎಸ್‌ಎಲ್‌ಪಿ) ಸಲ್ಲಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ. ಈ ಕುರಿತು ಸಂಪುಟದಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ. ಮೀಸಲಾತಿ ವಿಚಾರದಲ್ಲಿ ಸರ್ಕಾರ ಪ್ರಾಮಾಣಿಕ ಪ್ರಯತ್ನ ನಡೆಸಲಿದೆ. ಈ ವಿಚಾರಕ್ಕೆ ನಮ್ಮ ವಿರೋಧವಿಲ್ಲ ಎಂದು ಸ್ಪಷ್ಟಪಡಿಸಿದರು.

**ಎಸ್‌ಐಆರ್ ವಿರುದ್ಧ ನ. 1ರಂದು ಪ್ರತಿಭಟನೆ:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ರಾಜ್ಯ ಸರ್ಕಾರ ಸ್ಪಷ್ಟ ನಿಲುವು ಹೊಂದಿದೆ. ಮತದಾರರ ಪಟ್ಟಿಗೆ ಸಂಬಂಧಿಸಿದ ಫಾರ್ಮ್–6, ಫಾರ್ಮ್–7 ಹಾಗೂ ಚುನಾವಣಾ ಆಯೋಗದ ಏರೋನೆಟ್ ವ್ಯವಸ್ಥೆಯಲ್ಲಿನ ಲೋಪಗಳ ಬಗ್ಗೆ ಪ್ರಶ್ನೆಗಳು ಎದ್ದಿವೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್



ಪ್ರಶ್ನೆಗಳಿಗೆ ಉತ್ತರಿಸುತ್ತಿಲ್ಲ. ಇತರ ಇಬ್ಬರು ಚುನಾವಣಾ ಆಯುಕ್ತರೂ ಲಿಖಿತವಾಗಿ ತಮ್ಮ ಆಕ್ಷೇಪ ದಾಖಲಿಸಿದ್ದಾರೆ ಎಂಬ ವಿಚಾರವನ್ನು ಉಲ್ಲೇಖಿಸಿದ ಅವರು, ಈ ಎಲ್ಲ ಪ್ರಶ್ನೆಗಳಿಗೆ ಉತ್ತರ ಸಿಗಬೇಕು ಎಂದು ಒತ್ತಾಯಿಸಿದರು. ನ. 1ರಂದು ಇಂಡಿಯಾ ಮೈತ್ರಿಕೂಟದ ವತಿಯಿಂದ ನಡೆಯುವ ಪ್ರತಿಭಟನೆಯಲ್ಲಿ ಜ್ಞಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಲಾಗುವುದು. ಇದು ರಾಷ್ಟ್ರೀಯ ಮಟ್ಟದ ಪ್ರಜಾಪ್ರಭುತ್ವದ ವಿಚಾರವಾಗಿದ್ದು, ಕನ್ನಡ ರಾಜ್ಯೋತ್ಸವದ ಆಚರಣೆಗೆ ಇದರಿಂದ ಯಾವುದೇ ಅಡ್ಡಿಯಾಗುವುದಿಲ್ಲ. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಕನ್ನಡಧ್ವಜ ಹಾರಿಸಿ ರಾಜ್ಯೋತ್ಸವ ಆಚರಿಸಲಾಗುತ್ತದೆ. ಪ್ರತಿಭಟನೆ ಮತ್ತು ರಾಜ್ಯೋತ್ಸವಕ್ಕೆ ಸಂಬಂಧವಿಲ್ಲ ಎಂದು ಸ್ಪಷ್ಟಪಡಿಸಿದರು.

**ಐಟಿ ಕಂಪನಿಗಳಲ್ಲಿ ಕನ್ನಡಿಗರಿಗೆ ಆದ್ಯತೆ ನೀಡಲಿ:** ಐಟಿ ಕಂಪನಿಗಳು ಸರ್ಕಾರದಿಂದ ಸಬ್ಸಿಡಿ ಮತ್ತು ಪ್ರೋತ್ಸಾಹಧನ ಪಡೆಯುತ್ತಿದ್ದು, ಉದ್ಯೋಗ ಸೃಷ್ಟಿ ಹಾಗೂ ಕನ್ನಡಿಗರಿಗೆ ಅವಕಾಶ ನೀಡುವ ವಿಚಾರದಲ್ಲಿಯೂ ಜವಾಬ್ದಾರಿ ವಹಿಸಬೇಕು ಎಂದು ಸಚಿವರು ಹೇಳಿದರು.

ಕೃತಕ ಬುದ್ಧಿಮತ್ತೆ ಸೇರಿದಂತೆ ಹೊಸ ತಂತ್ರಜ್ಞಾನಗಳ ಬೆಳವಣಿಗೆಯಿಂದ ಉದ್ಯೋಗ ಸೃಷ್ಟಿಯ ಪ್ರಮಾಣ ಹಿಂದಿನದಕ್ಕಿಂತ ಶೇ. 40ರಿಂದ 50ರಷ್ಟು ಕಡಿಮೆಯಾಗಿದೆ. ಈ ಸವಾಲು ಎದುರಿಸಲು ದೊಡ್ಡ ಮಟ್ಟದ ಮರುಕೌಶಲ್ಯ ತರಬೇತಿ ಅಗತ್ಯವಿದೆ. ಅದಕ್ಕಾಗಿ ರಾಜ್ಯ ಸರ್ಕಾರ ರೂ.300 ಕೋಟಿ ವೆಚ್ಚದಲ್ಲಿ 'ನಿಪುಣ ಕರ್ನಾಟಕ' ಕಾರ್ಯಕ್ರಮ ರೂಪಿಸಿದ್ದು, ಕನ್ನಡಿಗರ ಕೌಶಲ್ಯ ಹೆಚ್ಚಿಸುವ ಉದ್ದೇಶ ಹೊಂದಿದೆ. ಈಗಾಗಲೇ ಸಾವಿರಾರು ವಿದ್ಯಾರ್ಥಿಗಳು ಮತ್ತು ಉದ್ಯೋಗಿಗಳು ಕಾರ್ಯಕ್ರಮಕ್ಕೆ ನೋಂದಾಯಿಸಿಕೊಂಡಿದ್ದಾರೆ ಎಂದರು.

**ರೈತರ ಸಮಸ್ಯೆಗೆ ಕೇಂದ್ರವೇ ಉತ್ತರಿಸಲಿ:** ಬೆಂಬಲ ಬೆಲೆ (ಎಂಎಸ್‌ಪಿ) ವಿಚಾರದಲ್ಲಿ ರಾಜ್ಯ ಸರ್ಕಾರದ ಅಧಿಕಾರ ಸೀಮಿತವಾಗಿದೆ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು. ರೈತರು ಪ್ರತಿಭಟನೆ ನಡೆಸಿದಾಗ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಗಮನಕ್ಕೆ ತರಲಾಗಿತ್ತು. ರೈತರನ್ನು ದೆಹಲಿಗೆ ಕರೆಸಿಕೊಂಡರೂ ಅವರಿಗೆ ಪರಿಹಾರ ಅಥವಾ ಸ್ಪಷ್ಟ ಭರವಸೆ ದೊರೆಯಲಿಲ್ಲ ಎಂದು ಆರೋಪಿಸಿದರು. ಎಂಎಸ್‌ಪಿ ಹೆಚ್ಚಿಸುವ ಅಥವಾ ಕಡಿಮೆ ಮಾಡುವ ಅಧಿಕಾರ ಕೇಂದ್ರ ಸರ್ಕಾರಕ್ಕಿದೆ. ಈ ಬಗ್ಗೆ ಕೇಂದ್ರ ಸಚಿವರನ್ನೇ ಪ್ರಶ್ನಿಸಬೇಕು. ರೈತರ ಸಮಸ್ಯೆ ಬಗೆಹರಿಸುವ ಜವಾಬ್ದಾರಿ ಕೇಂದ್ರದ ಮೇಲಿದೆ ಎಂದರು.

## ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾವಚನ ಬೋಧನೆ

**ಬೆಂಗಳೂರು, ಅ.26–** ಭ್ರಷ್ಟಾಚಾರದ ವಿರುದ್ಧ ಜಾಗೃತಿ ಮೂಡಿಸುವ ಉದ್ದೇಶದಿಂದ ಆಚರಿಸಲಾಗುತ್ತಿರುವ ಜಾಗೃತಿ ಅರಿವು ಸಪ್ತಾಹದ ಅಂಗವಾಗಿ ವಿಕಾಸ ಸೌಧದಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಸಚಿವಾಲಯದ ಅಧಿಕಾರಿಗಳು ಹಾಗೂ ನೌಕರರಿಗೆ ಭ್ರಷ್ಟಾಚಾರ ವಿರೋಧಿ ಪ್ರತಿಜ್ಞಾವಚನ ಬೋಧಿಸಿದರು.

ಸರ್ಕಾರದ ಆಡಳಿತ ವ್ಯವಸ್ಥೆಯಲ್ಲಿ ಪಾರದರ್ಶಕತೆ, ಪ್ರಾಮಾಣಿಕತೆ ಹಾಗೂ ಹೊಣೆಗಾರಿಕೆಯನ್ನು ಉತ್ತೇಜಿಸುವ ನಿಟ್ಟಿನಲ್ಲಿ ಭ್ರಷ್ಟಾಚಾರ ವಿರೋಧಿ ಜಾಗೃತಿ ಮೂಡಿಸುವುದು ಈ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ.

ಈ ಸಂದರ್ಭದಲ್ಲಿ ಸರ್ಕಾರದ ಹಿರಿಯ ಅಧಿಕಾರಿಗಳಾದ ಪಂಕಜ್ ಕುಮಾರ್ ಪಾಂಡೆ, ಮನೋಜ್ ಕುಮಾರ್ ಮೀನಾ, ಜಗದೀಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಚಿವಾಲಯದ ನೌಕರರು ಉಪಸ್ಥಿತರಿದ್ದರು.



# ಇಂದು ಬಳ್ಳಾರಿ ಬಿಡಿಸಿಸಿಐನಲ್ಲಿ ಸೈಬರ್ ಅಪರಾಧಗಳ ತಡೆಗಟ್ಟುವಿಕೆ ಜಾಗೃತಿ ಶಿಬಿರ




**ಬಳ್ಳಾರಿ, ಅ. 27:** ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಹಾಗೂ ಬಳ್ಳಾರಿ ಜಿಲ್ಲಾ ಪೊಲೀಸ್ ಇಲಾಖೆಯ ಜಂಟಿ ಆಶ್ರಯದಲ್ಲಿ ಅಕ್ಟೋಬರ್ 28ರ ಬುಧವಾರ ಸಂಜೆ 4:00 ಗಂಟೆಗೆ ಬಳ್ಳಾರಿಯ ಬಿಡಿಸಿಸಿಐ ಆಡಿಟೋರಿಯಂನಲ್ಲಿ 'ಸೈಬರ್ ಅಪರಾಧಗಳ ತಡೆಗಟ್ಟುವಿಕೆ ಜಾಗೃತಿ' ಶಿಬಿರ ನಡೆಯಲಿದೆ.

ಬಿಡಿಸಿಸಿಐ ಅಧ್ಯಕ್ಷ ಅವ್ವಾರು ಮಂಜುನಾಥ್ ಹಾಗೂ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು ಅವರು ಮಾಹಿತಿ ನೀಡಿದ್ದು, ಬಳ್ಳಾರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ಸುಮನ್ ಡಿ. ಪೆನ್ನೇಕರ್ ಅವರು ಮುಖ್ಯ ಅತಿಥಿಗಳಾಗಿದ್ದು, ಬೆಂಗಳೂರಿನ ಕ್ರೈಂ ಬ್ರಾಂಚ್‌ನ ಡಿಸಿಪಿ ಆರ್.ಐ. ಖಾಸಿಂ ಹಾಗೂ ಹೈದರಾಬಾದ್‌ನ ಸಿಎ ಪ್ರೇಮನಾಥ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದ್ದಾರೆ.

ಆನ್‌ಲೈನ್ ವಂಚನೆ, ಡಿಜಿಟಲ್ ಪಾವತಿ ವಂಚನೆ, ಸಾಮಾಜಿಕ ಜಾಲತಾಣಗಳ ದುರುಪಯೋಗ ಹಾಗೂ ವಿವಿಧ ರೀತಿಯ ಸೈಬರ್ ಅಪರಾಧಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಸೈಬರ್ ಸುರಕ್ಷತೆಗಳ ಕುರಿತು ಜಾಗೃತಿ ಪಡೆಯಲು ಈ ಜಾಗೃತಿ ಶಿಬಿರವು ನೆರವಾಗಲಿದೆ.

ಸಾರ್ವಜನಿಕರು, ವ್ಯಾಪಾರಿಗಳು, ಉದ್ಯಮಿಗಳು ಹಾಗೂ ಆಸಕ್ತರು ಪಾಲ್ಗೊಳ್ಳಲು ಕೋರಲಾಗಿದೆ. ಈ ಜಾಗೃತಿ ಶಿಬಿರಕ್ಕೆ ಉಚಿತ ಪ್ರವೇಶವಿದೆ. ಸೈಬರ್ ಅಪರಾಧಗಳನ್ನು ತಡೆಗಟ್ಟುವಲ್ಲಿ ಈ ಶಿಬಿರವು ಉಪಯುಕ್ತವಾಗಿದೆ ಎಂದು ಅವರು ತಿಳಿಸಿದ್ದಾರೆ.

# ಅಲ್ಲಂ ಪ್ರಶಾಂತ್ ನೇತೃತ್ವದಲ್ಲಿ ಬಳ್ಳಾರಿ ಕಾಂಗ್ರೆಸ್ ಕಚೇರಿಯಲ್ಲಿ ವಾಲ್ಮೀಕಿ ಜಯಂತಿ ಆಚರಣೆ



ಬಳ್ಳಾರಿ, ಅ.27: ನಗರದಲ್ಲಿನ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಇಂದು ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಪಕ್ಷದ ನಗರ ಅಧ್ಯಕ್ಷ ಅಲ್ಲಂ ಪ್ರಶಾಂತ್ ಅಧ್ಯಕ್ಷತೆಯಲ್ಲಿ ವಾಲ್ಮೀಕಿ ಭಾವಚಿತ್ರಕ್ಕೆ ಪುಷ್ಪ ಅರ್ಪಿಸುವ ಮೂಲಕ ಆಚರಿಸಲಾಯ್ತು.ಈ ವೇಳೆ ಅಲ್ಲಂ ಪ್ರಶಾಂತ್, ಪಕ್ಷದ ಮುಖಂಡರಾದ ಪಿ.ಜಗನ್ನಾಥ(ಜಗನ್), ಸಂಗನಕಲ್ಲು ವಿಜಯಕುಮಾರ್ ವಾಲ್ಮೀಕಿ ಅವರ ಬದುಕು ಬರಹ ವಿಶ್ವಕ್ಕೆ ರಾಮಾಯಣದ ಮೂಲಕ ನೀಡಿದ ಸಂದೇಶ ಸರ್ವ ಕಾಲಿಕವಾಗಿದೆ. ಮೀಸಲಾತಿ ಹೆಚ್ಚಳ ಅನುಷ್ಠಾನಕ್ಕೆ ತರುವ ಕೆಲಸ ಆಗಬೇಕಿದೆ ಎಂದರು.

# ಹೋಟೆಲ್, ಬೇಕರಿಗಳ ಮೇಲೆ ಆಹಾರ ಸುರಕ್ಷತಾ ಅಧಿಕಾರಿಗಳ ದಿಢೀರ್ ದಾಳಿ: ರೂ.50,000 ದಂಡ ವಸೂಲಿ



**ಬಳ್ಳಾರಿ,ಅ.27.** ನಗರದಲ್ಲಿ ನಿಯಮಬಾಹಿರವಾಗಿ ಹಾಗೂ ಅಶುಚಿತ್ವದಿಂದ ಆಹಾರ ಪದಾರ್ಥಗಳನ್ನು ತಯಾರಿಸಿ ಮಾರಾಟ ಮಾಡುತ್ತಿದ್ದ ಹೋಟೆಲ್‌ಗಳ ಮೇಲೆ ಆಹಾರ ಸುರಕ್ಷತೆ ಮತ್ತು ಔಷಧಿ ಆಡಳಿತ ಇಲಾಖೆ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳ ಜಂಟಿ ತಂಡವು ದಿಢೀರ್ ದಾಳಿ ನಡೆಸಿ ಪರಿಶೀಲನೆ ನಡೆಸಿದೆ. ನಿಯಮ ಉಲ್ಲಂಘಿಸಿದ ಎರಡು ಹೋಟೆಲ್‌ಗಳಿಗೆ ಸ್ಥಳದಲ್ಲೇ ಒಟ್ಟು ರೂ.50,000 ದಂಡ ವಿಧಿಸಲಾಗಿದೆ. ಜಿಲ್ಲಾ ಅಂಕಿತ ಅಧಿಕಾರಿಗಳ ನೇತೃತ್ವದಲ್ಲಿ, ಆಹಾರ ಸುರಕ್ಷತೆ ಅಧಿಕಾರಿಗಳು ಮತ್ತು ಬಳ್ಳಾರಿ ತಹಶೀಲ್ದಾರರ ತಂಡವು ಅಕ್ಟೋಬರ್ 19ರಂದು ನಗರದ ಪ್ರಮುಖ ಹೋಟೆಲ್‌ಗಳು ಮತ್ತು ಬೇಕರಿಯ ಮೇಲೆ ಈ ಕಾರ್ಯಾಚರಣೆ ನಡೆಸಿದೆ.

***ಹೋಟೆಲ್ ಮಯೂರ ಪರಿಶೀಲನೆ (ಹಳೇ ಬಸ್ ನಿಲ್ದಾಣದ ಎದುರು):** ಅಧಿಕಾರಿಗಳು ಹಳೇ ಬಸ್ ನಿಲ್ದಾಣದ ಎದುರಿಗಿರುವ ಹೋಟೆಲ್ ಮಯೂರಕ್ಕೆ ಭೇಟಿ ನೀಡಿದಾಗ ಹಲವು ಗಂಭೀರ ಲೋಪಗಳು ಪತ್ತೆಯಾಗಿದ್ದು, ಆಹಾರ ಸುರಕ್ಷತಾ ಕಾಯ್ದೆಯಡಿ ಯಾವುದೇ ಪರವಾನಿಗೆ ಪಡೆಯದೆ ಹೋಟೆಲ್ ನಡೆಸಲಾ ಗುತ್ತಿತ್ತು. ಆಹಾರ ತಯಾರಿಸುವ ಜಾಗದಲ್ಲಿ ತೀವ್ರ ಅಶುಚಿತ್ವ, ಗೋಡೆ ಹಾಗೂ ಕಿಟಕಿಗಳಲ್ಲಿ ಧೂಳು ಆವರಿಸಿತ್ತು ಮತ್ತು ಚರಂಡಿ ವ್ಯವಸ್ಥೆ ಸರಿಯಾಗಿರಲಿಲ್ಲ. ಅಡುಗೆ ತಯಾರಕರು ಗ್ಲೌಸ್ ಹಾಗೂ ಮಾಸ್ಕ್ ಧರಿಸಿರಲಿಲ್ಲ. ಕಲಬೆರಕೆ ಶಂಕೆಯ ಮೇಲೆ ಸ್ಥಳದಲ್ಲೇ 8 ಆಹಾರ ಮಾದರಿಗಳನ್ನು ಪರೀಕ್ಷೆಗಾಗಿ ಸಂಗ್ರಹಿಸಲಾಯಿತು.

ನಿಯಮ ಉಲ್ಲಂಘನೆಯ ಹಿನ್ನೆಲೆಯಲ್ಲಿ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ 2006ರ ಅಡಿಯಲ್ಲಿ ಹೋಟೆಲ್ ಗೆ ಸ್ಥಳದಲ್ಲೇ ರೂ.25,000 ದಂಡ ವಿಧಿಸಿ, ನ್ಯೂನತೆಗಳನ್ನು ತಕ್ಷಣವೇ ಸರಿಪಡಿಸಿಕೊಳ್ಳುವಂತೆ ಎಚ್ಚರಿಕೆ ನೀಡಲಾಯಿತು.

***ಹೋಟೆಲ್ ರೇಣುಕಾ ದರ್ಶಿನಿ ಪರಿಶೀಲನೆ (ದುರ್ಗಮ್ಮ ಗುಡಿ ಸರ್ಕಲ್)** ದುರ್ಗಮ್ಮ ಗುಡಿ ವೃತ್ತದಲ್ಲಿರುವ ಹೋಟೆಲ್ ರೇಣುಕಾ ದರ್ಶಿನಿಯಲ್ಲೂ ಪರವಾನಿಗೆ ಇಲ್ಲದೆ ವ್ಯಾಪಾರ ನಡೆಸುತ್ತಿರುವುದು ಕಂಡುಬಂದಿದೆ. ಆಹಾರ ತಯಾರಿಕಾ ಸ್ಥಳದಲ್ಲಿ ಶುಚಿತ್ವದ ಕೊರತೆ ಮತ್ತು ಧೂಳು ತುಂಬಿತ್ತು. ಕೆಲಸಗಾರರು ಮಾಸ್ಕ್ ಹಾಗೂ ಗ್ಲೌಸ್ ಬಳಸುತ್ತಿರಲಿಲ್ಲ. ಪರಿಶೀಲನೆ ವೇಳೆ ಅಡುಗೆಗೆ ಕೊಳೆತ ತರಕಾರಿ ಬಳಸುತ್ತಿರುವುದು ಹಾಗೂ ಟೀ ಪುಡಿಗೆ ಬಣ್ಣ ಮಿಶ್ರಣ ಮಾಡಿರುವುದು ಬೆಳಕಿಗೆ ಬಂದಿದೆ. ಈ ಹೋಟೆಲ್‌ನಿಂದಲೂ ಆಹಾರ ಮಾದರಿಗಳನ್ನು ಸಂಗ್ರಹಿಸಲಾಗಿದ್ದು, ನಿಯಮ ಉಲ್ಲಂಘನೆಗಾಗಿ ಸ್ಥಳದಲ್ಲೇ ರೂ.25,000 ದಂಡ ವಿಧಿಸಲಾಯಿತು.

***ರೇಣುಕಾ ಬೇಕರಿ ಪರಿಶೀಲನೆ:** ದುರ್ಗಮ್ಮ ಗುಡಿ ಸರ್ಕಲ್ ಬಳಿಯಿರುವ ರೇಣುಕಾ ಬೇಕರಿಗೂ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲಿಸಿತು. ಇಲ್ಲಿಂದ 3 ಆಹಾರ ಮಾದರಿಗಳನ್ನು ಸಂಗ್ರಹಿಸಲಾಯಿತಾದರೂ, ಬೇಕರಿ ಆವರಣವು ಸ್ವಚ್ಛವಾಗಿ ನಿರ್ವಹಿಸಲ್ಪಟ್ಟಿರುವುದು ಕಂಡುಬಂದಿದೆ. ಯಾವುದೇ ನ್ಯೂನತೆಗಳು ಇಲ್ಲದ ಕಾರಣ, ಮುಂದೆಯೂ ಇದೇ ರೀತಿ ಸ್ವಚ್ಛತೆ ಕಾಪಾಡಿಕೊಂಡು ಹೋಗುವಂತೆ ಮಾಲೀಕರಿಗೆ ಸಲಹೆ ನೀಡಲಾಯಿತು.

ಆಹಾರ ಪದಾರ್ಥಗಳಲ್ಲಿ ಕಲಬೆರಕೆ ಹಾಗೂ ಅಶುಚಿತ್ವ ಕಂಡುಬಂದರೆ ಕಾನೂನು ಪ್ರಕಾರ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಆಹಾರ ಸುರಕ್ಷತಾ ಇಲಾಖೆಯ ಜಿಲ್ಲಾ ಅಂಕಿತ ಅಧಿಕಾರಿಗಳು ಎಚ್ಚರಿಕೆ ನೀಡಿದ್ದಾರೆ.

# ಪ್ರಧಾನಿ ಮೋದಿ ನಾಲಿಗೆ ಹರಿಯಬಿಟ್ಟ ಮಲ್ಲಿಕಾರ್ಜುನ ಖರ್ಗೆ: ತವರಿನಲ್ಲೇ ಕ್ಷಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ




**ಕಲಬುರಗಿ, ಅ. 27:** ಬಿಹಾರದ ಪಾಟ್ನಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಕುರಿತು ಅವಹೇಳನಕಾರಿಯಾಗಿ ತಮ್ಮ ನಾಲಿಗೆ ಹರಿಬಿಟ್ಟು ಪದಗಳನ್ನು ಬಳಸಿರುವ ಎಐಸಿಸಿ ಮಲ್ಲಿಕಾರ್ಜುನ ಖರ್ಗೆ ಅವರು ಕೂಡಲೇ ಬಹಿರಂಗ ಕ್ಷಮೆ ಯಾಚಿಸಬೇಕು ಎಂದು ಆಗ್ರಹಿಸಿ ಖರ್ಗೆ ತವರು ಜಿಲ್ಲೆ ಕಲಬುರಗಿಯಲ್ಲೇ ಬಿಜೆಪಿ, ಮಹಾನಗರ ಮತ್ತು ಗ್ರಾಮಾಂತರ ಜಿಲ್ಲಾ ಘಟಕಗಳು ನಗರದಲ್ಲಿ ಪ್ರತಿಭಟನೆ ನಡೆಸಿ ಆಗ್ರಹಿಸಿದವು.

ಮಲ್ಲಿಕಾರ್ಜುನ ಖರ್ಗೆ ಅವರು ರಅಜ್ಯಸಭಾ ವಿರೋಧ ಪಕ್ಷದ ನಾಯಕರೂ ಆಗಿದ್ದು, ಸಭ್ಯತೆ ಮೀರಿದ ಪದಗಳನ್ನು ಬಳಕೆ ಮಾಡಿದ್ದಾರೆ. ಅವರ ವಿರುದ್ಧ ಕ್ರಮ ಜರುಗಿಸುವಂತೆ ರಾಜ್ಯಪಾಲರ ಮೂಲಕ ರಾಷ್ಟ್ರಪತಿಗಳು ಮತ್ತು ರಾಸಬಾ ಸಭಾಪತಿಗಲೂ ಆಗಿರುವ ಉಪರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಿದರು.

ಮೇಲ್ಮನೆ ಎಂದು ಕರೆಯುವ ವಿದ್ಯಾವಂತರು ಮತ್ತು ತಜ್ಞರು ಇರುವಂಥ ರಾಜ್ಯಸಭೆಯ ವಿರೋಧ ಪಕ್ಷದ ನಾಯಕರಂತಹ ಉನ್ನತ ಸ್ಥಾನದಲ್ಲಿರುವ ಮಲ್ಲಿಕಾರ್ಜುನ ಖರ್ಗೆ ಅವರು, ರಾಷ್ಟ್ರದ ಪ್ರಧಾನಿಯವರನ್ನು ಹೇಗೆ ಸಂಬೋಧಿಸಬೇಕು ಎಂಬು ಕುರಿತೂ ಪರಿಜ್ಞಾನ ಇಲ್ಲದಿರುವುದು ದುರದೃಷ್ಟಕರ ಸಂಗತಿ. ಉನ್ನತ ಹುದ್ದೆಯಲ್ಲಿರುವುದನ್ನೂ ಮರೆತು, ಪ್ರಧಾನಿ ವಿರುದ್ಧ ಅಸಂಬದ್ಧ ಪದಗಳನ್ನು ಬಳಸಿರುವುದು ವಿಷಾದನೀಯ ಮತ್ತು ಖಂಡನೀಯ ಎಂದು ಬಿಜೆಪಿ ಮನವಿಯಲ್ಲಿ ತಿಳಿಸಿದೆ. ಪ್ರಧಾನಿ ಮೋದಿ ಅವರ ಕುರಿತು ನೀಡಿರುವ ಹೇಳಿಕೆಯನ್ನು ಕೂಡಲೇ ಹಿಂಪಡೆದು, ಖರ್ಗೆ ಅವರು ಸಾರ್ವಜನಿಕವಾಗಿ ಕ್ಷಮೆ ಯಾಚಿಸಬೇಕು. ಇಲ್ಲದಿದ್ದರೆ ಬಿಜೆಪಿ ವತಿಯಿಂದ ಜಿಲ್ಲೆಯಾದ್ಯಂತ ಖರ್ಗೆ ವಿರುದ್ಧ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಮನವಿಯಲ್ಲಿ ಎಚ್ಚರಿಕೆ ನೀಡಲಾಗಿದೆ.

ಪ್ರತಿಭಟನೆಯಲ್ಲಿ ವಿಧಾನ ಪರಿಷತ್ ಬಿಜೆಪಿ ಮುಖ್ಯ ಸಚೇತಕ ಎನ್.ರವಿಕುಮಾರ, ಬಿಜೆಪಿ ಜಿಲ್ಲಾಧ್ಯಕ್ಷ ಅಶೋಕ ಬಗಲಿ, ನಗರ ಅಧ್ಯಕ್ಷ ಚಂದು ಪಾಟೀಲ್, ಶಾಸಕರಾದ ಬಿಜಿ ಪಾಟೀಲ್, ಶಶೀಲ್ ನಮೋಶಿ, ಮಾಜಿ ಶಾಸಕ ರಾಜಕುಮಾರ ಪಾಟೀಲ್ ತೇಲ್ಕೂರ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು. ಬಿಜೆಪಿಯವರು ಕಲಬುರಗಿಯಲ್ಲಿ ಇದೇ ಪ್ರಥಮ ಬಾರಿಗೆ ಮಲ್ಲಿಕಾರ್ಜುನ ಕಗೆ ವಿರುದ್ಧ ಪ್ರತಿಬಟನೆ ನಡೆಸಿದ್ದು, ಇದರ ಮುಂಚೂಣಿ ವಹಿಸಿದ್ದು ಎನ್. ರವಿಕುಮಾರ. ಈ ಹಿಂದೆ 2019ರಲ್ಲಿ ಖರ್ಗೆ ಲೋಕಸಭೆಯಲ್ಲಿ ಸಟಲಿಸಲೂ ಕೂಡ ಎನ್.ರವಿಕುಮಾರ ಅವರೇ ಚುನಾವಣೆ ಮುಗಿಯುವ ವರೆಗೂ ಕಲಬುರಗಿಯಲ್ಲಿ ಠಿಕಾಣಿ ಹೂಡಿ ಕಾರ್ಯತಂತ್ರ ರೂಪಸಿದ್ದನ್ನು ಇಲ್ಲಿ ಸ್ಮರಿಸಬಹುದು.

# ಗ್ರಾಮೀಣ ಪ್ರತಿಭೆಗೆ ಒಲಿದ ವೈದ್ಯ ಸೀಟು ಅಭಿನಂದನೆ: ಡಾ. ಸದಾನಂದ ಪೆರ್ಲ



**ಕಲಬುರಗಿ, ಅ.26– :** ಗ್ರಾಮೀಣ ಪ್ರದೇಶದ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ಪ್ರತಿಭಾವಂತೆಯೊಬ್ಬಳು ಸರಕಾರಿ ಕೋಟಾದಡಿ ವೈದ್ಯಕೀಯ ಸೀಟು ಪಡೆದು ಮಾದರಿಯಾಗಿದ್ದಾಳೆ!.

ಕಲಬುರಗಿಯ ಸಯ್ಯದ್ ಚಿಂಚೋಳಿ ಗ್ರಾಮದ ಮಾಜಿ ಪಂಚಾಯತ್ ಅಧ್ಯಕ್ಷರಾದ ಅನಿಲ್ ಕುಮಾರ್ ಡಾಂಗೆ ಮತ್ತು ಸುನಿತಾ ಡಾಂಗೆ ಅವರ ಸುಪುತ್ರಿ ರುಚಿತಾ ಡಾಂಗೆ ತಮ್ಮ ಪರಿಶ್ರಮದ ಓದಿನಿಂದ ಇದೀಗ ಕಲಬುರಗಿಯ ಶೆಟ್ಟಿ ಹೋಮಿಯೋಪತಿ ಕಾಲೇಜಿನಲ್ಲಿ ಬಿಎಚ್ಎಂಎಸ್ ಗೆ (ಹೋಮಿಯೋಪತಿ) ಸೀಟು ಪಡೆದು ಮಾದರಿಯಾಗಿದ್ದಾಳೆ. ಕಲಬುರಗಿ ಸಮೀಪದ ಸಯ್ಯದ್ ಚಿಂಚೋಳಿಯ ಚಂದ್ರಶೇಖರ್ ಪಾಟೀಲ್ ರೇವೂರು ಪ್ರಾಥಮಿಕ ಮತ್ತು ಪ್ರೌಢಶಾಲೆಯಲ್ಲಿ ಒಂದರಿಂದ 10ನೇ ತರಗತಿಯ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿ ನಂತರ ಕಲಬುರಗಿಯ ಶಾಂತಿ ಚೇತನ ಪಿಯು ಕಾಲೇಜಿನಲ್ಲಿ ಅಧ್ಯಯನ ಮಾಡಿ ಇದೀಗ ವೈದ್ಯಕೀಯ ವ್ಯಾಸಂಗಕ್ಕೆ ಸೀಟು ಗಿಟ್ಟಿಸಿಕೊಂಡಿದ್ದಾಳೆ.

ಪ್ರತಿಭಾವಂತ ವಿದ್ಯಾರ್ಥಿನಿಯನ್ನು ಇತ್ತೀಚೆಗೆ ನಡೆದ ಸಮಾರಂಭದಲ್ಲಿ ವಿಶೇಷವಾಗಿ ಸನ್ಮಾನಿಸಿದ ಆಕಾಶ ವಾಣಿಯ ನಿವೃತ್ತ ಕಾರ್ಯಕ್ರಮ ಮುಖ್ಯಸ್ಥರಾದ ಡಾ. ಸದಾನಂದ ಪೆರ್ಲ ಮಾತನಾಡಿ ಪ್ರತಿಭೆ ಅರಳಲು ನಗರ ಗ್ರಾಮೀಣ ಎಂಬ ಭೇದ ಭಾವವಿಲ್ಲ. ಆದರೆ ಶ್ರದ್ಧೆ, ಸ್ಪಷ್ಟ ಗುರಿ ಮತ್ತು ಕಠಿಣ ಪರಿಶ್ರಮವೇ ಯಶಸ್ಸಿಗೆ ಮೂಲ ಕಾರಣ ಎಂದು ಹೇಳಿ ರುಚಿತಾ ಡಾಂಗೆ ಅವರು ಗ್ರಾಮೀಣ ವಿದ್ಯಾರ್ಥಿಗಳಿಗೆ ಮಾದರಿ ಯಾಗಿದ್ದಾರೆ ಎಂದರು.

ಸಾಧನೆ ತೋರಿದ ವಿದ್ಯಾರ್ಥಿನಿಗೆ ಕಲಿತ ಶಾಖೆಯಲ್ಲಿ ಶಾಲು ಹೂಗುಚ್ಛ ಸ್ಮರಣಿಕೆ ನೀಡಿ ಸನ್ಮಾನಿಸಲಾಯಿತು.

## ನಾಳೆ ಹಾಸನಾಂಬ ದೇವಿ ಮತ್ತು ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ: ವಿಶೇಷ ಪೂಜೆ ಮತ್ತು ಮೆರವಣಿಗೆ




**ಹಾಸನ,ಅ.27–** ಹಾಸನಾಂಬೆ ದೇವಿ ಮತ್ತು ಸಿದ್ದೇಶ್ವರ ಸ್ವಾಮಿ ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ದೇವಿಯ ಅಮೂಲ್ಯ ಆಭರಣಗಳು ನಗರದ ಸಾಲಗಾಮೆ ರಸ್ತೆಯಲ್ಲಿರುವ ಜಿಲ್ಲಾ ಖಜಾನೆಯಿಂದ ಹಾಸನಾಂಬೆ ದೇವಾಲಯಕ್ಕೆ ಪೊಲೀಸ್ ಬಂದೋ ಬಸ್ತ್‌ನಲ್ಲಿ ಕೊಂಡೊಯ್ಯಲಾಯಿತು. ಆಭರಣಗಳನ್ನು ದೇವಾಲಯಕ್ಕೆ ರವಾನಿಸುವ ಮುನ್ನ ಉಪ ವಿಭಾಗಾಧಿಕಾರಿ ಜಗದೀಶ್ ಗಂಗಣ್ಣ ನವರ್, ತಹಶೀಲ್ದಾರ್ ಗೀತಾ ಹಾಗೂ ಪ್ರಧಾನ ಅರ್ಚಕ ನಾಗರಾಜ್ ಅವರು ಆಭರಣಗಳ ಪೆಟ್ಟಿಗೆಗೆ ಪೂಜೆ ಸಲ್ಲಿಸಿದರು. ಬಳಿಕ ವಿಶೇಷ ವಾಹನದಲ್ಲಿ ಆಭರಣಗಳನ್ನು ಮಂಗಳವಾದ್ಯಗಳೊಂದಿಗೆ ಮೆರವಣಿಗೆ ಮೂಲಕ ಆರ್.ಸಿ. ರಸ್ತೆ, ಎನ್.ಆರ್. ವೃತ್ತ ಹಾಗೂ ಗಾಂಧಿ ಬಜಾರ್ ಮಾರ್ಗವಾಗಿ ದೇವಾಲಯಕ್ಕೆ ಕೊಂಡೊಯ್ಯಲಾಯಿತು.

# ಬದುಕಿನ ಸಾರ್ಥಕತೆ ಆಯುಷ್ಯದಲ್ಲಿಲ್ಲ ಅರಿವಿನಲ್ಲಿದೆ: ಶ್ರೀ ರಂಭಾಪುರಿ ಜಗದ್ಗುರುಗಳು



**ಶಿಕಾರಿಪುರ, ಅ.26–** ಮನುಷ್ಯನಾಗಿ ಹುಟ್ಟುವುದು ನಮ್ಮ ಕೈಯಲ್ಲಿಲ್ಲ. ಆದರೆ ಉತ್ತಮ ಮನುಷ್ಯನಾಗಿ ಬದುಕುವುದು ನಮ್ಮ ಕೈಯಲ್ಲಿದೆ. ಧರ್ಮವನ್ನು ಅರಿತು ಆ ಮಾರ್ಗದಲ್ಲಿ ನಡೆದು ಬದುಕನ್ನು ಬಲಗೊಳಿಸಿಕೊಳ್ಳುವುದು ನಮ್ಮೆಲ್ಲರ ಕರ್ತವ್ಯ. ಬದುಕಿನ ಸಾರ್ಥಕತೆ ಆಯುಷ್ಯದಲ್ಲಿಲ್ಲ ಅರಿವಿನಲ್ಲಿದೆ ಎಂಬುದನ್ನು ಯಾರೂ ಮರೆಯ ಬಾರದು ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಮಾನವ ಜನ್ಮವು ಕೇವಲ ಹುಟ್ಟಿ ಬದುಕಿ ಮರೆಯಾಗುವುದಕಲ್ಲ. ಪರೋಪಕಾರ ದಯೆ ಧರ್ಮ ನಿಷ್ಠೆ ಸತ್ಯ ಸೇವೆ ಮತ್ತು ಶಿವಭಕ್ತಿಯ ಮೂಲಕ ಬದುಕನ್ನು ಪವಿತ್ರಗೊಳಿಸುವುದಕ್ಕಾಗಿದೆ. ಮನುಷ್ಯನ ನಿಜವಾದ ಹಿರಿಮೆ ಅವನ ಅಧಿಕಾರದಲ್ಲಾಗಲಿ ಸಂಪತ್ತಿನಲ್ಲಾಗಲಿ ಇಲ್ಲ. ಅವನ ಸತ್ಕಾರ್ಯಗಳಲ್ಲಿ ಸನ್ನಡೆಯಲ್ಲಿ ಮತ್ತು ಸಮಾಜಕ್ಕೆ ನೀಡುವ ಕೊಡುಗೆಯಲ್ಲಿ ಅಡಗಿದೆ. ನಾವು ಎಷ್ಟು ಕಾಲ ಬದುಕಿದ್ದೇವೆ ಎಂಬುದಕ್ಕಿಂತ ಬದುಕಿದ ಕಾಲದಲ್ಲಿ ಎಷ್ಟು ಒಳ್ಳೆಯತನವನ್ನು ಬೆಳೆಸಿದ್ದೇವೆ ಎಂಬುದು ಮುಖ್ಯ. ಹುಟ್ಟು ಸಹಜ ಆದರೆ ಮೃತ್ಯು ನಿಶ್ಚಿತ. ಹುಟ್ಟು ಮತ್ತು ಮೃತ್ಯುವಿನ ಮಧ್ಯದ ಬದುಕು ಶ್ರೀಮಂತಗೊಳಿಸಿ ಕೊಳ್ಳಬೇಕಾದದ್ದು ಅವರವರ ಜವಾಬ್ದಾರಿಯಾಗಿದೆ. ಲಿಂಗೈಕ್ಯ ಶ್ರೀ ಶಿವಾನಂದ ಶಿವಾಚಾರ್ಯ ಸ್ವಾಮಿಗಳವರ ಆದರ್ಶಗಳನ್ನು ಸ್ಮರಿಸುವುದಷ್ಟೇ ನಮ್ಮ ಕರ್ತವ್ಯವಲ್ಲ. ಅವರು ತೋರಿದ ಸನ್ಮಾರ್ಗದಲ್ಲಿ ನಡೆದು ಮಾನವೀಯ ಮೌಲ್ಯಗಳನ್ನು ನಮ್ಮ ಬದುಕಿನಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವವಾಗಿದೆ. ಶಿವಾನಂದ ಶಿವಾಚಾರ್ಯರು ವೀರಶೈವ ಧರ್ಮ ಸಂಸ್ಕೃತಿಯನ್ನು ಮತ್ತು ಆಚಾರ ವಿಚಾರಗಳನ್ನು ಜನಮನಕ್ಕೆ ಮುಟ್ಟಿಸಿದ ಶ್ರೇಯಸ್ಸು ಅವರದು. ಗುರು ಪೀಠಗಳಲ್ಲಿ ಅಪಾರಭಕ್ತಿ ಶ್ರದ್ಧೆ ಇಟ್ಟುಕೊಂಡ ಶ್ರೀಗಳು ಶ್ರೀ ಜಗದ್ಗುರು ರೇಣುಕಾಚಾರ್ಯರು ನಿರೂಪಿಸಿದ ದಶಧರ್ಮ ಸೂತ್ರಗಳನ್ನು ಪರಿಪಾಲಿಸಿ ಭಕ್ತ ಸಂಕುಲಕ್ಕೆ ದಿಕ್ಸೂಚಿಯಾಗಿದ್ದರು. ಇಂದಿನ ಪಟ್ಟಾಧ್ಯಕ್ಷರಾದ ಪಶುಪತಿ ಶಿವಾನಂದ ಶಿವಾಚಾರ್ಯ ಸ್ವಾಮಿಗಳು ಭಕ್ತಿ ಶ್ರದ್ಧೆಯಿಂದ ಆಚರಿಸುತ್ತಿರುವುದು ತಮಗೆ ಸಂತಸ ತಂದಿದೆ ಎಂದು ಹರುಷ ವ್ಯಕ್ತಪಡಿಸಿ ಶ್ರೀಗಳವರಿಗೆ ರೇಷ್ಮೆ ಶಾಲು ಫಲ ಪುಷ್ಪವಿತ್ತು ಶುಭ ಹಾರೈಸಿದರು.

# ಲಿಂಗಾಯತ ಎಲ್ಲರನ್ನೂ ಅಪ್ಪಿಕೊಳ್ಳುವ ಧರ್ಮ : ಹಾರಕೂಡ ಶ್ರೀ



**ಬಸವಕಲ್ಯಾಣ, ಅ. 27:** ಜಗತ್ತಿನ ಎಲ್ಲ ಶ್ರೇಷ್ಠ ಸಾಹಿತ್ಯಗಳಲ್ಲಿ ವಚನ ಸಾಹಿತ್ಯ ಶ್ರೇಷ್ಠ ಸಾಹಿತ್ಯವಾಗಿದೆ. ಎಲ್ಲರನ್ನೂ ಅಪ್ಪಿಕೊಳ್ಳುವ ಧರ್ಮ ಲಿಂಗಾಯತ ಧರ್ಮವಾಗಿದೆ ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ತಿಳಿಸಿದರು.

ಸ್ವಾಭಿಮಾನಿ ತತ್ವನಿಷ್ಠ ಶರಣರಿಂದ ಪಟ್ಟಣದ ಸಸ್ತಾಪುರ ಬಂಗ್ಲಾ ಸಮೀಪದ ಎಂ.ಎಂ. ಬೇಗ್ ಕಲ್ಯಾಣ ಮಂಟಪದಲ್ಲಿ ಜರುಗುತ್ತಿರುವ 25ನೇ ಕಲ್ಯಾಣ ಪರ್ವದ ರಜತ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಇಂದಿನ ಆದಯುನಿಕ ಯುಗದಲ್ಲೂ ವಚನಗಳ ಪ್ರಸ್ತುತತೆ ಕುಗ್ಗಿಲ್ಲ. ಸಮಾಜದಲ್ಲಿ ಶೋಷಣೆ, ಭ್ರಷ್ಟಾಚಾರ ಹಾಗೂ ಅಸಮಾನತೆ ತಾಂಡವವಾಡುತ್ತಿರುವ ಈ ದಿನಗಳಲ್ಲಿ ಬಸವಾದಿ ಶರಣರ 'ನುಡಿದಂತೆ ನಡೆ' ಮತ್ತು ಎಲ್ಲರನ್ನೂ ತನ್ನತ್ತ ಸೆಳೆಯುವ "ಇವನಮ್ಮವ ಇವನಮ್ಮವ ಎಂದೆನಿಸಯ್ಯ" ಎಂಬ ತತ್ವ ಪ್ರತಿಯೊಬ್ಬರಿಗೂ ಮಾರ್ಗದರ್ಶಿಯಾಗಿದೆ. ವಚನಗಳ ಅಧ್ಯಯನ ಮತ್ತು ಅವುಗಳ ಆಶಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಇಂದಿನ ತುರ್ತು ಅಗತ್ಯವಾಗಿದೆ ಎಂದರು.

12ನೆಯ ಶತಮಾನದ ಶರಣ ಚಳವಳಿ ಮತ್ತು ವಚನ ಸಾಹಿತ್ಯವು ಕನ್ನಡ ಸಾಹಿತ್ಯ ಚ–ರಿತ್ರೆಯಲ್ಲಿ ಮಾತ್ರವಲ್ಲದೆ, ಇಡೀ ವಿಶ್ವದ ವೈಚಾಯಿರಿಕ ಇತಿಹಾಸದಲ್ಲೇ ಒಂದು ಅದ್ಭುತ ಮೈಲಿಗಲ್ಲು. ಬಸವಣ್ಣನವರ ನೇತೃತ್ವದಲ್ಲಿ ನಡೆದ ಈ ವೈಚಾಯಿರಿಕ ಹಾಗೂ ಸಾಮಾಜಿಕ ಚಳವಳಿಯು ಸಮಾನತೆ, ಕಾಯಕ ಮತ್ತು ದಾಸೋಹ ತತ್ವಗಳ ಮೂಲಕ ಹೊಸ ಸಮಾಜದ ನಿರ್ಮಾಣಕ್ಕೆ ಬಲಿಷ್ಠ ಅಡಿಪಾಯ ಹಾಕಿತು. ದೇವರು ಈ ಜಗತ್ತಿಗೆ ಬಸವಣ್ಣನವರನ್ನು ನೀಡಿದರು. ಬಸವೇಶ್ವರರು ಅನುಭವ ಮಂಟಪ ನೀಡಿದರು. ಅನುಭವ ಮಂಟಪ ಶರಣರನ್ನು ನೀಡಿತು. ಶರಣರು ವಚನ ಸಾಹಿತ್ಯ ನೀಡಿದರು. ವಚನ ಸಾಹಿತ್ಯ ಮಾನವನಿಗೆ ಮಹಾದೇವ ನನ್ನಾಗಿ ಮಾಡಿತು ಎಂದರು.

ನೇತೃತ್ವ ವಹಿಸಿದ್ದ ಜಗದ್ಗುರು ಡಾ. ಚನ್ನಬಸವಾನಂದ ಸ್ವಾಮೀಜಿ ಮಾತನಾಡಿ, ಇಸ್ಲಾಂ ಬಂಧುಗಳು ಪ್ರತಿದಿನ ನಮಾಜ್ ಮಾಡುವಂತೆ, ಕ್ರೈಸ್ತರು ವಾರಕ್ಕೊಮ್ಮೆ ಪ್ರಾರ್ಥನೆ ಮಾಡಿ ಧರ್ಮಪ್ರಚಾರ ಮಾಡುವಂತೆ ಲಿಂಗಾಯತ ಬಾಂಧವರು ಪ್ರಾರ್ಥನೆ ಮೂಲಕ ವಾರಕ್ಕೊಮ್ಮೆ ಸೇರಿ ಪ್ರಚಾರ ಮಾಡಬೇಕು. ಬೌದ್ಧ ಧರ್ಮಿಯರು ದೇಶ ವಿದೇಶಗಳಲ್ಲಿ ಸಂಚರಿಸಿ ಧರ್ಮ ಪ್ರಚಾರ ಮಾಡುವಂತೆ ಲಿಂಗಾಯತ ಮಠಾಧೀಶರು ಮಠಗಳಿಂದ ಹೊರಬಂದು ಬಸವ ತತ್ವವನ್ನು ವಿಶ್ವದ ತುಂಬೆಲ್ಲ ಪಸರಿಸಬೇಕಾಗಿದೆ. ಮುಂದಿನ ವರ್ಷ ಎಂಟನೇ ಅಂತರಾ ಷ್ಟ್ರೀಯ ಬಸವ ತತ್ವ ಸಮ್ಮೇಳನ ಸಿಂಗಾಪುರನಲ್ಲಿ ಆಯೋಜಿಸಲಾಗಿದೆ. ಬಸವ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕೆಂದು ಸ್ವಾಮೀಜಿ ಕರೆ ನೀಡಿದರು.

ಗುಣತೀರ್ಥವಾಡಿಯ ಕಲ್ಯಾಣ ಮಹಾಮನೆಯ ಬಸವಪ್ರಭು ಸ್ವಾಮೀಜಿ ಮಾತನಾಡಿ ಅಂದು ಬಸವಣ್ಣನವರ ವ್ಯಕ್ತಿತ್ವಕ್ಕೆ ಮಾರುಹೋಗಿ ಅಂಗ ವಂಗ ಕಳಿಂಗ ಮತ್ತು ವಿದೇಶದಿಂದ ಶರಣರು ಕಲ್ಯಾಣಕ್ಕೆ ಬಂದು ಪಾವನಗೊಳಿಸಿದರು. ಹಾಗೆಯೇ 2002ರಲ್ಲಿ ಮಾತೆ ಮಹಾದೇವಿಯವರು ಕಲ್ಯಾಣಕ್ಕೆ ಬಂದು 108 ಬಸವ ಪುತ್ಥಳಿ, ಶರಣಗ್ರಾಮ ಸ್ಥಾಪಿಸಿ, ದೇಶ ವಿದೇಶಗಳಿಂದ ಭಕ್ತರು ಕಲ್ಯಾಣಕ್ಕೆ ಬರುವಂತೆ ಮಾಡಿದ್ದಾರೆ. ಅವರು ಹಾಕಿಕೊಟ್ಟ ಸನ್ಮಾರ್ಗದಲ್ಲಿ ನಡೆಯುತ್ತಿರುವ ಪೂಜ್ಯ ಚನ್ನಬಸವಾನಂದ ಶ್ರೀಗಳು ಹಾಗೂ ಅವರ ಇಡೀ ತಂಡ ಇಂದು ಬಸವ ತತ್ವದ ಪ್ರಚಾರ ಪ್ರಸಾರಗೈಯುತ್ತಿರುವುದು ಶ್ಲಾಘನೀಯ ಎಂದರು.

ಇಂದು ಕೆಲವು ಮಠಾಧೀಶರಿಂದ ಬಸವ ತತ್ವ ಕಲುಷಿತಗೊಳಿಸುವ ಹುನ್ನಾರ ನಡೆಯುತ್ತಿದೆ. ಜೈ ಬಸವ ಹೇಳುವವರ ಮುಂದೆ ಜೈ ಶ್ರೀರಾಮ ಕೂಗುವ ದ್ವೇಷ ಭಾವನೆ ಹರಡಿಸಲಾಗುತ್ತಿದೆ. ಬಸವಾಭಿಮಾನಿಗಳು ಎಚ್ಚರಗೊಳ್ಳಬೇಕಾಗಿದೆ ಎಂದರು. ಮಾತೆ ಸತ್ಯಾದೇವಿ ಮಾತನಾಡಿ ಪೂಜ್ಯ ಲಿಂಗಾನಂದ ಸ್ವಾಮಿಗಳ ಹಾಗೂ ಪೂಜ್ಯ ಮಾತಾಜಿಯವರ ಸತ್ ಸಂಕಲ್ಪದಂತೆ ಸ್ವಾಭಿಮಾನಿ ಶರಣ ಮೇಳ ಕಲ್ಯಾಣ ಪರ್ವಗಳು ನಡೆಯುತ್ತಿವೆ. ಕಾರ್ಯಕರ್ತರು, ಕ್ರಿಯಾಮೂರ್ತಿಗಳು ಇನ್ನೂ ಹೆಚ್ಚು ಹೆಚ್ಚು ಬಸವಜ್ಯೋತಿ ಕಾರ್ಯಕ್ರಮಗಳು, ಮಾಸಿಕ ಶರಣ ಸಂಗಮ ಸೇರಿದಂತೆ ಮುಂತಾದ ಕಾರ್ಯಕ್ರಮ ಮಾಡಿಸುವ ಮೂಲಕ ಬಸವ ತತ್ವವನ್ನು ಜನರ ಮನಸಿನ ಹತ್ತಿರ ತೆಗೆದುಕೊಂಡು ಹೋಗುವ ಬಹುದೊಡ್ಡ ಜವಾಬ್ದಾರಿ ಎಲ್ಲರ ಮೇಲಿದೆ ಎಂದರು.

ಗಂಗಾವತಿ, ರಾಯಚೂರು, ಕಲಬುರಗಿ, ಹಂದ್ರಾಳು, ಬೆಳಗಾವಿ ಸೇರಿದಂತೆ ಸುಮಾರು 25 ರಾ.ಬ.ದಳಗಳಿಗೆ ಅತ್ಯುತ್ತಮ ರಾಷ್ಟ್ರೀಯ ಬಸವ ದಳ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಕು. ಸಮೃದ್ಧಿ ಅಶೋಕ ಲಾಧಾ ಅವರಿಂದ ವಚನ ನೃತ್ಯ ಜರುಗಿತು. ಕೊಪ್ಪಳ ಜಿಲ್ಲೆಯ ಬೆಟ್ಟಪ್ಪ ಅವರ ತಂಡದ ಕಲ್ಯಾಣ ಕ್ರಾಂತಿ ನಾಟಕ ಸಭೀಕರ ಗಮನ ಸೆಳೆಯಿತು. ಮಂಡ್ಯದ ಶಿವು ಜನ್ನ ಅವರ ವಚನ ಗಾಯನ ಆನಂದದಲ್ಲಿ ತೇಲಾಡಿಸಿತು.

# ಡಿಸೆಂಬರ್‌ನಲ್ಲಿ ಮೂರು ದಿನಗಳ ರಾಷ್ಟ್ರ ಮಟ್ಟದ ಬೃಹತ್ ರೈತ ಸಮಾವೇಶ: ಗುತ್ತೇದಾರ



**ಕಲಬುರಗಿ, ಅ. 27:** ನಗರದ ಆಳಂದ ರಸ್ತೆಯ ಭೋಸಗಾ ಕ್ರಾಸ್‌ನಲ್ಲಿನ ಸಂತೋಷ್ ಗುತ್ತೇದಾರ್ ಅವರ 18 ಎಕರೆ ಜಮೀನಿನಲ್ಲಿ ಇದೇ ಡಿಸೆಂಬರ್ 12, 13 ಮತ್ತು 14ರಂದು ಮೂರು ದಿನಗಳ ಕಾಲ ರಾಷ್ಟ್ರ ಮತ್ತು ರಾಜ್ಯ ಮಟ್ಟದ ಬೃಹತ್ ರೈತರ ಸಮಾವೇಶ ಆಯೋಜಿಸಲಾಗಿದೆ ಎಂದು ಎಂದು ಮಾಜಿ ಸಚಿವರೂ ಆದ ಕಾಂಗ್ರೆಸ್ ನಾಯಕ ಮಾಲಿಕಯ್ಯ ಗುತ್ತೇದಾರ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಮಾವೇಶದಲ್ಲಿ ಗ್ರಾಮ ಸ್ವರಾಜ್ಯ, ಆಹಾರ ಪದ್ದತಿ, ರೈತರು ಬೆಳೆದ ಬೆಳಗೆ ಬೆಂಬಲ ಬೆಲೆ ಕುರಿತು ರಾಷ್ಟ್ರೀಯ ವಿಚಾರವಂತರು, ಕೃಷಿ ತಜ್ಞರು, ಕೇಂದ್ರದ ಕೃಷಿ ಸಚಿವ ಶಿವರಾಜಸಿಂಗ್ ಚೌವ್ಹಾಣ, ರಾಜ್ಯದ ಕೃಷಿ ಸಚಿವರು, ನೀರಾವರಿ ಸಚಿವರು ಹಾಗೂ ರೈತರಿಗೆ ಸಂಬಂಧ ಪಟ್ಟ ಎಲ್ಲ ಮುಖಂಡರು ರಾಜಕೀಯ ನಾಯಕರು ಮತ್ತು ನಾಡಿನ ಸಮಸ್ತ ಶರಣರು, ಸಂತರು, ಅನುಭವವುಳ್ಳ ಎಲ್ಲಾ ಪ್ರಗತಿಪರ ರೈತರು ಸೂಕ್ತ ಮಾರ್ಗದರ್ಶನ ಕೊಡಲಿದ್ದಾರೆ ಎಂದರು.

ಸಾಮಾಜಿಕ ಚಿಂತಕ ಅಣ್ಣಾ ಹಜಾರೆ, ಸುತ್ತೂರಿನ ಜಗದ್ಗುರು ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಕನ್ನೇರಿ ಅದೃಶ್ಯ ಕಾಡಸಿದ್ದೇಶ್ವರ ಶ್ರೀಗಳು, ಕೊಪ್ಪಳದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು ಹಾಗೂ ಧರ್ಮಸ್ಥಳದ ಧರ್ಮಾಧಿಕಾರಿ ಡಾ.ಡಿ.ವೀರೇಂದ್ರ ಹೆಗ್ಗಡೆ ಮತ್ತು ವಿಶೇಷವಾಗಿ ಕೇಂದ್ರ ಸರ್ಕಾರದ ಸಚಿವರು ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ, ಕರ್ನಾಟಕ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ, ಮಾಜಿ ಮುಖ್ಯಮಂತ್ರಿಗಳಾದ ಬಿ.ಎಸ್. ಯಡಿಯೂರಪ್ಪ, ಸಿದ್ಧರಾಮಯ್ಯ, ಕೃಷಿ ಸಚಿವರು, ನೀರಾವರಿ ಸಚಿವರು, ಜಿಲ್ಲೆಯ ರಾಜಕೀಯ ಮುಖಂಡರು, ಸಮಾಜದ ಮುಖಂಡರು, ರೈತಪರ, ಕನ್ನಡಪರ ಸಂಘಟನೆಗಳು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ಸಮ್ಮೇಳನವು ರೈತರಿಗೆ ಆದಯುನಿಕ ಹಾಗೂ ಪಾರಂಪರಿಕ ಕೃಷಿ ಪದ್ಧತಿಗಳೆರಡನ್ನೂ ಒಳಗೊಂಡಂತೆ, ಬದಲಾಗುತ್ತಿರುವ ಹವಾಮಾನಕ್ಕೆ ಹೊಂದಿಕೊಂಡು ಲಾಭಕರ ಕೃಷಿ ಮಾಡುವುದನ್ನು ತಿಳಿಸುವ ಕೆಲಸ ಮಾಡುತ್ತದೆ. ಇದರಲ್ಲಿ, ಒಟ್ಟಾರೆ ಸಮಗ್ರ ಕೃಷಿ, ಲಕಪತಿ ಖೇತಿ,. ಸಾವಯವ ಕೃಷಿಯ ಬಗ್ಗೆ. ಒಂದೂವರೆ ಎಕರೆಯಲ್ಲಿ 100ಕ್ಕೂ ಹೆಚ್ಚು ಬೆಳೆಗಳನ್ನು ಬೆಳೆಯಲಾಗುತ್ತಿದ್ದು ಅವುಗಳ ಸಂಪೂರ್ಣ ಮಾಹಿತಿಯನ್ನು ನೀಡಲಾಗುತ್ತದೆ. ಇದರಲ್ಲಿ ಸಮಗ್ರ ಕೃಷಿಯ ಎಲ್ಲ ಘಟಕಗಳಾದ ಪಶುಪಾಲನೆ (ಆಕಳು, ಎಮ್ಮೆ, ಕುರಿ, ಆಡು, ಕೋಳಿ, ಮೀನು ಇತ್ಯಾದಿ), ಮೇವಿನ ಬೆಳೆ ಹಾಗೂ ಅವುಗಳ ಸಂಗ್ರಹಣಾ ಪದ್ಧತಿಯಾದ ಸೈಲೆಝು ಮಾಡುವುದು, ಬಯೋಗ್ಯಾಸ, ಎರೆಹುಳು ಘಟಕ ಮತ್ತು ಇತರೆ ಸಾವಯವ ಕೃಷಿ ಪರಿಕರಗಳನ್ನು ಮಾಡುವುದು ಮತ್ತು ಬಳಸುವ ಪದ್ಧತಿ, ನೀರಾವರಿ ಪದ್ಧತಿ, ಮುಚ್ಚಿಗೆ, ಜೇನುಹುಳು ಸಾಕಾಣಿಕೆ, ರೆಷ್ಮೇ ಕೃಷಿ, ಹೈಡ್ರೋಪೋನಿಕ್ಸ, ಹೀಗೆ ಇನ್ನೂ ಹಲವಾರು ಕೃಷಿ ಬೆಳೆ ಮತ್ತು ಕೃಷಿಗೆ ಪೂರಕವಾಗಿರುವ ಘಟಕಗಳ ಪ್ರಾತ್ಯಕ್ಷತೆಯ (ಡೆಮೋ) ಪ್ರದರ್ಶನವನ್ನು ಏರ್ಪಡಿಸಲಾಗುವುದು ಎಂದು ಅವರು ಹೇಳಿದರು.

ಭಾರತೀಯ ಗೋ ತಳಿಗಳು ಜೊತೆಗೆ ಎಮ್ಮೆ, ಆಡು, ಕುರಿ, ಕೋಳಿಗಳ ವಿವಿಧ ತಳಿಗಳ ಪ್ರದರ್ಶನವೂ ಇರಲಿದ್ದು, 250ಕ್ಕೂ ಹೆಚ್ಚು ಕೃಷಿ ಸಂಭಂದಿತ ಮಳಿಗೆಗಳಿಗೆ ವ್ಯವಸ್ಥೆ ಮಾಡಲಾಗಿದೆ.

ಸಣ್ಣ ರೈತಯಿರಿಗೂ ಅನುಕೂಲವಾಗುವಂತೆ ಕೃಷಿ ಯಂತ್ರೋಪಕರಣಗಳು, ಬೀಜೋತ್ಪಾದಕರು, ಗೋ ಆಧಾರಿತ ಉತ್ಪನ್ನಗಳು ಅದರಲ್ಲಿಯೂ ಪ್ರಮುಖವಾಗಿ ಸಗಣಿ–ಗೋಮೂತ್ರದಿಂದ ತಯಾರಿಸಲಾಗುವ ವಸ್ತುಗಳು ಮತ್ತು ಅವುಗಳ ತಯಾರಿಕೆಯ ಮಾಹಿತಿ ಹೊತ್ತ ಮಳಿಗೆಗಳು, ಕೃಷಿಗೆ ಸಂಬಂಧಿತ ಪುಸ್ತಕ ಮಳಿಗೆಗಳು, ಪ್ರಗತಿಪರ ರೈತರು, ಸರ್ಕಾರಿ ಸೌಲಭ್ಯಗಳ ಮಾಹಿತಿ, ಹೀಗೆ ಇನ್ನೂ ಹತ್ತು ಹಲವಾರು ವಿಷಯಗಳ ಮಳಿಗೆಗಳು ಇದರಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

# ಸ್ಟಿಂಗ್ ಆಪರೇಷನ್ ಕೃತ್ಯದಲ್ಲಿ ಮಹಿಳೆಯರೇ ಬಲಿಪಶು: ಡಾ.ನಾಗಲಕ್ಷ್ಮಿ ಚೌಧರಿ ಕಿಡಿ



**ಕಲಬುರಗಿ, ಅ. 27:** ಕೆಲ ವ್ಯಕ್ತಿಗಳ ದುರುದ್ದೇಶ ಹಾಗೂ ಸ್ವಾರ್ಥಕ್ಕಾಗಿ ನಡೆಯುವ ಸ್ಟಿಂಗ್ ಆಪರೇಷನ್ ಪ್ರಕರಣಗಳಲ್ಲಿ ಮಹಿಳೆಯರೇ ಬಲಿಪಶುಗಳಾಗುತ್ತಿದ್ದಾರೆ. ಇಂತಹ ಚಟುವಟಿಕೆಗಳಲ್ಲಿ ಮಹಿಳೆಯರನ್ನು ಬಳಸಿಕೊಂಡು ತಮ್ಮ ಕೆಲಸ ಸಾಧಿಸಿಕೊಂಡ ನಂತರ ಅವರ ನೆರವಿಗೆ ಯಾರೂ ನಿಲ್ಲುವುದಿಲ್ಲ. ಹೀಗಾಗಿ ಮಹಿಳೆಯರು ಈ ವಿಷಯಗಳ ಬಗ್ಗೆ ಎಚ್ಚರಿಕೆಯಿಂದಿರಬೇಕು ಎಂದು ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಹೇಳಿದರು.

ನಗರದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಸ್ಟಿಂಗ್ ಆಪರೇಷನ್ ಕೇವಲ ರಾಜಕೀಯ ವ್ಯಕ್ತಿಗಳ ವಿರುದ್ಧ ಮಾತ್ರವೇ ನಡೆಸುವುದಲ್ಲ. ಅದು ಮಾತ್ರ ಬೆಳಕಿಗೆ ಬರುತ್ತಿದೆ. ಆದರೆ, ಉದ್ಯಮಿಗಳ ವಿರುದ್ಧ ಮತ್ತು ಅಧಿಕಾರಿಗಳ ವಿರುದ್ಧ ಬ್ಲಾಕ್ ಮೇಲೆ ಮಾಡಲೂ ಕೂಡ ಸ್ಟಿಂಗ್ ಆಪರೇಷನ್ ನಡೆಯುತ್ತಿದ್ದು, ಇವೆಲ್ಲವುಗಳಿಗೂ ಅಮಾಯಕ ಮತ್ತು ಬಡ ಮಹಿಳೆಯರನ್ನು ಬಳಸಿಕೊಳ್ಳಲಾಗುತ್ತದೆ. ಸ್ಟಿಂಗ್ ಆಪರೇಷನ್ ಬಯಲಿಗೆ ಬಂದಾಗ ಆ ಮಹಿಳೆಯ ನೆರವಿಗೆ ಯಾರೂ ಬರುವದಿಲ್ಲ. ಇದರಲ್ಲಿ ಮಹಿಳೆಯ ತಪ್ಪು ಏನೂ ಇಲ್ಲದಿದ್ದರೂ ಬಲಿಪಶು ಮಾತ್ರ ಆಗಿ ಜೀವನಪೂರ್ತಿ ಕೊರಗುವಂತಾಗುತ್ತಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಕೆಲವರು ತಮ್ಮ ಅನುಕೂಲ ಹಾಗೂ ಸ್ವಾರ್ಥಕ್ಕಾಗಿ ಸ್ಟಿಂಗ್ ಆಪರೇಷನ್ ಹೆಸರಿನಲ್ಲಿ ಮಹಿಳೆಯರನ್ನು ಬಳಸಿಕೊಳ್ಳುತ್ತಿರುವ ಪ್ರವೃತ್ತಿ ಹೆಚ್ಚಾಗಿದ್ದು ಅತ್ಯಂತ ಆತಂಕಕಾರಿ ಬೆಳವಣಿಗೆಯಾಗಿದೆ. ವಿವಿಧ ರೀತಿಯ ಆಮಿಷಗಳನ್ನು ಒಡ್ಡಿ ಮಹಿಳೆಯರನ್ನು ಇಂತಹ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲಾಗುತ್ತಿದೆ. ತಮ್ಮ ಉದ್ದೇಶ ಈಡೇರಿದ ಬಳಿಕ ಸಂಬಂಧಿಸಿದ ಮಹಿಳೆಯರ ಬೆಂಬಲಕ್ಕೆ ಯಾರೂ ನಿಲ್ಲುವದಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಸ್ಟಿಂಗ್ ಆಪರೇಷನ್ ಪ್ರಕರಣಗಳಲ್ಲಿ ಮುಂಚೂಣಿಯಲ್ಲಿರುವ ಮಹಿಳೆಯರು ಎದುರಿಸಬೇಕಾದ ಸಾಮಾಜಿಕ ಹಾಗೂ ಕೌಟುಂಬಿಕ ಪರಿಣಾಮಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಈ ಪ್ರಕರಣದಲ್ಲಿ ಮಹಿಳೆಯ ತಪ್ಪು ಇರುವದಿಲ್ಲವಾದರೂ ಬಲಿಪಾಸುವಾಗುತ್ತಾಳೆ. ಇಂತಹ ಪ್ರಕರಣಗಳಿಂದ ಮಹಿಳೆಯರ ವೈಯಕ್ತಿಕ ಜೀವನದ ಮೇಲೆ ಮಾತ್ರವಲ್ಲದೆ, ಅವರ ಕುಟುಂಬದ ಸದಸ್ಯರು ಹಾಗೂ ಮಕ್ಕಳ ಭವಿಷ್ಯದ ಮೇಲೂ ಗಂಭೀರ ರೀತಿಯ ದುಷ್ಪರಿಣಾಮ ಉಂಟಾಗಬಹುದು. ಆಗುತ್ತಿವೆ. ಈ ಮಹಿಳೆಯರು ಸಮಾಜದಲ್ಲಿ ತೀವ್ರ ಮುಜುಗರ ಅನುಭವಿಸುವ ಪರಿಸ್ಥಿತಿಯೂ ಎದುರಾಗುತ್ತದೆ. ಅವರ ಬದುಕು ದುಭ್ರವಾಗುತ್ತದೆ ಎಂದರು.

ಹೀಗಾಗಿ ಮಹಿಳೆಯರು ಇಂತಹ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮೊದಲು ಅದರ ಸಾಧಕ–ಬಾಧಕಗಳನ್ನು ಅರಿತುಕೊಳ್ಳಬೇಕು. ಹಣದ ಆಸೆಗೆ ಅಥವಾ ಉದ್ಯೋಗ ದೊರೆಯುವ ಆಸೆಗೆ ಒಳಗಾಗಿ ಇಂಥ ಕೃತ್ಯಗಳಲ್ಲಿ ತೊಡಗುತ್ತಾರೆ. ಅನೇಕ ಬಾರಿ ಉದ್ಯೋಗಸ್ಥ ಮಹಿಳೆಯರಿಗೆ ಹೆದರಿಸಿ ಇಂಥ ಕೃತ್ಯಗಳಲ್ಲಿ ಬಲವಂತವಾಗಿ ತೊಡಗುವಂತೆ ಮಾಡಲಾಗುತ್ತದೆ. ಅಸಹಾಯಕ ಮಹಿಳೆಯರು ಉದ್ಯೋಗ ಕಳೆದುಕೊಳ್ಳುವ ಹೆದರಿಕೆಯಿಂದ ಈ ಕೃತ್ಯಗಳಿಗೆ ಒಳಗಾಗುತ್ತಾರೆ. ಆದ್ದರಿಂದ ಮಹಿಳೆಯರು, ಯುವತಿಯರು ತಮ್ಮ ಕುಟುಂಬದ ಭವಿಷ್ಯ ಹಾಗೂ ವೈಯಕ್ತಿಕ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳಬೇಕು. ಇಲ್ಲವಾದರೆ ಅವರ ಬದುಕು ನರಕವಾಗುತ್ತದೆ ಎಂದು ಸಲಹೆ ನೀಡಿದರು.

ಈ ವಿಷಯದ ಕುರಿತು ಮಹಿಳೆಯರಲ್ಲಿ ಅರಿವು ಮೂಡಿಸುವ ಅಗತ್ಯವಿದೆ. ಸ್ಟಿಂಗ್ ಆಪರೇಷನ್ ಹೆಸರಿನಲ್ಲಿ ಮಹಿಳೆಯರನ್ನು ದುರುಪಯೋಗಪಡಿಸಿಕೊಳ್ಳುವ ಸಾಧ್ಯತೆಗಳ ಬಗ್ಗೆ ಜಾಗೃತಿ ಮೂಡಿಸಲು ರಾಜ್ಯ ಮಹಿಳಾ ಆಯೋಗದಿಂದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು ಚಿಂತನೆ ನಡೆಸಲಾಗುತ್ತಿದೆ. ಮುಂದಿನ ದಿನಗಳಲ್ಲಿ ಈ ಬಗ್ಗೆ ಕ್ರಮ ಕೈಕೊಳ್ಳಲಾಗುವುದು. ಯಾವುದಕ್ಕೂ ಈ ಕುರಿತು ಕಾನೂನು ಮತ್ತು ಸಾಧಕ ಬಾಧಕ ಎಲ್ಲವನ್ನೂ ಪರಿಶೀಲಿಸಿದ ನಂತರವೇ ನಿರ್ಧಾರಕ್ಕೆ ಬರಲಾಗುವುದು. ಅಲ್ಲದೇ ಸಂತ್ರಸ್ಥ ಮಹಿಳೆಯರಿಗೆ ನೆರವಾಘುವ ಸಂಬಂಧ ಮತ್ತು ಯಾರು ನೆರವು ನೀಡಬೇಕೆಂಬ ಬಗ್ಗೆಯೂ ನಿರ್ಧರಿಸಲಾಘುವುದು ಎಂದು ಚೌಧರಿ ತಿಳಿಸಿದರು.

# ಬಳ್ಳಾರಿ ಜಿಲ್ಲೆ: 10,20,443 ಅಂತಿಮ ಮತದಾರರ ಪಟ್ಟಿ ಪ್ರಕಟ ಮಹಿಳಾ ಮತದಾರರ ಸಂಖ್ಯೆ ಹೆಚ್ಚು- ಜಿಲ್ಲಾಧಿಕಾರಿ

**ಬಳ್ಳಾರಿ,ಅ.27–**ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 01.10.2026 ಅನ್ನು ಅರ್ಹತಾ ದಿನಾಂಕವನ್ನಾಗಿ ಪರಿಗಣಿಸಿ ಸಿದ್ಧಪಡಿಸಲಾದ ವಿಶೇಷ ಸಮಗ್ರ ಪರಿಷ್ಕರಣೆ–2026ರ ಬಳಿಕ ಮತದಾರರ ಅಂತಿಮ ಪಟ್ಟಿಯನ್ನು ಬಳ್ಳಾರಿ ಜಿಲ್ಲೆಯಲ್ಲಿ ಮಂಗಳವಾರ ಅಧಿಕೃತವಾಗಿ ಪ್ರಕಟಿಸಲಾಗಿದೆ. ಜಿಲ್ಲೆಯ ಒಟ್ಟು 5 ವಿಧಾನಸಭಾ ಕ್ಷೇತ್ರಗಳಲ್ಲಿ 1,260 ಮತಗಟ್ಟೆಗಳಿದ್ದು, ಒಟ್ಟು 10,20,443 ಮತದಾರರಿದ್ದಾರೆ. ಇವರಲ್ಲಿ 5,01,132 ಪುರುಷರು, 5,19,110 ಮಹಿಳೆಯರು ಹಾಗೂ 201 ಇತರೆ (ತೃತೀಯ ಲಿಂಗಿ) ಮತದಾರರು ಸೇರಿದ್ದಾರೆ.

ಈ ಅಂತಿಮ ಮತದಾರರ ಪಟ್ಟಿಯನ್ನು ಎಲ್ಲಾ ನಿಗದಿತ ಮತಗಟ್ಟೆ ಕೇಂದ್ರಗಳಲ್ಲಿ ಹಾಗೂ ಕರ್ನಾಟಕದ ಮುಖ್ಯ ಚುನಾವಣಾಧಿಕಾರಿಗಳ ಅಧಿಕೃತ ವೆಬ್‌ಸೈಟ್ (https://ceo.karnataka.gov.in/en) ಮತ್ತು ಜಿಲ್ಲಾ ಅಧಿಕೃತ ವೆಬ್‌ಸೈಟ್‌ನಲ್ಲಿ (https://ballari.nic.in/) ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ.



ಅರ್ಹ ಮತದಾರರು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಪರಿಶೀಲಿಸಿಕೊಂಡು, ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಬಲಪಡಿಸಲು ಸಹಕರಿಸಬೇಕೆಂದು ಜಿಲ್ಲಾಧಿಕಾರಿ,ಜಿಲ್ಲಾ ಚುನಾವಣಾಧಿಕಾರಿ ಆಗಿರುವ ನಾಗೇಂದ್ರ ಪ್ರಸಾದ್.ಕೆ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಖರ್ಗೆ ತಮ್ಮ ಹೇಳಿಕೆಗೆ ಬೇಷರತ್ ಕ್ಷಮೆಯಾಚಿಸಿ ರಾಜೀನಾಮೆ ನೀಡಬೇಕು: ಸೋಮಶೇಖರರೆಡ್ಡಿ ಆಗ್ರಹ

# ಮೋದಿಕಾ ಬಾಪ್ ಭೀ ಜಾಯೇಗ: ಮಲ್ಲಿಕಾರ್ಜುನ ಖರ್ಗೆ ಬಹಿರಂಗ ಕ್ಷಮೆಯಾಚನೆಗಾಗಿ ಬಿಜೆಪಿ ಪ್ರತಿಭಟನೆ

**ಬಳ್ಳಾರಿ, ಅ.27:** ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಅವರ ದಿವಂಗತ ತಂದೆಯವರ ಕುರಿತು ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ನೀಡಿರುವ ಆಕ್ಷೇಪಾರ್ಹ ಹೇಳಿಕೆಯನ್ನು ಖಂಡಿಸಿ ಹಾಗು ಅವರು ಬಹಿರಂಗವಾಗಿ ಕ್ಷಮೆಯಾಚನೆ ಮಾಡಬೇಕೆಂದು ಆಗ್ರಹಿಸಿ ನಗರದಲ್ಲಿಂದು ಬಿಜೆಪಿ ಪ್ರತಿಭಟನೆ ನಡೆಸಿತು.




ನಗರದ ಗಡಗಿ ಚೆನ್ನಪ್ಪ ಸರ್ಕಲ್‌ನಲ್ಲಿ ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ನೇತೃತ್ವದಲ್ಲಿ ಸೇರಿದ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಕಾಂಗ್ರೆಸ್ ಪಕ್ಷ ಮತ್ತು ಮಲ್ಲಿಕಾರ್ಜುನ ಖರ್ಗೆ ವಿರುದ್ಧ ಘೋಷಣೆ ಕೂಗಿದರು.

ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಹೇಳಿಕೆಗೆ ಬೇಷರತ್ ಕ್ಷಮೆಯಾಚಿಸಬೇಕು, ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು, ರಾಜಕೀಯದಲ್ಲಿ ವೈಯಕ್ತಿಕ ನಿಂದನೆಗೆ ಕಡಿವಾಣ ಹಾಕಬೇಕು ಎಂದು ಆಗ್ರಹಿಸಲಾಯ್ತು.

ಈ ವೇಳೆ ಮಾತನಾಡಿದ ಸೋಮಶೇಖರ ರೆಡಿ, ಸ್ವತಃ ಕಾಂಗ್ರೆಸ್ ಪಕ್ಷದ ಕಾರ್ಯಕರ್ತನೇ ಮೋದಿ ಎಲ್ಲಿಗೂ ಹೋಗಲ್ಲ, ಅವರು ಇದ್ದೇ ಇರ್ತಾರೆ ಎಂದಿದ್ದಾನೆ. ಈಗಲಾದರೂ ಕಾಂಗ್ರೆಸ್ ನವರಿಗೆ ತಿಳಿಯಬೇಕು. ಕೇವಲ ಸುಳ್ಳು ಹೇಳಿಕೆಗಳಿಂದ ಪ್ರತಿಭಟನೆ ಮಾಡಿದರೆ ಜನ ಮೆಚ್ಚಲ್ಲ. ಜನಮೆಚ್ಚುವಂತಹ ಕೆಲಸ ಮಾಡಿ ಅಧಿಕಾರಕ್ಕೆ ಬರಬೇಕು. ವಿಶ್ವವೇ ಕೊಂಡಾಡುವ ನಾಯಕ ಮೋದಿ ಹಾಗು ಅವರ ತಂದೆ ಬಗ್ಗೆ ಮಾತನಾಡಿ ಹಿರಿಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಅವರು ತಮ್ಮ ಕೀಳು ಸಂಸ್ಕೃತಿಯನ್ನು ತೋರಿಸಿದ್ದಾರೆ ಈಗಲಾದರೂ ತಮ್ಮಮಾತುಗಳ ಬಗ್ಗೆ ಬಹಿರಂಗ ಕ್ಷಮೆ ಕೇಳಬೇಕು ಎಂದರು.

ಪ್ರತಿಭಟನೆಯಲ್ಲಿ ಪಕ್ಷದ ಮುಖಂಡರುಗಳಾದ ಎಸ್.ಗುರುಲಿಂಗನಗೌಡ,ಜಿ.ವೆಂಕಟ ರಮಣ ಗೋನಾಳ್ ಮುರಹರಗೌಡ, ಎಸ್. ಮಲ್ಲನಗೌಡ, ಎಚ್.ಹನುಮಂತಪ್ಪ, ಕೆ.ಎಸ್.ದಿವಾಕರ್, ಪಾಲಿಕೆ ಪ್ರತಿಪಕ್ಷದ ನಾಯಕ ಮೋತ್ಕರ್ ಶ್ರೀನಿವಾಸ್, ಸದಸ್ಯ ಕೆ.ಹನುಮಂತಪ್ಪ, ಮುಖಂಡರುಗಳಾದ ಶಂಕ್ರಪ್ಪ, ಡಾ.ರೇಣುಕಾ ಮಂಜುನಾಥ, ಕೆ.ಎ.ವೇಮಣ್ಣ, ಹಂಪಿ ರಮಣ, ಕೆ.ಎಂ. ಮಹೇಶ್ವರಸ್ವಾಮಿ, ಪಿ.ಎಸ್. ಸೋಮಲಿಂಗನಗೌಡ, ದರೂರು ಶಾಂತನಗೌಡ, ಕೆ.ಆರ್ ಮಲ್ಲೇಶ್, ಕೋಳೂರು ಚಂದ್ರಶೇಖರಗೌಡ, ರಾಮಾಂಜಿನಿ ಗುಗ್ಗರಹಟ್ಟಿ, ಅಲ್ಲಾಬಕಾಷ್, ಮಲ್ಲಿಕಾರ್ಜುನಗೌಡ ಶಂಕರಬಂಡೆ, ,ಜಿಲ್ಲಾ ಮೋರ್ಚಾಗಳ ಪದಾಧಿಕಾರಿಗಳು, ಪಕ್ಷದ ಇನ್ನಿತರ ಮುಖಂಡರು ಪಾಲ್ಗೊಂಡಿದ್ದರು.

## ಕಾಂಗ್ರೆಸ್ ಬಲವರ್ಧನೆಗೆ 'ಸಂಘಟನ್ ಸೃಜನ್' ಅಭಿಯಾನ: ಹಸನ್‌ಸಾಬ್ ದೋಟಿಹಾಳ್



**ಬೀದರ, ಅ. 27:** ಕಾಂಗ್ರೆಸ್ ಬಲವರ್ಧನೆಗೆ ಸಂಘಟನ್ ಸೃಜನ್ ಅಭಿಯಾನ ಹಮ್ಮಿಕೊಳ್ಳಲಾಗಿದೆ. ಇದರಡಿ ಜಿಲ್ಲೆಯಾದ್ಯಂತ ಸಂಚರಿಸಿ, ನಿಷ್ಠಾವಂತ ಕಾರ್ಯಕರ್ತರನ್ನು ಗುರುತಿಸಿ, ಸಂಘಟಿಸುವ ಅಭಿಯಾನ ಹಮ್ಮಿಕೊಳ್ಳಲಾಗಿದೆ ಎಂದು ಕೆಪಿಸಿಸಿ ವೀಕ್ಷಕ ಹಸನ್ ಸಾಬ್ ದೋಟಿಹಾಳ್ ಹೇಳಿದರು.

ಬೀದರ್ ತಾಲ್ಲೂಕಿನ ಬಗದಲ್ ಗ್ರಾಮದಲ್ಲಿ ಸಂಘಟನ್ ಸೃಜನ್ ಅಭಿಯಾನ ಅಂಗವಾಗಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಕಾರ್ಯಕರ್ತರ ಸಭೆ ಉದ್ಘಾಟಿಸಿ, ಬ್ಲಾಕ್ ಕಾಂಗ್ರೆಸ್ ಪುನರ್ ರಚಿಸುತ್ತಿದ್ದು, ಕಾರ್ಯಕರ್ತರ ಅಭಿಪ್ರಾಯ ಆಧರಿಸಿ ನೂತನ ಅಧ್ಯಕ್ಷರನ್ನು ನೇಮಕ ಮಾಡಲಾಗುವುದು ಎಂದು ತಿಳಿಸಿದರು.

ಕ್ಷೇತ್ರದಲ್ಲಿ ಎಲ್ಲರೂ ಒಗ್ಗೂಡಿ ಪಕ್ಷದ ಸಂಘಟನೆ ಬಲಪಡಿಸಲು ಶ್ರಮಿಸೋಣ ಎಂದು ಮಾಜಿ ಶಾಸಕ ಅಶೋಕ್ ಖೇಣಿ ಹೇಳಿದರು.

ಪಕ್ಷಕ್ಕಾಗಿ ದುಡಿದವರಿಗೆ ಮಾತ್ರ ಬರುವ ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಸ್ಪರ್ಧೆಗೆ ಅವಕಾಶ ನೀಡಲಾಗುವುದು ಎಂದು ತಿಳಿಸಿದರು.

### ಮಕ್ಕಳ ಹಕ್ಕುಗಳ ರಕ್ಷಣೆ- ಸುರಕ್ಷಿತ ಬಾಲ್ಯಕ್ಕೆ ಆದ್ಯತೆ ನೀಡಿ

# ಬಾಲ್ಯವಿವಾಹ-ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಜಾಗೃತಿ ಅಗತ್ಯ -ನ್ಯಾಯಾಧೀಶ ಹರೀಶ್ ಪ್ರತಿಪಾದನೆ

**ವಿಜಯಪುರ,ಅ.27,** ಮಕ್ಕಳ ಹಕ್ಕುಗಳ ರಕ್ಷಣೆ, ಬಾಲ್ಯವಿವಾಹ ಹಾಗೂ ಮಕ್ಕಳ ಮೇಲಿನ ದೌರ್ಜನ್ಯ ತಡೆಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು. ಮಕ್ಕಳಿಗೆ ಸುರಕ್ಷಿತ ವಾತಾವರಣ ಕಲ್ಪಿಸುವ ಮೂಲಕ ಅವರ ಸಮಗ್ರ ಬೆಳವಣಿಗೆಗೆ ಆದ್ಯತೆ ನೀಡಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಹರೀಶ್ ಎ. ಹೇಳಿದರು.



ಮಕ್ಕಳು ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದುವುದರ ಜೊತೆಗೆ ವೈಯಕ್ತಿಕ ಸುರಕ್ಷತೆ ಮತ್ತು ಸಾಮಾಜಿಕ ಸುರಕ್ಷತೆಯ ಬಗ್ಗೆಯೂ ಜಾಗೃತರಾಗಿರಬೇಕು. ಸೈಬರ್ ಸುರಕ್ಷತೆ, ಆನ್‌ಲೈನ್ ವಂಚನೆ, ಮಕ್ಕಳ ಆರೋಗ್ಯ ಮತ್ತು ಮಾನಸಿಕ ಸ್ಥಿತಿ, ಪರೀಕ್ಷೆಯ ಭಯ, ಒತ್ತಡ ನಿರ್ವಹಣೆ, ಸ್ವಚ್ಛತೆ, ಆರೋಗ್ಯ ಹಾಗೂ ರಸ್ತೆ ಸುರಕ್ಷತೆಯ ಕುರಿತು ಮಕ್ಕಳಿಗೆ ಸೂಕ್ತ ಅರಿವು ಮೂಡಿಸುವುದು ಅಗತ್ಯವಾಗಿದೆ. ಯಾವುದೇ ರೀತಿಯ ಸಮಸ್ಯೆ ಎದುರಾದಾಗ ಭಯಪಡದೆ ಸಂಬಂಧ ಪಟ್ಟವರ ಗಮನಕ್ಕೆ ತರಬೇಕು ಎಂದು ತಿಳಿಸಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಅರವಿಂದ ಎಸ್. ಹಾಗರಗಿ ಮಾತನಾಡಿ, ಮಕ್ಕಳ ಹಕ್ಕುಗಳ ರಕ್ಷಣೆಯ ಮಹತ್ವವನ್ನು ವಿವರಿಸಿದರು. ವಿದ್ಯಾರ್ಥಿಗಳು ಎದುರಿಸುತ್ತಿರುವ ಶಿಷ್ಯವೇತನ ಹಾಗೂ ಸಾರಿಗೆ ವ್ಯವಸ್ಥೆಯ ಸಮಸ್ಯೆಗಳ ಕುರಿತು ಸಂಬಂಧಪಟ್ಟ ಇಲಾಖೆಗಳ ಗಮನಕ್ಕೆ ತಂದು ಪರಿಹಾರಕ್ಕೆ ಪ್ರಯತ್ನಿಸಲಾಗುವುದು ಎಂದು ಭರವಸೆ ನೀಡಿದರು.

# ಹೌತಿ ದಾಳಿಯಿಂದ ಸೌದಿಯಲ್ಲೇ ಸಿಲುಕಿದ ಸಿಪಿಐ ಶಕೀಲ್ ಅಂಗಡಿ ಕುಟುಂಬ

**ಕಲಬುರಗಿ, ಅ. 27:** ಹೌತಿ ಬಂಡುಕೋರರು ಸೌದಿ ಅರೇಬಿಯಾದ ವಿವಿಧೆಡೆ ನಿರಂತರ ದಾಳಿ ನಡೆಸುತ್ತಿರುವುದರಿಂದ ಭಾರತದ ವಿಮಾನಯಾನ ಸಂಸ್ಥೆಗಳು ಸೌದಿ ನಡುವೆ ವಿಮಾನ ಸಂಚಾರ ಸ್ಥಗಿತಗೊಳಿಸಿವೆ. ಹೀಗಾಗಿ ನಗರದ ಸಂಚಾರ ಪೊಲೀಸ್ ಠಾಣೆ–1ರ ಪೊಲೀಸ್ ಇನ್ಸ್‌ಪೆಕ್ಟರ್ ಶಕೀಲ್ ಅಂಗಡಿ ಹಾಗೂ ಅವರ ಕುಟುಂಬ ಸೌದಿ ಅರೇಬಿಯಾ ಯಾತ್ರೆಗೆ ಹೋದವರು ಜೆಡ್ಡಾದಲ್ಲಿ ಸಿಲುಕಿಕೊಂಡಿದೆ.



ಅಕ್ಟೋಬರ್ 14ರಂದು ಕಲಬುರಗಿಯಿಂದ ಶಕೀಲ್ ಅಂಗಡಿ ಅವರು ತಮ್ಮ ಕುಟುಂಬ ಸದಸ್ಯರೊಂದಿಗೆ ಉಮ್ರಾ ಯಾತ್ರೆಗೆ ತೆರಳಿದ್ದರು. ಉಮ್ರಾ ದರ್ಶನ ಸುರಳೀತವಗಿ ನಡೆದು, ಅದನ್ನು ಮುಗಿಸಿಕೊಂಡು ಸೌದಿ ಅರೇಬಿಯಾದ ಜೆಡ್ಡಾಗೆ ಬಂದು ನೆಲೆಸಿದ್ದು, ಸದ್ಯಕ್ಕೆ ಜೆಡ್ಡಾದಲ್ಲಿ ತಮ್ಮ ಕುಟುಂಬ ಸುರಕ್ಷಿತವಾಗಿದ್ದಾರೆ ಎಂದು ತಿಳಿಸಿದ್ದಾರೆ.

ಅಕ್ಟೋಬರ್ 29ರಂದು ಭಾರತಕ್ಕೆ ಹೊರಡುವ ವಿಮಾನಕ್ಕೆ ಟಿಕೆಟ್ ಬುಕ್ ಮಾಡಿರುವ ಬಗ್ಗೆ ಶಕೀಲ್ ಅವರು ಮಾಹಿತಿ ಹಂಚಿಕೊಂಡಿದ್ದಾರೆ. ಆದರೆ, ಹವತಿ ಬಂಡುಕೋರರ ದಾಳಿಯ ಹಿನ್ನೆಲೆಯಲ್ಲಿ ವಿಮಾನ ಹಾರಾಟ ಸ್ಥಗಿತಗೊಳಿಸಲಾಗಿದೆ. ಪುನರಾರಂಭ ಯಾವಾಗ ಆಗುತ್ತೋ ಗೊತ್ತಿಲ್ಲ. ಸಾಕಷ್ಟು ಮುಂಚಿತವಾಗಿ ತಿಳಿಸಿ, ಎಲ್ಲರನ್ನೂ ಸುರಕ್ಷಿತವಾಗಿ ಕರೆದೊಯ್ಯುವುದಾಗಿ ಭಾರತ ಸರ್ಕಾರ ಭಾರತದ ಯಾತ್ರಿಗಳಿಗೆ ಭರವಸೆ ನೀಡಿದೆ.

ಆದರೆ ದಾಳಿಯ ಭಯ ಇನ್ನೂ ಮುಗಿದಿಲ್ಲ. ಇರಾನ್ – ಇಸ್ರೇಲ್–ಅಮೇರಿಕೆ ಯುದ್ಧದ ಹಿನ್ನೆಲೆಯಲ್ಲಿ ಇರಾನ್ ಹೌತಿ ಬಂಡುಕೋರರ ಮೂಲಕ, ಅಮೇರಿಕೆ ಬೆಂಬಲಿಗ ರಾಷ್ಟ್ರಗಳು ಮತ್ತು ಅಮೇರಿಕೆಯ ರಕ್ಷಣಾ ಪಡೆದಗಳು ಇರುವ ದೇಶಗಳ ಮೇಲೆ ಇರಾನ್ ದಾಳಿ ನಡೆಸುತ್ತಿದೆ. ಇದೇ ಹಿನ್ನೆಲೆಯಲ್ಲಿ ಸೌದಿಯ ಮೇಲೂ ಕೂಡ ಹೌತಿ ಬಂಡುಕೋರರು ದಾಳಿ ನಡೆಸಿದ್ದಾರೆ. ಸೌದಿ ಸರ್ಕಾರದ ಸುರಕ್ಷೆಯ ಮಾಹಿತಿ ಬಂದ ನಮ್ಮತರವೇ ಭಾರತ ಸರ್ಕಾರ ವಿಮಾನ ಹಾರಾಟ ಆರಂಬಿಸಲಿದೆ. ಇಲ್ಲವಾದರೆ, ಜೆಡ್ಡಾದಿಂದ ಬೇರೆ ರಾಷ್ಟ್ರಗಳ ಮೂಲಕ ಭಾರತಕ್ಕೆ ಬರಬೇಕಾಗುತ್ತದೆ. ಯಾವುದಕ್ಕೂ ಸರ್ಕಾರ ಮಾಹಿತಿ ನೀಡುವುದರೊಂದಿಗೆ ವಿಮಾನದ ವ್ಯವಸ್ಥೆ ಮಾಡುವುದಾಗಿ ನಮ್ಮ ಯಾತ್ರಿ ತಂಡಕ್ಕೆ ಮಾಹಿತಿ ನೀಡಿದ್ದಾರೆ ಎಂದು ಶಕೀಲ ಅಂಗಡಿ ಅವರು ತಿಳಿಸಿದ್ದಾರೆ.

### ರಾಯಚೂರು ಕುಡಿಯುವ ನೀರು ಯೋಜನೆ

# ಗಣೇಕಲ್ ಜಲಾಶಯಕ್ಕೆ ಕಾಲುವೆ ನೀರು ಬಿಡುಗಡೆ

**ರಾಯಚೂರು, ಅ. 27:** ಜಿಲ್ಲೆಯ ಗಣೇಕಲ್ ಸಮತೋಲನ ಜಲಾಶಯವನ್ನು ತುಂಬಿಸಲು ಮಂಗಳವಾರ ಬೆಳಗ್ಗೆ 8ರಿಂದ ನವೆಂಬರ್ 4ರವರೆಗೆ ಬೆಳಿಗ್ಗೆ 8ರವರೆಗೆ ಸರತಿ ಪ್ರಕಾರ 3 ದಿನಗಳಿಗೆ ದೊಡ್ಡ ವಿತರಣಾ ಕಾಲುವೆಗಳನ್ನು ಅರ್ಧದಷ್ಟು ಬಂದ್ ಮಾಡಿ, ಉಳಿದ ವಿತರಣಾ ಕಾಲುವೆ ಗಳನ್ನು ಸಂಪೂರ್ಣ ಬಂದ್ ಮಾಡಿ ಕೆರೆ ತುಂಬಿಸಲು ತುರ್ತು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಪೂವಿತಾ ಎಸ್.ತಿಳಿಸಿದರು.

ತುಂಗಭದ್ರಾ ಜಲಾಶಯದಲ್ಲಿರುವ ಪ್ರಸ್ತುತ ನೀರಿನ ಲಭ್ಯತೆಗೆ ಅನುಗುಣ ವಾಗಿ ತುಂಗಭದ್ರಾ ಎಡದಂಡೆಮುಖ್ಯ ಕಾಲುವೆಯ ಮೈಲ್ 108ರಲ್ಲಿ ಇರುವ ಕೆರೆಗಳನ್ನು ತುಂಬಿಸಲು ಪ್ರತಿ ವಿಭಾಗದಲ್ಲಿ ಸುಮಾರು 200 ಕ್ಯುಸೆಕ್ ನೀರನ್ನು ಹೆಚ್ಚಿಸಿ ಗಣೇಕಲ್ ಕೆರೆಗೆ ನೀರು ತುಂಬಿಸಲಾಗುತ್ತದೆ. ಗಣೇಕಲ್ಲು ಭಾಗದಲ್ಲಿ ರೈತರಿಗೆ ನೀರಾವರಿಗೆ ಒಂದು ರೊಟೇಶನ್ ನೀರು ಕೊಡಲಾಗುತ್ತದೆ.

ಕುಡಿಯುವ ನೀರಿನ ಎಲ್ಲಾ ಕೆರೆಗಳನ್ನು ತುಂಬಿಸಿದರೆ ಕೊನೆಗೆ ಸುಮಾರು 15 ರಿಂದ 16 ಅಡಿ ನೀರು ಉಳಿಯಲಿದ್ದು, ಅದನ್ನು ಮುಂದಿನ ಡಿಸೆಂಬರ್‌ನಲ್ಲಿ ಕುಡಿಯುವ ನೀರು ನೀಡಲು ಸಾಲುತ್ತದೆ ಎಂದು ಶನಿವಾರ ಮಾಧ್ಯಮ ಗೋಷ್ಠಿಯಲ್ಲಿ ಹೇಳಿದರು.

ಗಣೇಕಲ್ ಕೆರೆ ತುಂಬಿದ ಮೇಲೆ ಸಿಂಧನೂರು, ಮಸ್ಕಿ, ಮಾನ್ವಿ ಹಾಗೂ ಅರಕೆರೆ ಭಾಗದ ಕುಡಿಯುವ ನೀರಿನ ಕೆರೆಗಳನ್ನು ಗರಿಷ್ಠ 13 ರಿಂದ 14 ಅಡಿಯೊಳಗೆ ತುಂಬಿಸಿಕೊಳ್ಳ ಬೇಕಾಗುತ್ತದೆ. ಕಡೆ 5–6 ದಿನಗಳು ನೀರಾವರಿಗೆ ಬರುವ ನೀರನ್ನು ಮಧ್ಯದಲ್ಲೂ ನೀರು ತೆಗೆದು ಕೊಳ್ಳುತ್ತಿರುವವರ ಕ್ಯೂಸೆಕ್ಸ್ ಕಡಿಮೆ ಮಾಡಿ ಸಮರ್ಪಕವಾಗಿ ಹಂಚಲಾಗುತ್ತದೆ ಎಂದು ಹೇಳಿದರು.

ಸಾಧ್ಯವಾದಷ್ಟು ಮಟ್ಟಿಗೆ ಅಪ್ಪರ್ ಮತ್ತು ಇಂಟರ್ನಲ್ ಡಿಸ್ಟ್ರಿಬ್ಯೂಟರೀಸ್ ಹಾಗೂ ಲೋವರ್ ರೊಟೇಶನ್‌ಗೂ ನೀರು ನೀಡುವ ಕುರಿತು ಎಲ್ಲಾ ಅಧಿಕಾರಿಗಳ ಜೊತೆ ಸಭೆ ನಡೆಸಿ ಚರ್ಚಿಸಲಾಗಿದೆ. ಕ್ಯಾನಲ್ ಪೂರ್ತಿ



ನಿಷೇಧ ಜಾರಿ ಮಾಡಲಾಗುತ್ತದೆ ಎಂದು ಹೇಳಿದರು.

ಜಿಲ್ಲೆಯ ಎಲ್ಲ ರೈತರು, ಮುಖಂಡರು ಹಾಗೂ ಜನಪ್ರತಿನಿಧಿಗಳು ಐಸಿಸಿಯಲ್ಲಿ ಭಾಗವಹಿಸಿದ್ದು, ಎಲ್ಲರೂ ಸಹಕಾರ ನೀಡಬೇಕು. ಕುಡಿಯುವ ನೀರಿನ ಜೊತೆಗೆ ಮುಂದೆ ತೀವ್ರ ಸಮಸ್ಯೆಯಾಗುವ ಸಾಧ್ಯತೆ ಯಿರುವುದರಿಂದ ರಸ್ತೆ ತಡೆ ಅಥವಾ ಇತರೆ ಪ್ರತಿಭಟನೆಗಳನ್ನು ಮಾಡದೆ ಅಧಿಕಾರಿಗಳೊಂದಿಗೆ ರೈತರು ಸಹಕರಿಸ ಬೇಕು ಎಂದು ಮನವಿ ಮಾಡಿದರು.

### ಸ್ಮಶಾನ ಕಾಯುವವನಿಂದಲೇ ಹೂತ ಶವಗಳ ತಲೆಬುರುಡೆ ಕಳವು!

# ಮೂವರ ಬಂಧನ, ಪೊಲೀಸ್ ವಿಚಾರಣೆ ವೇಳೆ ಆಘಾತಕಾರಿ ಕೃತ್ಯ ಬಯಲು

**ರಾಯಚೂರು, ಅ. 27:** ಸ್ಮಶಾನದಲ್ಲಿ ಹೂತ ಶವಗಳನ್ನು ಹೊರಗಡೆ ತೆಗೆದು ಅವುಗಳ ಬುರುಡೆ, ಎಲಬು ಹಾಗೂ ಇತರೆ ಭಾಗಗಳನ್ನು ಕಳ್ಳತನ ಮಾಡುತ್ತಿದ್ದಾರೆ ಎನ್ನುವ ಆರೋಪದ ಮೇಲೆ ಮೂವರನ್ನು ವಶಕ್ಕೆ ಪಡೆದು ಪೊಲೀಸರು ವಿಚಾರಣೆ ಕೈಗೊಂಡಿದ್ದಾರೆ.

ನಗರದ ಸ್ಮಶಾನದಲ್ಲಿ ಕೆಲಸ ಮಾಡುತ್ತಿರುವ ಹನುಮಯ್ಯ ತಳವಾರ, ನವೋದಯ ವೈದ್ಯಕೀಯ ಕಾಲೇಜಿನ ಸಿಬ್ಬಂದಿ ರಾಜು ಮತ್ತು ಅಫ್ಸರ್ ಅವರನ್ನು ವಶಕ್ಕೆ ಪಡೆಯಲಾಗಿದೆ. ವಿಚಾರಣೆ ಸಮಯದಲ್ಲಿ ಹನುಮಯ್ಯ ತಳವಾರ ಹೂತ ಶವಗಳನ್ನು ಹೊರಗಡೆ ತೆಗೆದು ನವೋದಯ ವೈದ್ಯಕೀಯ ಕಾಲೇಜಿನ ಸಿಬ್ಬಂದಿಗೆ ನೀಡುತ್ತಿರುವುದಾಗಿ ಒಪ್ಪಿಕೊಂಡಿದ್ದಾರೆ. ಹಲವು ದಿನಗಳಿಂದ ಹೂತ ಶವಗಳ ಕಳ್ಳಸಾಗಾಟವು ಸಾಗಿರುವುದರ ಕುರಿತು ಗಮನಿಸಿದ ಸ್ಥಳೀಯರು ನೇತಾಜಿನಗರ ಠಾಣೆಗೆ ದೂರು ನೀಡಿದ್ದು, ಅದನ್ನಾಧರಿಸಿ ಪೊಲೀಸರು ರುದ್ರಭೂಮಿಗೆ ತೆರಳಿ ಪರಿಶೀಲನೆ ನಡೆಸಿದ್ದು, ಈ ವೇಳೆ ಮನುಷ್ಯನ ಬುರುಡೆ, ಎಲುಬು ಹಾಗೂ ದೇಹದ ಇತರೆ ಭಾಗಗಳನ್ನು ಸಾಗಿಸುತ್ತಿರುವುದು ಕಂಡು ಬಂದಿದ್ದರಿಂದ ಮೂರು ಜನರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದ್ದಾರೆ.

ಸ್ಥಳಕ್ಕೆ ಬಂದ ಪೊಲೀಸರು ನವೋದಯ ವೈದ್ಯಕೀಯ ಕಾಲೇಜಿನ ಇಬ್ಬರು ಸಿಕ್ಕಿಹಾಕಿಕೊಂಡಿದ್ದು, ಸ್ಮಶಾನ ಕಾಯುವ ವ್ಯಕ್ತಿಗೆ ಹಣ ನೀಡಿ ಅಸ್ತಿಪಂಜರ ಹಾಗೂ ಬಿಡಿ ಭಾಗಗಳನ್ನು ಪಡೆದು ಅದನ್ನು ವೈದ್ಯಕೀಯ ವಿದ್ಯಾರ್ಥಿಗಳ ಸಂಶೋಧನೆಗೆ ಬಳಕೆ ಮಾಡಿಕೊಳ್ಳುತ್ತಿದ್ದರು ಎನ್ನುವುದು ಮೇಲ್ನೋಟಕ್ಕೆ ಸಾಬೀತಾಗಿದೆ.

ಶಾನದಲ್ಲಿ ಶವಗಳ ಭಾಗಗಳನ್ನು ಅಕ್ರಮವಾಗಿ ಕದ್ದೊಯ್ಯುತ್ತಿರುವ ಬಗ್ಗೆ ಸಾರ್ವಜನಿಕರು ನೀಡಿದ ಖಚಿತ ಮಾಹಿತಿ ಮೇರೆಗೆ ಸ್ಥಳಕ್ಕೆ ಧಾವಿಸಿದ ಪೊಲೀಸರು ಆರೋಪಿಗಳನ್ನು ವಶಕ್ಕೆ ಪಡೆದು ಕಾನೂನು ಕ್ರಮ ಜರುಗಿಸಿದ್ದಾರೆ. ಈ ಕುರಿತು ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ ಅವರು, ಬಂಧಿತ ಆರೋಪಿಗಳಲ್ಲಿ ವಿರೇಶ ಎಂಬಾತ ಸ್ಮಶಾನದಲ್ಲಿ ಶವಗಳ ಅಂತ್ಯಸಂಸ್ಕಾರ ಮಾಡುವ ಕೆಲಸ ನಿರ್ವಹಿಸುತ್ತಿದ್ದ. ಈತ ಹೂತುಹಾಕಿದ ಶವಗಳಿಂದ ಅಸ್ಥಿಪಂಜರದ ಭಾಗಗಳನ್ನು ಹೊರತೆಗೆದು ಉಳಿದ ಇಬ್ಬರು ಆರೋಪಿಗಳಿಗೆ ನೀಡುತ್ತಿದ್ದ ಎಂಬುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಬಗ್ಗೆ ಪ್ರತಿಕ್ರಿಯಿಸಿದ ಎಸ್‌ಪಿ, "ಆರೋಪಿಗಳು ಅಸ್ಥಿಪಂಜರದ ಭಾಗಗಳನ್ನು ಮಾರಾಟ ಮಾಡುತ್ತಿದ್ದರೆ ಎಂಬ ಬಗ್ಗೆಯೂ ಆಳವಾದ ತನಿಖೆ ನಡೆಸಲಾಗುತ್ತಿದೆ. ವೈದ್ಯಕೀಯ ಕಾಲೇಜು ಲಿಂಕ್ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿರುವ ವಿಡಿಯೋಗಳ ಕುರಿತಾಗಿಯೂ ಸಂಪೂರ್ಣ ತನಿಖೆ ನಡೆಸಿ ಸತ್ಯಾಸತ್ಯತೆಯನ್ನು ಹೊರತರಲಾಗುವುದು ಎಂದು ತಿಳಿಸಿದ್ದಾರೆ.

# ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆ, ಕಸಾಪ ಸದಸ್ಯತ್ವ ಒಂದು ಕೋಟಿಗೆ ಹೆಚ್ಚಿಸುವ ಗುರಿ- ಡಾ.ಸಿ.ಸೋಮಶೇಖರ

**ಬೀದರ್, ಅ. 27:** ನಾಡಿನ ಹಿರಿಯ ಸಾಹಿತಿಗಳು, ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಹಿತೈಷಿಗಳ ಒತ್ತಾಯದ ಮೇರೆಗೆ ಮುಂಬರುವ ಕನ್ನಡ ಸಾಹಿತ್ಯ ಪರಿಷತ್ತಿನ (ಕಸಾಪ) ರಾಜ್ಯಾಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಸ್ಪರ್ಧಿಸಲು ನಿರ್ಧರಿಸಿದ್ದೇನೆ ಎಂದು ನಿವೃತ್ತ ಐಎಎಸ್ ಅಧಿಕಾರಿ ಹಾಗೂ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ನಿಕಟಪೂರ್ವ ಅಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ಘೋಷಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಹಿರಿಯ ಸಾಹಿತಿ ಗೋ. ರು. ಚನ್ನಬಸಪ್ಪ ಸೇರಿದಂತೆ ಅನೇಕ ಸಾಹಿತಿಗಳು ಹಾಗೂ ಕನ್ನಡಪರ ಹೋರಾಟಗಾರರ ಪ್ರೀತಿಯ ಒತ್ತಾಯಕ್ಕೆ ಮಣಿದು ಚುನಾವಣಾ ಕಣಕ್ಕಿಳಿಯುತ್ತಿದ್ದೇನೆ. ಕನ್ನಡ ನಾಡು, ನುಡಿಯ ಸೇವೆಯೇ ನನ್ನ ಪ್ರಮುಖ ಉದ್ದೇಶ. ಕನ್ನಡ ಸಾಹಿತ್ಯ ಪರಿಷತ್ತನ್ನು ಜನಸಾಮಾನ್ಯರ ಪರಿಷತ್ತನ್ನಾಗಿ ರೂಪಿಸುವ ಆಶಯ ಹೊಂದಿದ್ದೇನೆ. ಪ್ರಸ್ತುತ ಸುಮಾರು 4 ಲಕ್ಷ ಇರುವ ಪರಿಷತ್ತಿನ ಸದಸ್ಯತ್ವವನ್ನು ಒಂದು ಕೋಟಿಗೆ ಹೆಚ್ಚಿಸುವ ಗುರಿ ಹೊಂದಲಾಗಿದೆ. ಯುವಕರು, ಮಹಿಳೆಯರು ಹಾಗೂ ಮಕ್ಕಳನ್ನು ಸಾಹಿತ್ಯ ಚಟುವಟಿಕೆಗಳತ್ತ ಆಕರ್ಷಿಸಲು ವಿಶೇಷ ಕಾರ್ಯಕ್ರಮಗಳನ್ನು ರೂಪಿಸಲಾಗುವುದು ಎಂದು ತಿಳಿಸಿದರು.



ಪರಿಷತ್ತಿನ ವತಿಯಿಂದ ಪ್ರತಿ ತಿಂಗಳು ಸಾಹಿತ್ಯ ಸಂವಾದ, ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಅಪ್ರಕಟಿಯಿತ ವಿದ್ವಾಂಸರ ಕೃತಿಗಳ ಪ್ರಕಟಣೆಗೆ ಆದ್ಯತೆ ನೀಡಲಾಗುವುದು. ಸಾಹಿತ್ಯದ ಮೂಲಕ ಸಾಮರಸ್ಯ, ನೈತಿಕತೆ ಹಾಗೂ ಮಾನವೀಯ ಮೌಲ್ಯಗಳನ್ನು ಬೆಳೆಸಲು ಪ್ರಯತ್ನಿಸಲಾಗುವುದು. ಯುಪಿಎಸ್‌ಸಿ ಹಾಗೂ ಕೆಪಿಎಸ್‌ಸಿ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕನ್ನಡ ಮಾಧ್ಯಮದಲ್ಲಿ ಎದುರಿಸುವ ಅಭ್ಯರ್ಥಿಗಳಿಗೆ ಪರಿಷತ್ತಿನ ಮೂಲಕ ತರಬೇತಿ ನೀಡಲು ಉದ್ದೇಶಿಸಲಾಗಿದೆ. ಕನ್ನಡ ಹೋರಾಟಗಾರರು, ಸಾಹಿತಿಗಳು ಹಾಗೂ ಸರ್ಕಾರದ ನಡುವೆ ಸಂಪರ್ಕ ಸೇತುವೆಯಾಗಿ ಪರಿಷತ್ತು ಕಾರ್ಯನಿರ್ವಹಿಸುವಂತೆ ಮಾಡಲಾಗುವುದು ಎಂದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ಮೂಲದ ಸೋಮಶೇಖರ್ ಅವರು ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಪಡೆದು, ಯುಪಿಎಸ್‌ಸಿ ಪರೀಕ್ಷೆಯನ್ನು ಕನ್ನಡದಲ್ಲಿಯೇ ಬರೆದು ಐಎಎಸ್ ಅಧಿಕಾರಿಯಾದ ತಮ್ಮ ಅನುಭವವನ್ನು ಹಂಚಿಕೊಂಡರು.

35 ವರ್ಷಗಳ ಆಡಳಿತ ಸೇವೆಯಲ್ಲಿ ತುಮಕೂರು ಜಿಲ್ಲಾಧಿಕಾರಿ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕ ಸೇರಿದಂತೆ ವಿವಿಧ ಹುದ್ದೆಗಳಲ್ಲಿ ಕಾರ್ಯನಿರ್ವಹಿಸಿದ್ದೇನೆ. ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷನಾಗಿ ಎರಡೂವರೆ ವರ್ಷ ಸೇವೆ ಸಲ್ಲಿಸಿದ್ದೇನೆ ಎಂದರು.

ಗಡಿ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷನಾಗಿದ್ದ ಅವಧಿಯಲ್ಲಿ ಬೀದರ್‌ನ ಕನ್ನಡ ಭವನಕ್ಕೆ 2 ಕೋಟಿ ಹಾಗೂ ಕರ್ನಾಟಕ ಸಾಹಿತ್ಯ ಸಂಘಕ್ಕೆ 50 ಲಕ್ಷ ಅನುದಾನ ಮಂಜೂರು ಮಾಡಲಾಗಿದೆ. ಗಡಿಭಾಗದ 600ಕ್ಕೂ ಹೆಚ್ಚು ಸಂಘ–ಸಂಸ್ಥೆಗಳಿಗೆ ಕನ್ನಡ ಚಟುವಟಿಕೆಗಳಿಗಾಗಿ ಅನುದಾನ ಒದಗಿಸಲಾಗಿದೆ. ಶಾಲೆಗಳಿಗೆ ಡೆಸ್ಕ್, ಕಂಪ್ಯೂಟರ್ ಸೇರಿದಂತೆ ಅಗತ್ಯ ಮೂಲಸೌಕರ್ಯ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ವಿವರಿಸಿದರು.

ಗಡಿಭಾಗದ ಸಾಧಕರನ್ನು ಗುರುತಿಸಲು ಗಡಿನಾಡ ಚೇತನ ಪ್ರಶಸ್ತಿ ಸ್ಥಾಪಿಸಲಾಗಿದೆ. ಕನ್ನಡ ಸಾಹಿತ್ಯ ಪರಿಷತ್ತನ್ನು ಸ್ವಾಯತ್ತ, ಕ್ರಿಯಾಶೀಲ ಹಾಗೂ ಜನಪರ ಸಂಸ್ಥೆಯನ್ನಾಗಿ ರೂಪಿಸುವ ಸಂಕಲ್ಪ ಹೊಂದಿದ್ದೇನೆ. ಸರ್ಕಾರಿ ಸೇವೆಯಿಂದ ನಿವೃತ್ತನಾಗಿದ್ದರೂ ಕನ್ನಡದ ಕೆಲಸದಿಂದ ನಿವೃತ್ತನಾಗುವುದಿಲ್ಲ. ಪ್ರವೃತ್ತಿಗೆ ನಿವೃತ್ತಿ ಇಲ್ಲ' ಎಂದು ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಹಿರಿಯ ವಿದ್ವಾಂಸ ಹುಲಿಕಲ್ ನಟರಾಜ, ಪ್ರೊ.ಜಗನ್ನಾಥ ಹೆಬ್ಬಾಳೆ, ಗುರುನಾಥ ಕೊಳ್ಳೂರ್, ದಾನಿ ಬಾಬುರಾವ, ವಿಜಯಲಕ್ಷ್ಮಿ, ಕೌಟಗೆ, ಸುನಿತಾ ದಾಡಗೆ, ಮಲ್ಲಮ್ಮ ಪಾಟೀಲ, ಪಾರ್ವತಿ ಸೋನಾರೆ ಸೇರಿದಂತೆ ವಿವಿಧ ಕನ್ನಡಪರ ಸಂಘಟನೆಗಳ ಮುಖಂಡರು ಹಾಗೂ ಸಾಹಿತ್ಯಾಸಕ್ತರು ಉಪಸ್ಥಿತರಿದ್ದು, ಸೋಮಶೇಖರ್ ಅವರ ಸ್ಪರ್ಧೆಗೆ ಬೆಂಬಲ ವ್ಯಕ್ತಪಡಿಸಿದರು.

# ಭಾರತ ಮಂಟಪದಲ್ಲಿ ನಡೆದ 10ನೇ ವರ್ಷದ ರಾಷ್ಟ್ರೀಯ ಕೆಂಪೇಗೌಡ ಜಯಂತಿ



ದೆಹಲಿ ಸಿಎಂ ರೇಖಾಗುಪ್ತಾಗೆ ಸನ್ಮಾನ



ದೆಹಲಿ ಸಿಎಂ ರೇಖಾಗುಪ್ತಾಗೆ ಸನ್ಮಾನ



ಕೆಂಪೇಗೌಡ ಜಯಂತಿಯಲ್ಲಿ ಪಾಲ್ಗೊಂಡ ಜನಸ್ತೋಮ



ಕಾರ್ಯಕ್ರಮದಲ್ಲಿ ಹಾಜರಿದ್ದ ವಿವಿಧ ಮಠಾಧೀಶರು, ಗಣ್ಯರು



**ನವದೆಹಲಿಯ ಭಾರತ ಮಂಡಪಂನಲ್ಲಿ ನಡೆದ 10ನೇ ವರ್ಷದ ರಾಷ್ಟ್ರೀಯ ಕೆಂಪೇಗೌಡ ಜಯಂತಿ ಕಾರ್ಯಕ್ರಮದ ದೃಶ್ಯಾವಳಿಗಳು**

ನವದೆಹಲಿ, ಅ.27: ಆತ್ಮೀಯ ಕನ್ನಡ ಬಂಧುಗಳೇ ನಾಡಪ್ರಭು ಕೆಂಪೇಗೌಡ ಪ್ರೇಮಿಗಳೇ... ತಮ್ಮೆಲ್ಲರ ಸಹಕಾರದಿಂದ ನಡೆದ 10ನೇ ವರ್ಷದ ರಾಷ್ಟ್ರೀಯ ಕೆಂಪೇಗೌಡ ಜಯಂತಿ ನೋಡಲು ಜನಸಾಗರವೇ ಹರಿದುಬಂತು. ಕಾರ್ಯಕ್ರಮಕ್ಕೆ ಪರಮಪೂಜ್ಯರ ಆಶೀರ್ವಾದ... ಮುಖ್ಯಮಂತ್ರಿಗಳು.. ಕೇಂದ್ರ ಮಂತ್ರಿಗಳು.. ಶಾಸಕರು.. ಗಣ್ಯಾತಿಗಣ್ಯರ ಆಗಮನಕ್ಕೆ.. ನಿಮ್ಮೆಲ್ಲರ ಪ್ರೀತಿ–ವಿಶ್ವಾಸಕ್ಕೆ ನಾನು ಚಿರಋಣಿ. ಸಂಘ, ಸಂಸ್ಥೆಗಳಿಂದ ವ್ಯಕ್ತಿಗಳು ಬೆಳೆಯುವುದಿಲ್ಲ, ವ್ಯಕ್ತಿಗಳು ಗುರುತಿಸಲ್ಪಡುತ್ತಾರೆ. ವ್ಯಕ್ತಿಗಳ ಹಗಲಿರುಳಿನ ಪರಿಶ್ರಮ ಹಾಗೂ ಸಂಘಟನಾತ್ಮಕ ಕೆಲಸದಿಂದ ಸಂಘ,ಸಂಸ್ಥೆಗಳು ಬೆಳೆಯುತ್ತವೆ... ಕೆಲಸಗಳು ಉಳಿಯುತ್ತವೆ. ಟೀಕೆಗಳು ಸಾಯುತ್ತವೆ ಜೈ ಕರ್ನಾಟಕ ಮಾತೆ ಎಂದು ನವದೆಹಲಿಯ ನಾಡಪ್ರಭು ಕೆಂಪೇಗೌಡ ಫೌಂಡೇಶನ್ ಅಧ್ಯಕ್ಷ ಸಿ.ಎಂ.ನಾಗರಾಜ ಶ್ಲಾಘಿಸಿದ್ದಾರೆ,



ಕೆಂಪೇಗೌಡ ಜಯಂತಿ ಉದ್ಘಾಟನೆ ವೇಳೆ ವೇದಿಕೆಯಲ್ಲಿ ಕಂಡು ಬಂದ ಗಣ್ಯರು.



ಡಾ.ನಿರ್ಮಲಾನಂದನಾಥರಿಂದ ಕಾರ್ಯಕ್ರಮಕ್ಕೆ ಚಾಲನೆ





ದೆಹಲಿ ಸಿಎಂ ಜೊತೆ ಸಂಭಾಷಣಾ ನಿರತ ನಿರ್ಮಲಾನಂದನಾಥರು

## ಬ್ರಹ್ಮಪುತ್ರ ನದಿಗೆ ಚೀನಾ ಅಣೆಕಟ್ಟು: ಪ್ರವಾಹದ ಅಪಾಯ ಹೆಚ್ಚಳ

ನವದೆಹಲಿ, ಅ. 27: ಟಿಬೆಟ್‌ನಲ್ಲಿ ಹರಿಯುವ ಬ್ರಹ್ಮಪುತ್ರ (ಯಾರ್ಲುಂಗ್ ಜಾಂಗ್ಬೋ) ನದಿಗೆ ಚೀನಾ ನಿರ್ಮಿಸುತ್ತಿರುವ ವಿಶ್ವದ ಅತಿದೊಡ್ಡ ಅಣೆಕಟ್ಟು ಯೋಜನೆಯಿಂದ ಈ ಶತಮಾನದಲ್ಲಿ ನೀರಿನ ಹರಿವು ಏರಿಕೆಯಾಗಿ, ಪ್ರವಾಹದ ಅಪಾಯ ಗಣನೀಯವಾಗಿ ಹೆಚ್ಚಾಗಲಿದೆ ಎಂದು ಸ್ವತಃ ಚೀನಾದ ಸಂಶೋಧಕರು ಎಚ್ಚರಿಸಿದ್ದಾರೆ. ಹವಾಮಾನ ಬದಲಾವಣೆಯ ಹಿನ್ನೆಲೆಯಲ್ಲಿ ಜಲ ಯೋಜನೆಗಳ ವಿನ್ಯಾಸದಲ್ಲಿ ಸೂಕ್ತ ಬದಲಾವಣೆಗಳನ್ನು ತರದಿದ್ದರೆ ಭವಿಷ್ಯದಲ್ಲಿ ಭಾರೀ ಅನಾಹುತ ಎದುರಾಗಬಹುದು ಎಂಬ ವಿಶ್ಲೇಷಣಾತ್ಮಕ ವರದಿಗಳು ಇತ್ತೀಚೆಗೆ ಪ್ರಕಟವಾಗಿವೆ.ಚೈನೀಸ್ ಅಕಾಡೆಮಿ ಆಫ್ ಸೈನ್ಸಸ್' ಹಾಗೂ 'ಯುನ್ನಾನ್‌ವಿಶ್ವವಿದ್ಯಾಲಯ'ದ ವಿಜ್ಞಾನಿಗಳು ಮರಗಳ ವಾರ್ಷಿಕ ಬೆಳವಣಿಗೆಯ ಉಂಗುರಗಳನ್ನು ಬಳಸಿ 1325 ರಿಂದ 2020ರವರೆಗಿನ ಸುದೀರ್ಘ ನದಿಹರಿವಿನ ಇತಿಹಾಸವನ್ನು ಪುನರ್‌ರಚಿಸಿ ಕೂಲಂಕಷ ಅಧ್ಯಯನ ನಡೆಸಿದ್ದಾರೆ. ಇದರ ಫಲಿತಾಂಶ ಅಕ್ಟೋಬರ್ 8ರ 'ಚೀನಾ ಸೈನ್ಸ್ ಬುಲೆಟಿನ್'ನಲ್ಲಿ ಪ್ರಕಟವಾಗಿದ್ದು, ಅಕ್ಟೋಬರ್ 26ರಂದು 'ಸೌತ್ ಚೀನಾ ಮಾರ್ನಿಂಗ್ ಪೋಸ್ಟ್' ಸೇರಿದಂತೆ ಪ್ರಮುಖ ಜಾಗತಿಕ ಮಾಧ್ಯಮಗಳಲ್ಲಿ ವರದಿಯಾಗಿದೆ. ಮುಂದಿನ ದಿನಗಳಲ್ಲಿ ನದಿಯ ಹರಿವು ತೀವ್ರವಾಗಿ ಏರಿಕೆಯಾಗಲಿದೆ ಎಂದು ಈ ಅಧ್ಯಯನ ಸ್ಪಷ್ಟಪಡಿಸಿದೆ.



ಭವಿಷ್ಯದಲ್ಲಿ ಹವಾಮಾನ ಬದಲಾವಣೆಯಿಂದಾಗಿ ಮಧ್ಯಮ ಉತ್ಸರ್ಜನಾ ಸನ್ನಿವೇಶದಲ್ಲಿ ವಾರ್ಷಿಕ ಹರಿವು ಶೇ. 20ರಷ್ಟು ಹಾಗೂ ಹೆಚ್ಚಿನ ಉತ್ಸರ್ಜನಾ ಸನ್ನಿವೇಶದಲ್ಲಿ ಶೇ. 29ರಷ್ಟು ಹೆಚ್ಚಾಗುವ ಸಾಧ್ಯತೆಯಿದೆ. ಇಲ್ಲಿ ಸ್ಪಷ್ಟಪಡಿಸಬೇಕಾದ ಮುಖ್ಯ ಅಂಶವೆಂದರೆ, ಕೇವಲ ಅಣೆಕಟ್ಟಿನಿಂದಲೇ ಮುಂದಿನ ಶತಮಾನದಲ್ಲಿ ಪ್ರವಾಹ ಸೃಷ್ಟಿಯಾಗುತ್ತದೆ ಎಂದು ವರದಿ ನಿರ್ಣಯಿಸಿಲ್ಲ. ಬದಲಾಗಿ, ಪ್ರಾಕೃತಿಕವಾಗಿ ಹೆಚ್ಚಾಗುವ ನದಿ ಹರಿವನ್ನು ತಡೆದುಕೊಳ್ಳುವ ನಿಟ್ಟಿನಲ್ಲಿ ಅಣೆಕಟ್ಟಿನ ವಿನ್ಯಾಸವು ಪರಿಸರಕ್ಕೆ ಅನುಗುಣವಾಗಿ ಅತ್ಯಂತ ಭದ್ರವಾಗಿರಬೇಕು ಎಂದು ಸಂಶೋಧಕರು ಎಚ್ಚರಿಸಿದ್ದಾರೆ.

ಜುಲೈ 2025ರಲ್ಲಿ ಚೀನಾ ಸರ್ಕಾರವು ಬ್ರಹ್ಮಪುತ್ರ ನದಿಯ ಅತ್ಯಂತ ಕಡಿದಾದ 'ಗ್ರೇಟ್ ಬೆಂಡ್' ಪ್ರದೇಶದಲ್ಲಿ ಈ ಬೃಹತ್ ಜಲವಿದ್ಯುತ್ ಯೋಜನೆಯ ನಿರ್ಮಾಣವನ್ನು ಅಧಿಕೃತವಾಗಿ ಆರಂಭಿಸಿತು. ಐದು ಸರಣಿ ಜಲವಿದ್ಯುತ್ ಕೇಂದ್ರಗಳನ್ನು ಒಳಗೊಂಡ ಈ ಮಹತ್ವಾಕಾಂಕ್ಷಿ ಯೋಜನೆಗೆ ಅಂದಾಜು 1.2 ಟ್ರಿಲಿಯನ್ ಯುವಾನ್ (ಸುಮಾರು 168 ಬಿಲಿಯನ್ ಡಾಲರ್) ಹೂಡಿಕೆ ಮಾಡಲಾಗುತ್ತಿದೆ. ಹಳೆಯ ಮಾಹಿತಿಗಳಲ್ಲಿ ಯೋಜನಾ ವೆಚ್ಚವನ್ನು 11.67 ಲಕ್ಷ ಕೋಟಿ ರೂಪಾಯಿ ಎಂದು ಲೆಕ್ಕಹಾಕಲಾಗಿತ್ತಾದರೂ, ಚೀನಾ ಸರ್ಕಾರದ ಅಧಿಕೃತ ಪ್ರಕಟಣೆಯಂತೆ ಇದು ಸುಮಾರು 168 ಬಿಲಿಯನ್ ಡಾಲರ್ ಮೌಲ್ಯದ ಯೋಜನೆಯಾಗಿದೆ.ಈ ಬೃಹತ್ ಯೋಜನಾ ಪ್ರದೇಶವು ಭೌಗೋಳಿಕವಾಗಿ ಅತ್ಯಂತ ಸೂಕ್ಷ್ಮ ಹಾಗೂ ಅಸ್ಥಿರವಾಗಿದೆ ಎಂದು ಚೀನೀ ಭೂವಿಜ್ಞಾನಿಗಳು ಕೂಡ ಕಳವಳ ವ್ಯಕ್ತಪಡಿಸಿದ್ದಾರೆ. ಇಲ್ಲಿರುವ 'ಪೈಜೆನ್ ಫಾಲ್ಟ್' ಪ್ರದೇಶದಲ್ಲಿ ಭೂಕಂಪನದ ಭೀತಿ ಸದಾ ಇರುತ್ತದೆ. ಬೃಹತ್ ಅಣೆಕಟ್ಟುಗಳ ನಿರ್ಮಾಣದಿಂದ ಇಳಿಜಾರುಗಳ ಅಸ್ಥಿರತೆ ಹೆಚ್ಚಾಗಿ ಭಾರೀ ಭೂಕುಸಿತ ಉಂಟಾಗುವ ಸಾಧ್ಯತೆಗಳಿವೆ. ಹವಾಮಾನ ಬದಲಾವಣೆಯ ಪ್ರಭಾವ ಮತ್ತು ಭೂಕಂಪನದಂತಹ ನೈಸರ್ಗಿಕ ವಿಕೋಪಗಳು ಒಟ್ಟಿಗೆ ಸಂಭವಿಸಿದರೆ ಪರಿಸ್ಥಿತಿ ಕೈಮೀರಲಿದೆ ಎಂದು ಅಂದಾಜಿಸಲಾಗಿದೆ. ಚೀನಾದ ಈ ಏಕಪಕ್ಷೀಯ ನಡೆಯಿಂದಾಗಿ ನದಿಯ ಕೆಳಹರಿವಿನ ದೇಶಗಳಾದ ಭಾರತ ಮತ್ತು ಬಾಂಗ್ಲಾದೇಶಕ್ಕೆ ತೀವ್ರ ಆತಂಕ ಶುರುವಾಗಿದೆ. ಅಣೆಕಟ್ಟು ನಿರ್ಮಾಣದಿಂದಾಗಿ ನದಿಯ ಸ್ವಾಭಾವಿಕ ಹರಿವಿನಲ್ಲಿ ಏರುಪೇರಾಗುವುದಲ್ಲದೆ, ಕೃಷಿಗೆ ಅತ್ಯವಶ್ಯಕವಾದ ಫಲವತ್ತಾದ ಹೂಳು ತಡೆಹಿಡಿಯಲ್ಪಡುತ್ತದೆ. ಇದು ಈಶಾನ್ಯ ಭಾರತ, ಅದರಲ್ಲೂ ವಿಶೇಷವಾಗಿ ಅರುಣಾಚಲ ಪ್ರದೇಶ ಹಾಗೂ ಅಸ್ಸಾಂನ ಕೃಷಿ, ಜಲಭದ್ರತೆ ಮತ್ತು ಒಟ್ಟಾರೆ ಪರಿಸರ ವ್ಯವಸ್ಥೆಯ ಮೇಲೆ ಗಂಭೀರವಾದ ನಕಾರಾತ್ಮಕ ಪರಿಣಾಮ ಬೀರಲಿದೆ.ಇಷ್ಟೆಲ್ಲಾ ಭೌಗೋಳಿಕ ಮತ್ತು ರಾಜಕೀಯ ಪರಿಣಾಮಗಳಿದ್ದರೂ, ಯೋಜನೆಯ ಕುರಿತು ಚೀನಾ ಯಾವುದೇ ಪಾರದರ್ಶಕತೆ ಕಾಯ್ದುಕೊಂಡಿಲ್ಲ. ಹೀಗಾಗಿ, ನದಿಯ ಜಲವೈಜ್ಞಾನಿಕ ಮಾಹಿತಿಯನ್ನು ಹಂಚಿಕೊಳ್ಳುವುದನ್ನು ತಕ್ಷಣ ಪುನರಾರಂಭಿಸಬೇಕು ಮತ್ತು ಮೇಲ್ಭಾಗದಲ್ಲಿ ನಡೆಯುತ್ತಿರುವ ಯೋಜನೆಗಳ ಸಂಪೂರ್ಣ ತಾಂತ್ರಿಕ ವಿವರಗಳನ್ನು ಒದಗಿಸಬೇಕು ಎಂದು 2026ರ ಆಗಸ್ಟ್‌ನಲ್ಲಿ ಭಾರತವು ಅಧಿಕೃತವಾಗಿ ಚೀನಾವನ್ನು ಒತ್ತಾಯಿಸಿದೆ. ಜಲಭದ್ರತೆಯ ದೃಷ್ಟಿಯಿಂದ ಚೀನಾ ನೆರೆಹೊರೆಯ ದೇಶಗಳೊಂದಿಗೆ ಸಹಕರಿಸಬೇಕಾದ ಅಗತ್ಯವಿದೆ.



ಸಿಎಂ ಡಿ.ಕೆ. ಶಿವಕುಮಾರ್ ಅವರು ಕರ್ನಾಟಕ ಬ್ಯಾಡ್ಮಿಂಟನ್ ಅಸೋಸಿಯೇಷನ್ ವತಿಯಿಂದ ಆಯೋಜಿಸಲಾಗಿದ್ದ ಸಂಸ್ಥೆಯ ವಜ್ರಮಹೋತ್ಸವ ಹಾಗೂ ಇಂಡಿಯಾ ಇಂಟರ್‌ನ್ಯಾಷನಲ್ ಚಾಲೆಂಜ್ ಪಂದ್ಯಾವಳಿಯನ್ನು ಮಂಗಳವಾರ ಸಂಸ್ಥೆಯ ಆವರಣದಲ್ಲಿ ಉದ್ಘಾಟಿಸಿದರು. ಸಂಸ್ಥೆಯ ಅಧ್ಯಕ್ಷ ಮಾಜಿ ಸಚಿವ ಕುಮಾರ್ ಬಂಗಾರಪ್ಪ, ಏಷ್ಯನ್ ಗೇಮ್ಸ್ ಚಿನ್ನದ ಪದಕ ವಿಜೇತೆ ಎಂ ಆರ್ ಪೂವಮ್ಮ ಮತ್ತಿತರರು ಭಾಗವಹಿಸಿದ್ದರು.

## ಚುನಾವಣಾ ಅಕ್ರಮದ ಆರೋಪದ ನಡುವೆ ಇಸ್ರೇಲ್‌ನಲ್ಲಿ ಶೇ.55.7ರಷ್ಟು ಮತದಾನ; ದಶಕಗಳಲ್ಲೇ ಗರಿಷ್ಠ ಪ್ರಮಾಣ

ಜೆರುಸಲೆಮ್: 2026ರ ಇಸ್ರೇಲ್ ಸಾರ್ವತ್ರಿಕ ಚುನಾವಣೆಯಲ್ಲಿ, ಸ್ಥಳೀಯ ಕಾಲಮಾನ ಮಧ್ಯಾಹ್ನ 4 ಗಂಟೆಯ ವೇಳೆಗೆ ಮತದಾನ ಪ್ರಮಾಣವು ಶೇ. 55.7ಕ್ಕೆ ಏರಿಕೆಯಾಗಿದೆ. 1973ರಲ್ಲಿ ಗಂಟೆವಾರು ಮತದಾನದ ಅಂಕಿಅಂಶಗಳನ್ನು ದಾಖಲಿಸಲು ಪ್ರಾರಂಭಿಸಿದ ನಂತರ, ಈ ಸಮಯದ ವೇಳೆಗೆ ದಾಖಲಾದ ಅತಿ ಹೆಚ್ಚಿನ ಮತದಾನ ಇದಾಗಿದೆ. ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು, ದಕ್ಷಿಣ ಪ್ರದೇಶದಲ್ಲಿ ಅರಬ್ ಮತದಾರರು "ಮತಗಟ್ಟೆಗಳತ್ತ ಧಾವಿಸುತ್ತಿದ್ದಾರೆ" ಎಂದು ಎಚ್ಚರಿಸಿದ್ದಾರೆ. 'ಲಿಕುಡ್' (ಖಇಣಾಜ) ಪಕ್ಷದ ಬೆಂಬಲಿಗರಿಗೆ ಉದ್ದೇಶಿಸಿ ಮಾಡಿದ ವಿಡಿಯೋ ಸಂದೇಶವೊಂದರಲ್ಲಿ, "ಅವರು ನಮ್ಮಿಂದ ಚುನಾವಣೆಯನ್ನು ಕದಿಯಲು ಪ್ರಯತ್ನಿಸುತ್ತಿದ್ದಾರೆ" ಎಂದು ಅವರು ಆರೋಪಿಸಿದ್ದಾರೆ. ಮತದಾರರಿಗೆ ಲಂಚ ನೀಡಲು ಹಣ ತುಂಬಿದ ಲಕೋಟೆಗಳೊಂದಿಗೆ ಮೂವರು ವ್ಯಕ್ತಿಗಳನ್ನು ಬಂಧಿಸಿರುವ ಆರೋಪಗಳ ಕುರಿತು ಪ್ರಸ್ತಾಪಿಸಿದ ನೆತನ್ಯಾಹು, "ಇದು ಗಂಭೀರ ವಿಷಯ. ಇದೊಂದು ಅಪರಾಧ. ಅವರು ಪ್ರತಿಯೊಬ್ಬ ವ್ಯಕ್ತಿಯನ್ನೂ ತಲುಪಲಿದ್ದಾರೆ. ನಿಮಗೆ ಎಚ್ಚರಿಕೆ ನೀಡಲಾಗಿದೆ" ಎಂದು ಹೇಳಿದರು. ಅಕ್ಟೋಬರ್ 7ರ ದಾಳಿ ಮತ್ತು ನಂತರ ಗಾಜಾದಲ್ಲಿ ನಡೆದ ಯುದ್ಧದ ಬಳಿಕ, ಇಸ್ರೇಲ್‌ನಲ್ಲಿ ಇಂದು ಮೊದಲ ರಾಷ್ಟ್ರೀಯ ಚುನಾವಣೆ ನಡೆಯುತ್ತಿದೆ. ತೀವ್ರವಾಗಿ ವಿಭಜಿತವಾಗಿರುವ ದೇಶದಲ್ಲಿ, 77 ವರ್ಷದ ಪ್ರಧಾನಿ ಬೆಂಜಮಿನ್ ನೆತನ್ಯಾಹು ಮತ್ತೊಂದು ಅವಧಿಗೆ ಅಧಿಕಾರ ಪಡೆಯಲು ಪ್ರಯತ್ನಿಸುತ್ತಿದ್ದಾರೆ. ಶುಕ್ರವಾರದ ಸಮೀಕ್ಷೆಗಳ ಪ್ರಕಾರ, ನೆತನ್ಯಾಹು ಅವರ ಬಲಪಂಥೀಯ ಮೈತ್ರಿಕೂಟವು, ಮಾಜಿ ಸೇನಾ ಮುಖ್ಯಸ್ಥ ಗಾಡಿ ಐಸೆನ್‌ಕೋಟ್ ನೇತೃತ್ವದ ವಿರೋಧ ಪಕ್ಷದ ಒಕ್ಕೂಟಕ್ಕೆ ಸಮಾನವಾದ ಸ್ಥಾನಗಳನ್ನು ಪಡೆಯುವ ಸಾಧ್ಯತೆಯಿದೆ. ಈ ಚುನಾವಣೆಯಲ್ಲಿ ಸುಮಾರು ಐದು ಲಕ್ಷ ಜನರು ಮೊದಲ ಬಾರಿಗೆ ಮತ ಚಲಾಯಿಸುತ್ತಿದ್ದಾರೆ. ಬಹುತೇಕ ಸಮೀಕ್ಷೆಗಳು, 120 ಸದಸ್ಯ ಬಲದ 'ನೆಸೆಟ್' (ಇಸ್ರೇಲ್ ಸಂಸತ್ತು) ನಲ್ಲಿ ನೆತನ್ಯಾಹು ಅವರ ಮೈತ್ರಿಕೂಟವು ಬಹುಮತವನ್ನು ಕಳೆದುಕೊಳ್ಳಲಿದೆ ಎಂದು ಸೂಚಿಸುತ್ತವೆ; ಆದರೆ, ಸರ್ಕಾರ ರಚಿಸಲು ಅಗತ್ಯವಿರುವ 61 ಸ್ಥಾನಗಳನ್ನು ಪಡೆಯಲು ವಿರೋಧ ಪಕ್ಷದ ಒಕ್ಕೂಟವೂ ವಿಫಲವಾಗಬಹುದು. ನೆತನ್ಯಾಹು ಅವರನ್ನು ಪಾಲಿಗೆ, ಇದು ಕೇವಲ ರಾಜಕೀಯ ವಿಷಯವಷ್ಟೇ ಅಲ್ಲ, ವೈಯಕ್ತಿಕವಾಗಿಯೂ ನಿರ್ಣಾಯಕವಾಗಿದೆ. ಅವರ ವಿರುದ್ಧ ಮೂರು ಪ್ರಕರಣಗಳಲ್ಲಿ ಭ್ರಷ್ಟಾಚಾರದ ಆರೋಪಗಳಿವೆ. ಆದಾಗ್ಯೂ, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ನೆತನ್ಯಾಹು ಅವರಿಗೆ ಕ್ಷಮಾದಾನ ನೀಡುವಂತೆ ಕೋರಿ, ಇಸ್ರೇಲ್ ಅಧ್ಯಕ್ಷ ಐಸಾಕ್ ಹರ್ಜೋಗ್ ಅವರಿಗೆ ಪತ್ರ ಬರೆದಿದ್ದಾರೆ.

## ಕತಾರ್‌ನ ಅಮೀರ್, ಇರಾನ್ ಅಧ್ಯಕ್ಷರೊಂದಿಗೆ ಮಾತುಕತೆ ಆಯೋಜಿಸಿದ ಪುಟಿನ್

ಮಾಸ್ಕೋ : ರಷ್ಯಾದ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಮಾಸ್ಕೋ ಅನಿಲ ಶೃಂಗಸಭೆಯಲ್ಲಿ ಕತಾರ್‌ನ ಅಮೀರ್ ಶೇಖ್ ತಮೀಮ್ ಬಿನ್ ಹಮದ್ ಅಲ್ ಥಾನಿ ಮತ್ತು ಇರಾನ್ ಅಧ್ಯಕ್ಷ ಮಸೌದ್ ಪೆಜೆಶ್ಕಿಯಾನ್ ಅವರೊಂದಿಗೆ ಮಾತುಕತೆಗಳನ್ನು ಆಯೋಜಿಸುತ್ತಿದ್ದಾರೆ. ಇದಕ್ಕೂ ಮೊದಲು, ಮಾಸ್ಕೋದಲ್ಲಿ ನಡೆದ ಇಂಧನ ವೇದಿಕೆಯ ಹೊರತಾಗಿ ಶೇಖ್ ತಮೀಮ್ ಪೆಜೆಶ್ಕಿಯಾನ್ ಅವರನ್ನು ಭೇಟಿಯಾದರು ಎಂದು ಇರಾನ್ ರಾಜ್ಯ ಮಾಧ್ಯಮ ವರದಿ ಮಾಡಿದೆ. ಇಬ್ಬರು ನಾಯಕರು "ಟೆಹ್ರಾನ್ ಮತ್ತು ದೋಹಾ ನಡುವಿನ ಪ್ರಸ್ತುತ ಸಂಬಂಧಗಳ ಸ್ಥಿತಿಯನ್ನು ಪರಿಶೀಲಿಸಿದರು ಮತ್ತು ರಾಜಕೀಯ ಮತ್ತು ಆರ್ಥಿಕ ಸಂಬಂಧಗಳನ್ನು ವಿಸ್ತರಿಸುವ ಮತ್ತು ದ್ವಿಪಕ್ಷೀಯ ಸಹಕಾರದ ಮಟ್ಟವನ್ನು ಹೆಚ್ಚಿಸಲು ಅಸ್ತಿತ್ವದಲ್ಲಿರುವ ಸಾಮರ್ಥ್ಯಗಳನ್ನು ಬಳಸಿಕೊಳ್ಳುವ ಮಹತ್ವವನ್ನು ಒತ್ತಿ ಹೇಳಿದರು" ಎಂದು ಇರಾನ್ ರಾಜ್ಯ ದೂರದರ್ಶನ ಮಂಗಳವಾರ ವರದಿ ಮಾಡಿದೆ.

## ಎಲ್ಲಾ ದೇಶಗಳು ಹೌತಿಗಳನ್ನು ಭಯೋತ್ಪಾದಕ ಸಂಘಟನೆ ಎಂದು ಘೋಷಿಸಬೇಕು: ಸೌದಿ ರಾಯಭಾರಿ ಆಗ್ರಹ

ನ್ಯೂಯಾರ್ಕ್: ಅಮೆರಿಕಕ್ಕೆ ಸೌದಿ ಅರೇಬಿಯಾದ ರಾಯಭಾರಿ ರಾಜಕುಮಾರಿ ರೀಮಾ ಬಿಂಟ್ ಬಂದರ್ ಅಲ್ ಸೌದ್, ಹೌತಿಗಳನ್ನು ಸೋಲಿಸಲು ಜಾಗತಿಕ ಒಕ್ಕೂಟಕ್ಕೆ ಕರೆ ನೀಡಿದ್ದಾರೆ, ಈ ಗುಂಪು ಯೆಮೆನ್‌ನಿಂದ ಆಚೆಗೆ ವ್ಯಾಪಿಸಿರುವ ಬೆಳೆಯುತ್ತಿರುವ "ಭಯೋತ್ಪಾದಕ ಜಾಲ" ಎಂದು ಎಚ್ಚರಿಸಿದ್ದಾರೆ. ಮಂಗಳವಾರ ದಿ ನ್ಯೂಯಾರ್ಕ್ ಟೈಮ್ಸ್‌ನಲ್ಲಿ "ಹೌತಿಗಳು ಏನು ಮಾಡುತ್ತಾರೆ ಎಂಬುದಕ್ಕೆ ಯಾವುದೇ ಮಿತಿಯಿಲ್ಲ" ಎಂಬ ಶೀರ್ಷಿಕೆಯ ಅಭಿಪ್ರಾಯ ಲೇಖನದಲ್ಲಿ, ಹೌತಿಗಳನ್ನು "ವಿದೇಶಿ ಭಯೋತ್ಪಾದಕ ಸಂಘಟನೆ" ಎಂದು ಗೊತ್ತುಪಡಿಸುವಲ್ಲಿ ಯುನೈಟೆಡ್ ಸ್ಟೇಟ್ಸ್ ಸರಿಯಾದ ನಿರ್ಧಾರವನ್ನು ತೆಗೆದುಕೊಂಡಿದೆ ಮತ್ತು ಎಲ್ಲಾ ದೇಶಗಳು ಅದನ್ನು ಅನುಸರಿಸಬೇಕು ಎಂದು ರಾಯಭಾರಿ ಹೇಳಿದರು. "ಇರಾಕ್‌ನಲ್ಲಿ ಮೊಸುಲ್ ಅನ್ನು ವಶಪಡಿಸಿಕೊಂಡು ಕ್ಯಾಲಿಫೇಟ್ ಅನ್ನು ಘೋಷಿಸುವ ಮೊದಲು ಹೌತಿಗಳು ಇಂದು ಐಸಿಸ್ ಆಗಿದ್ದರು: ಜಗತ್ತು ಕಡಿಮೆ ಅಂದಾಜು ಮಾಡಿದ ಭಯೋತ್ಪಾದಕ ಚಳುವಳಿ" ಎಂದು ಅವರು ಬರೆದಿದ್ದಾರೆ. ಗುಂಪಿನ ಮಿಲಿಟರಿ ಸಾಮರ್ಥ್ಯಗಳನ್ನು ಕೆಡವಲು, ಅದರ ಹಣಕಾಸು ಕಡಿತಗೊಳಿಸಲು, ಶಸ್ತ್ರಾಸ್ತ್ರಗಳ ಸಾಗಣೆಯನ್ನು ಪ್ರತಿಬಂಧಿಸಲು ಮತ್ತು ಯೆಮೆನ್‌ನ ಅಂತರರಾಷ್ಟ್ರೀಯವಾಗಿ ಗುರುತಿಸಲ್ಪಟ್ಟ ಸರ್ಕಾರವನ್ನು ಬಲಪಡಿಸಲು ಸಂಘಟಿತ ಅಂತರರಾಷ್ಟ್ರೀಯ ಅಭಿಯಾನಕ್ಕೆ ರಾಜಕುಮಾರಿ ರೀಮಾ ಕರೆ ನೀಡಿದ್ದಾರೆ.